# State of play

## Upalokayukta demands suo-moto case over building violations after reviewing work at various government offices


Naveen.Menezes
@timesgroup.com

TWEETS @BangaloreMIRROR

On the occasion of Vigilance Awareness Week, Upalokayukta Justice BS Patil along with a team of officers visited several government offices for reviewing the work of public servants. The offices he visited include: BBMP's Malleswaram division (West), revenue office, Gandhi Nagar division, Additional Commissioner's office, Yelahanka zone, BBMP's zonal commissioner's office, South zone among others.

At the joint commissioner's office in Malleshwaram, the Upalokayukta observed that the two assistant directors of town planning division were not inspecting each and every building under construction or to certify them before the commencement of construction due to paucity of staff. They were initiating actions only in cases where a complaint is received regarding violation of setbacks or other building byelaws.

"No case is registered on their own after physical verification of the actual violations, in the absence of any complaint. As per Section 248 of the Bruhat Bengaluru Mahanagara Palike Act, the Assistant Directors of Town Planning are duty-bound to take action in respect of constructions of buildings in violation of building plan and building bylaws, irrespective of any complaint filed," Justice Patil said, directing the town planning division to register suo-motu case with respect to building violations and issue notice in fifteen days.



He will be visiting the office of the Additional Commissioner of BBMP (Rajarajeshwarinagar zone) on Saturday

**Amongst the offices he visited are: Palike's Malleswaram division (West), Revenue Office, Gandhi Nagar division and others**

He had similar observations in other offices of the BBMP too.

In the Revenue Officer, Gandhinagar Sub Division, BBMP and the Upalokayukta offices, it was found that no action was taken on the transfer of Katha applications within a period of 30 days as prescribed under the Karnataka Sakala Services Act. Justice Patil directed the concerned officers to furnish details of applications for transfer of khata received during the months of August, September and October 2021 and the time taken for processing and issuing khata certificates.

The Upalokayukta will be visiting the office of the Additional Commissioner, BBMP, Rajarajeshwarinagar Zone, Bengaluru on Saturday.

# ಉಪ ಲೋಕಾಯುಕ್ತರ ಭೇಟಿ: ಪರಿಶೀಲನೆ

ಪ್ರಜಾವಾಣಿ ವಾರ್ತೆ



ಉಪ ಲೋಕಾಯುಕ್ತ ಬಿ.ಎಸ್.ಪಾಟೀಲ್ ಅವರು ವಿವಿಧ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದರು. ಪಾಲಿಕೆ ಜಂಟಿ ಆಯುಕ್ತ ಎಸ್.ನಾಗರಾಜು ಹಾಗೂ ಅಧಿಕಾರಿಗಳು ಇದ್ದರು

ರಾಜರಾಜೇಶ್ವರಿ ನಗರ: 'ಒಳಚರಂಡಿ, ಕುಡಿಯುವ ನೀರು, ರಸ್ತೆ ಸೇರಿದಂತೆ ವಿವಿಧ ಕಾಮಗಾರಿಗಳು ಕಳಪೆ ಆಗದಂತೆ ಪಾಲಿಕೆ ಅಧಿಕಾರಿಗಳು ನಿಗಾ ವಹಿಸಬೇಕು' ಎಂದು ಕರ್ನಾಟಕ ಉಪ ಲೋಕಾಯುಕ್ತ ಬಿ.ಎಸ್.ಪಾಟೀಲ್ ಸೂಚಿಸಿದರು.

ರಾಜರಾಜೇಶ್ವರಿ ನಗರ ವಲಯದ ಪಾಲಿಕೆ ಕಚೇರಿಗೆ ದಿಢೀರ್ ಭೇಟಿ ನೀಡಿ, ಅಲ್ಲಿನ ಕಾರ್ಯವೈಖರಿಯನ್ನು ಪರಿಶೀಲಿಸಿದರು.

ಬಳಿಕ ಅವರು, 'ರಾಜರಾಜೇಶ್ವರಿ ನಗರ ಕ್ಷೇತ್ರದಲ್ಲಿ ಕಳಪೆ ಕಾಮಗಾರಿ, ಸ್ವಚ್ಛತೆ, ಕಸದ ಸಮಸ್ಯೆ, ಮಳೆ ಬಂದಾಗ ರಾಜಕಾಲುವೆ ನೀರು ಹಾಗೂ ಒಳಚರಂಡಿ ನೀರು ಬಡಾವಣೆಯ ಮನೆಗಳಿಗೆ ನುಗ್ಗಿ ತೊಂದರೆಯಾಗುತ್ತಿರುವ ಬಗ್ಗೆ ಹೆಚ್ಚು ವರದಿಯಾಗುತ್ತಿವೆ. ಇನ್ನು ಮುಂದೆ ಈ ರೀತಿ ಆಗದಂತೆ ಅಧಿಕಾರಿಗಳು ಚುರುಕಾಗಿ ಕಾರ್ಯನಿರ್ವಹಿಸಬೇಕು' ಎಂದರು.

'ಪ್ರತಿ ಮನೆಯಿಂದ ಹಸಿ, ಒಣ ಕಸ ಸಂಗ್ರಹಿಸಬೇಕು. ಈ ಬಗ್ಗೆ ಆಗಾಗ್ಗೆ ಜಾಗೃತಿ ಮೂಡಿಸಬೇಕು. ಕಸ ಸಂಗ್ರಹಣೆ ವಾಹನಕ್ಕೆ ಕಸ ನೀಡದ ಅಪಾರ್ಟ್‌ಮೆಂಟ್ ಸಮುಚ್ಛಯ ಹಾಗೂ ಮನೆಗಳನ್ನು ಗುರುತಿಸಿ, ದಂಡ ವಿಧಿಸಬೇಕು' ಎಂದು ಸೂಚಿಸಿದರು.

'ಅನಧಿಕೃತ ಹಾಗೂ ವಾಸಯೋಗ್ಯವಲ್ಲದ ಕಟ್ಟಡಗಳನ್ನು ಗುರುತಿಸಬೇಕು. ಮಾಲೀಕರಿಗೆ ನೋಟಿಸ್ ನೀಡಿ ತೆರವುಗೊಳಿಸುವ ಕೆಲಸ ಮಾಡಬೇಕು' ಎಂದೂ ಹೇಳಿದರು.

'ಮಾಗಡಿ ರಸ್ತೆ, ವಿಶ್ವೇಶ್ವರಯ್ಯ ಬಡಾವಣೆ ಮುಖ್ಯರಸ್ತೆ, ಲಗ್ಗೆರೆ, ಪೀಣ್ಯ, ಗೊರಗುಂಟೆ ಪಾಳ್ಯ, ವರ್ತುಲ ರಸ್ತೆ ಸೇರಿದಂತೆ ಜಾಲಹಳ್ಳಿ, ಮತ್ತಿಕೆರೆ ವ್ಯಾಪ್ತಿಯಲ್ಲಿ ಹಾಳಾಗಿರುವ ರಸ್ತೆಗಳನ್ನು ದುರಸ್ತಿಪಡಿಸಿ, ಜನರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು' ಎಂದರು.

ಪಾಲಿಕೆ ಉಪ ಆಯುಕ್ತ ಬಿ.ಎಚ್. ಮಲ್ಲಿಕಾರ್ಜುನ್, ಮುಖ್ಯ ಎಂಜಿನಿಯರ್ ನರಸರಾಮರಾವ್ ಸೇರಿದಂತೆ ವಿವಿಧ ವಿಭಾಗಗಳ ಅಧಿಕಾರಿಗಳು ಹಾಜರಿದ್ದರು.

### ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಕಿವಿಮಾತು

# ಅನ್ಯಾಯವನ್ನು ಗಟ್ಟಿಯಾಗಿ ಪ್ರಶ್ನಿಸಿ

ಪ್ರಜಾವಾಣಿ ವಾರ್ತೆ

ಕಲಬುರ್ಗಿ: 'ಕಲ್ಯಾಣ ಕರ್ನಾಟಕ ಭಾಗಕ್ಕೆ ಆಗುತ್ತಿರುವ ಪ್ರಾದೇಶಿಕ ಅನ್ಯಾಯದ ಬಗ್ಗೆ ಧ್ವನಿ ಎತ್ತುವ ಪ್ರವೃತ್ತಿಯನ್ನು ಜನ ಬೆಳೆಸಿಕೊಳ್ಳಬೇಕು. ನಿಮಗೆ ಏನು ಬೇಕಾಗಿದೆ, ಏನು ಬೇಡಾಗಿದೆ ಎಂಬ ಬಗ್ಗೆ ನಮಗೆ ಮನವಿ ನೀಡಿದರೆ ಸರ್ಕಾರದ ಮಟ್ಟದಲ್ಲಿ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ' ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರು ಕಿವಿಮಾತು ಹೇಳಿದರು.

ನಗರದಲ್ಲಿ ಶನಿವಾರ ಜಿಲ್ಲಾಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, 'ಮನೆಯಲ್ಲಿರುವ ಮಕ್ಕಳಲ್ಲಿ ಯಾವ ಮಗು ನಿಶಕ್ತವಾಗಿರುತ್ತದೋ ಅದಕ್ಕೇ ತಾಯಿ ಹೆಚ್ಚಿನ ಮುತುವರ್ಜಿ ನೀಡುತ್ತಾಳೆ. ಅಭಿವೃದ್ಧಿಯಲ್ಲಿ ತಾರತಮ್ಯ ಅನುಭವಿಸಿರುವ ಈ ಭಾಗಕ್ಕೆ ಇಂಥದ್ದೇ ಕಾಳಜಿ ಸರ್ಕಾರದಿಂದ ಸಿಗಬೇಕಿದೆ. ಈ ಕೆಲಸ ಅಧಿಕಾರಿಗಳಿಂದಲೇ ಆರಂಭವಾಗಬೇಕು. ಈ ಭಾಗದ ಕೊರತೆಗಳ ಬಗ್ಗೆ ಪಟ್ಟಿ ಮಾಡಿ ಪ್ರಸ್ತಾವ ಸಲ್ಲಿಸುವುದು ಯಾವಾಗ' ಎಂದೂ ಅವರು ಪ್ರಶ್ನಿಸಿದರು.

'371-ಜೆ ಮೀಸಲಾತಿ ಅಡಿಯಲ್ಲಿ ನೌಕರಿ ಪಡೆದುಕೊಂಡ ಎಷ್ಟು ಜನರು ನಿಮ್ಮ ಜವಾಬ್ದಾರಿಯನ್ನು ಪ್ರಾಮಾಣಿಕತೆಯಿಂದ ನಿರ್ವಹಿಸಿದ್ದೀರಿ ಯೋಚಿಸಿ. ನೌಕರಿ ಪಡೆದು ಸುಮ್ಮನೆ ಕುಳಿತರೆ ಹಿಂದುಳಿದ ಭಾಗವನ್ನು ಸುಧಾರಣೆ ಮಾಡುವುದು ಯಾರು? ನೀವು ಮೀಸಲಾತಿಗೇ ಅನ್ಯಾಯ ಮಾಡಿದಂತೆ ಅಲ್ಲವೇ' ಎಂದೂ ನ್ಯಾಯಮೂರ್ತಿ ಬಿಸಿಮುಟ್ಟಿಸಿದರು.

'ಲೋಕಾಯುಕ್ತ ಪ್ರಕರಣಗಳಲ್ಲಿ ಎರಡು ವಿಧಗಳಿವೆ. ಯಾವುದೇ ವ್ಯಕ್ತಿ ತನಗೆ ಆದ ಅನ್ಯಾಯ ಅಥವಾ ಸಮಸ್ಯೆ ಬಗ್ಗೆ ದೂರು ನೀಡುವುದು ಮತ್ತು ಭ್ರಷ್ಟಾಚಾರ ಮಾಡುವವರ ವಿರುದ್ಧ ಆಪಾದನೆ ಕೇಸ್ ಹಾಕುವುದು. ಈ ಎರಡನ್ನೂ ಜನ ಸಮರ್ಥವಾಗಿ ಬಳಸಿಕೊಳ್ಳಬೇಕು. ಯಾವುದೇ ಅಧಿಕಾರಿ ಮೇಲೆ ಭ್ರಷ್ಟಾಚಾರದ ಕೇಸ್ ದಾಖಲಾದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತದೆ' ಎಂದರು.

'ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ ಹಾಗೂ ಬಯಲುಶೌಚ ನಿರ್ಮೂಲನೆ ಬಗ್ಗೆ ಗಂಭೀರ ಕ್ರಮ ಕೈಗೊಳ್ಳಬೇಕು. ಆಯಾ ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಸದಸ್ಯರು ಸೇರಿಕೊಂಡು ಜನರ ಬೇಕುಗಳಿಗೆ ಸ್ಪಂದಿಸಬೇಕು. ಇದರಲ್ಲಿ ನಿರ್ಲಕ್ಷ್ಯ ತೋರಿದರೆ ಸಂಬಂಧಿಸಿದ ಅಧಿಕಾರಿ ಹಾಗೂ ಜನಪ್ರತಿನಿಧಿಗಳನ್ನೇ ಹೊಣೆ ಮಾಡಲಾಗುವುದು' ಎಂದೂ ಅವರು ಎಚ್ಚರಿಸಿದರು.

**ಊರಿಗೊಂದು ಕೆರೆ ಇರಲಿ:** ಪ್ರತಿ ಹಳ್ಳಿಯಲ್ಲೂ ಒಂದೊಂದು ಕೆರೆ ಇರುವಂತೆ ನೋಡಿಕೊಳ್ಳುವುದು ಸಂಬಂಧಿತ ಇಲಾಖೆಗಳ ಜವಾಬ್ದಾರಿ. ಕೆರೆ ಇಲ್ಲದ ಕಡೆ ಪ್ರಸ್ತಾವ ಸಲ್ಲಿಸಿ ಮಂಜೂರು ಮಾಡಿಸಿಕೊಳ್ಳಿ. ಒತ್ತುವರಿಯಾದ ಕೆರೆ, ಹೂಳುತುಂಬಿದ ಕೆರೆ, ಜೀರ್ಣೋದ್ಧಾರ ಕೆಲಸದ ಬಗ್ಗೆಯೂ ನಮಗೆ ಮಾಹಿತಿ ನೀಡಬೇಕು' ಎಂದರು.

ಕೋವಿಡ್ ನಿಯಂತ್ರಣಕ್ಕೆ ಜಿಲ್ಲೆಯಲ್ಲಿ ಕೈಗೊಂಡ ಕ್ರಮಗಳು ಸಮಾಧಾನಕರವಾಗಿವೆ. ಹಾಗೆಂದು ಮೈಮರೆಯಬೇಡಿ. ಸಂಭಾವ್ಯ ಮೂರನೇ ಅಲೆ ನಿಯಂತ್ರಣಕ್ಕೆ ಯಾವಾಗಲೂ ಸಿದ್ಧವಾಗಿರಬೇಕು. ಈ ಬಗ್ಗೆ ಗ್ರಾಮ ಮಟ್ಟದ ಆರೋಗ್ಯ ಸಿಬ್ಬಂದಿಗೆ ತರಬೇತಿ ನೀಡಬೇಕು' ಎಂದೂ ಸಲಹೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸಿಮಿ ಮರಿಯಮ್ ಜಾರ್ಜ್, ಪಾಲಿಕೆ ಆಯುಕ್ತ ಸ್ನೇಹಲ್ ಸುಧಾಕರ ಲೋಖಂಡೆ, ಲೋಕಾಯುಕ್ತ ಎಸ್.ಪಿ. ಸತೀಶ ಎಸ್. ಚಿಟಗುಬ್ಬಿ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.



ಕಲಬುರ್ಗಿಯಲ್ಲಿ ಶನಿವಾರ ನಡೆದ ಜಿಲ್ಲಾಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯಲ್ಲಿ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಮಾತನಾಡಿದರು. ವಿ.ವಿ.ಜ್ಯೋತ್ಸ್ನಾ, ಡಾ.ದಿಲೀಶ್ ಶಶಿ, ಸ್ನೇಹಲ್ ಸುಧಾಕರ ಲೋಖಂಡೆ ಇದ್ದರು

**ಅಂಕಿ-ಅಂಶಗಳು**

| | |
|---|---|
| **52,438** ವೈಯಕ್ತಿಕ ಶೌಚಾಲಯ ಗುರಿ | **48,218** ಇದುವರೆಗೆ ನಿರ್ಮಿಸಿದ ಶೌಚಾಲಯ |
| **9,000** ಶೌಚಾಲಯಕ್ಕೆ ಬೇಡಿಕೆ ಇಟ್ಟ ಕುಟುಂಬ | **445** ಜಿಲ್ಲೆಯ ಶುದ್ಧ ನೀರಿನ ಘಟಕಗಳು |

> ಮೂರನೇ ಅಲೆ ತಡೆಗಟ್ಟಲು ಜಿಮ್ಸ್ ಆಸ್ಪತ್ರೆಯಲ್ಲಿ 100 ಹಾಸಿಗೆಗಳ ಘಟಕ ಸ್ಥಾಪಿಸಿದ್ದು, ತಾಲ್ಲೂಕು ಆಸ್ಪತ್ರೆಯಲ್ಲಿ ಪ್ರತ್ಯೇಕ 40 ಹಾಸಿಗೆಯ ನಿಗಾ ವಾರ್ಡ್ ಸ್ಥಾಪಿಸಲಾಗಿದೆ
>
> ವಿ.ವಿ.ಜ್ಯೋತ್ಸ್ನಾ, ಜಿಲ್ಲಾಧಿಕಾರಿ

> ನರೇಗಾ ಮತ್ತು ಜಲ ಜೀವನ್ ಮಿಷನ್ ಯೋಜನೆಯಡಿ ಪಾಳುಬಿದ್ದಿದ್ದ 100 ಕಲ್ಯಾಣಿಗಳನ್ನು ಪುನಶ್ಚೇತನ ಮಾಡಲಾಗುತ್ತಿದೆ. ಪ್ರತಿ ಹಳ್ಳಿಯಲ್ಲಿ ಕೆರೆ ನಿರ್ಮಾಣಕ್ಕೆ ಸರ್ಕಾರ ನಿರ್ದೇಶನ ಬಂದಿದ್ದು, ಕ್ರಿಯಾ ಯೋಜನೆ ರೂಪಿಸಲಾಗುವುದು
>
> ಡಾ.ದಿಲೀಶ್ ಶಶಿ
>
> ಸಿಇಒ, ಜಿಲ್ಲಾ ಪಂಚಾಯಿತಿ

## ಪತ್ರಕರ್ತರಿಗೆ ಮಾಹಿತಿ ಪುಸ್ತಕ ಕೊಡದ ಜಿಲ್ಲಾಡಳಿತ...!

# 3ನೇ ಕೋವಿಡ್ ಅಲೆ ತಡೆಗೆ ಯುದ್ಧೋಪಾದಿ ಕಾರ್ಯಾಚರಣೆಗೆ ಸೂಚನೆ












KALABURAGI ಸಂಯುಕ್ತ ಕರ್ನಾಟಕ

22 ಆಗಸ್ಟ್ 2021
ಭಾನುವಾರ
ಕಲಬುರಗಿ




### ಅಧಿಕಾರಿಗಳೊಂದಿಗೆ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ್ ಸಭೆ ★ ಭ್ರಷ್ಟಾಚಾರ ಎಸಗಿದ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ

# ಬಯಲು ಬಹಿರ್ದೆಸೆ ತಡೆಯದಿದ್ದರೆ ಇಓಗಳ ವಿರುದ್ಧ ಕೇಸ್

ಸಂ.ಕ. ಸಮಾಚಾರ ಕಲಬುರಗಿ

ಭ್ರಷ್ಟಾಚಾರದಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಕರ್ನಾಟಕ ಉಪಲೋಕಾಯುಕ್ತ, ನ್ಯಾ. ಬಿ.ಎಸ್.ಪಾಟೀಲ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಅವರು ಮಾತನಾಡಿದರು.

ಲೋಕಾಯುಕ್ತ ಸಂಸ್ಥೆಯ ಅಗತ್ಯತೆ ಹಾಗೂ ಕಾರ್ಯಗಳ ಬಗ್ಗೆ ಪ್ರಸ್ತಾಪಿಸಿದ ಅವರು, ಕೇಸುಗಳಲ್ಲಿ ದೂರು ಮತ್ತು ಆಪಾದನೆ ಎಂಬ ಎರಡು ವಿಧ ಇವೆ. ತನ್ನ ಸಮಸ್ಯೆ ಅಥವಾ ತನಗೆ ಅನ್ಯಾಯವಾದಲ್ಲಿ ಅಂತಹ ವ್ಯಕ್ತಿ ದೂರು ನೀಡಬಹುದು. ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರ, ಲೋಪ ಮುಂತಾದವುಗಳ ವಿರುದ್ಧ ಆಪಾದನೆಯ ಕೇಸು ಹಾಕಬಹುದಾಗಿದೆ ಎಂದು ಅವರು ಹೇಳಿದರು.

ಬಹುತೇಕ ಹಳ್ಳಿಗಳಲ್ಲಿ ಇನ್ನೂ ಶೌಚಾಲಯಗಳನ್ನು ಬಳಸದೆ, ಬಯಲು ಬಹಿರ್ದೆಸೆಗೆ ಹೋಗುತ್ತಾರೆ ಎಂದು ಕೆಂಡಕಾರಿದ ಉಪಲೋಕಾಯುಕ್ತರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ತಮ್ಮ ತಾಲ್ಲೂಕಿನ 10 ಗ್ರಾಮ ಪಂಚಾಯತಿಗಳನ್ನು ಬಯಲು ಬಹಿರ್ದೆಸೆ ಮುಕ್ತ ಗ್ರಾಮವನ್ನಾಗಿ ಶ್ರಮಿಸಬೇಕು ಎಂದರು. ಬಯಲು ಬಹಿರ್ದೆಸೆ ಹೋಗುವುದನ್ನು ತಡೆಯದಿದ್ದರೆ ಇಓಗಳ ವಿರುದ್ಧ ಕೇಸ್ ಹಾಕಲಾಗುವುದು ಎಂದು ಎಚ್ಚರಿಸಿದರು.



ಕಲಬುರಗಿಯಲ್ಲಿ ಶನಿವಾರ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ್ ಅಧ್ಯಕ್ಷತೆಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

10 ಗ್ರಾಮ ಪಂಚಾಯ್ತಿಗಳ ಪ್ರತಿಯೊಂದು ಹಳ್ಳಿಗಳಲ್ಲಿ ಎಷ್ಟು ಜನ ಫಲಾನುಭವಿಗಳಿದ್ದಾರೆ. ಎಷ್ಟು ಜನ ಶೌಚಾಲಯ ಕಟ್ಟಿಸಿಕೊಂಡಿದ್ದಾರೆ. ಎಷ್ಟು ಜನ ಕಟ್ಟಿಸಿಕೊಂಡಿಲ್ಲ. ಕಟ್ಟಿಸಿಕೊಂಡವರು ಎಷ್ಟು ಜನ ಬಳಕೆ ಮಾಡುತ್ತಾರೆ, ಎಷ್ಟು ಜನ ಬಳಕೆ ಮಾಡುತ್ತಿಲ್ಲ ಹಾಗೂ ಬಳಕೆ ಮಾಡದಂಥವರ ವಿರುದ್ಧ ಯಾವ ಕ್ರಮಕೈಗೊಂಡಿದ್ದೀರಾ ಎಂಬ ಬಗ್ಗೆ ಸಂಪೂರ್ಣ ವರದಿ ನೀಡಬೇಕು ಎಂದು ಅವರು ತಾಕೀತು ಮಾಡಿದರು.

ಕಲಬುರಗಿ ಜಿಲ್ಲೆಯಲ್ಲಿ ಕೆರೆಗಳ ಸಂಖ್ಯೆ, ಅತಿಕ್ರಮಣ, ತೆರವು ಹಾಗೂ ಜೀರ್ಣೋದ್ಧಾರಕ್ಕೆ ತೆಗೆದುಕೊಂಡ ಕ್ರಮಗಳ ಬಗ್ಗೆ ವರದಿ ಸಲ್ಲಿಸುವಂತೆ ಜಿಲ್ಲಾಡಳಿತಕ್ಕೆ ನ್ಯಾ. ಬಿ. ಎಸ್. ಪಾಟೀಲ ಸೂಚಿಸಿದರು.

ಜಿಪಂ ಸಿ.ಇ.ಓ. ಡಾ.ದಿಲೀಷ್ ಶಶಿ ಅವರು, ಜಿಲ್ಲೆಯಾದ್ಯಂತ ಹಾಳುಬಿದ್ದಿದ್ದ 100 ಕಲ್ಯಾಣಿಗಳಲ್ಲಿ ಗುರುತಿಸಿ, ಪುನಶ್ಚೇತನ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಇದೂವರೆಗೆ 40 ಕಲ್ಯಾಣಿಗಳು ಪುನಶ್ಚೇತನದ ಪರಿಣಾಮ ನೀರಿನಿಂದ ಮೈದುಂಬಿಕೊಂಡಿವೆ. ಇದಲ್ಲದೆ ಪ್ರತಿ ಹಳ್ಳಿಯಲ್ಲಿ ಕೆರೆ ನಿರ್ಮಾಣಕ್ಕೆ ಸರ್ಕಾರ ನಿರ್ದೇಶನ ಬಂದಿದ್ದು, ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನಕ್ಕೆ ತರಲಾಗುವುದು ಎಂದರು.


2021-22ನೇ ಸಾಲಿನಲ್ಲಿಯೂ 9000 ವೈಯಕ್ತಿಕ ಶೌಚಾಲಯ ನಿರ್ಮಾಣದ ಗುರಿ ಹೊಂದಲಾಗಿದೆ. ಜಿಲ್ಲೆಯಾದ್ಯಂತ 445 ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗಿದ್ದು, 350 ಕಾರ್ಯಚರಣೆಯಲ್ಲಿವೆ ಎಂದು ಮಾಹಿತಿ ನೀಡಿದರು. ಎಸ್‌ಪಿ ಡಾ. ಸಿಮಿ ಮರಿಯಮ್ ಜಾರ್ಜ್, ಪಾಲಿಕೆಯ ಆಯುಕ್ತ ಸ್ನೇಹಲ್ ಸುಧಾಕರ ಲೋಖಂಡೆ ಇದ್ದರು.

> “ಸಂಭಾವ್ಯ ಮೂರನೇ ಅಲೆ ತಡೆಗಟ್ಟಲು ಜಿಮ್ಸ್ ಆಸ್ಪತ್ರೆಯಲ್ಲಿ 100 ಹಾಸಿಗೆಯ ಎಸ್.ಎನ್.ಸಿ.ಯು ಘಟಕ ಸ್ಥಾಪಿಸಿದ್ದು, ತಾಲೂಕಾ ಆಸ್ಪತ್ರೆಯಲ್ಲಿ ಪ್ರತ್ಯೇಕ 40 ಹಾಸಿಗೆಯ ನಿಗಾ ವಾರ್ಡ್ ಆರಂಭವಾಗಿದೆ. ಪ್ರತಿ ತಾಲೂಕಾ ಆಸ್ಪತ್ರೆಯಲ್ಲಿ 500 ಎಲ್.ಪಿ.ಎಂ. ಆಕ್ಸಿಜನ್ ಉತ್ಪಾದನಾ ಘಟಕ ಸ್ಥಾಪನೆ ಕಾರ್ಯ ನಡೆದಿದೆ. ಜಿಲ್ಲೆಯಲ್ಲಿ ತೀವ್ರ ಅಪೌಷ್ಠಿಕತೆವಿರುವ 623 ಮತ್ತು ಮಧ್ಯಮ ತೀವ್ರ ಅಪೌಷ್ಠಿಕತೆವಿರುವ 26462 ಮಕ್ಕಳನ್ನು ಗುರುತಿಸಿ ಅವರಿಗೆ ಪೌಷ್ಠಿಕ ಪುನರ್ವಸತಿ ಕೇಂದ್ರದ ಮೂಲಕ ಪೌಷ್ಠಿಕ ಆಹಾರ ನೀಡುವುದರ ಜೊತೆಗೆ ಅವರ ಆರೋಗ್ಯದ ಮೇಲೆ ನಿಗಾ ವಹಿಸಲಾಗಿದೆ.
>
> ವಿ.ವಿ. ಜ್ಯೋತ್ಸ್ನಾ, ಜಿಲ್ಲಾಧಿಕಾರಿ

# ಭ್ರಷ್ಟಾಚಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ

## ಉಪ ಲೋಕಾಯುಕ್ತ ಬಿ.ಎಸ್.ಪಾಟೀಲ್ ಗುಡುಗು

• **ಕನ್ನಡಪ್ರಭ ವಾರ್ತೆ** ಕಲಬುರಗಿ



ಭ್ರಷ್ಟಾಚಾರದಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಕರ್ನಾಟಕ ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಅವರು ಮಾತನಾಡಿದರು.

ಲೋಕಾಯುಕ್ತ ಸಂಸ್ಥೆಯ ಅಗತ್ಯತೆ ಹಾಗೂ ಕಾಯ್ದೆಗಳ ಬಗ್ಗೆ ಪ್ರಸ್ತಾಪಿಸಿದ ಅವರು, ಕೇಸುಗಳಲ್ಲಿ ದೂರು ಮತ್ತು ಆಪಾದನೆ ಎಂಬ ಎರಡು ವಿಧ ಇವೆ. ತನ್ನ ಸಮಸ್ಯೆ ಅಥವಾ ತನಗೆ ಅನ್ಯಾಯವಾದಲ್ಲಿ ಅಂತಹ ವ್ಯಕ್ತಿ ದೂರು ನೀಡಬಹುದು, ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರ, ಲೋಪ ಮುಂತಾದವುಗಳ ವಿರುದ್ಧ ಆಪಾದನೆಯ ಕೇಸು ಹಾಕಬಹುದಾಗಿದೆ ಎಂದರು.

**ಬಯಲು ಬಹಿರ್ದೆಸೆ ಸಮಸ್ಯೆ:** ಬಹುತೇಕ ಹಳ್ಳಿಗಳಲ್ಲಿ ಇನ್ನೂ ಶೌಚಾಲಯಗಳನ್ನು ಬಳಸದೆ, ಬಯಲು ಬಹಿರ್ದೆಸೆಗೆ ಹೋಗುತ್ತಾರೆ ಎಂದು ಕೆಂಡಕಾರಿದ ಉಪ ಲೋಕಾಯುಕ್ತರು, ತಾಲೂಕು ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿಗಳು ತಮ್ಮ ತಾಲ್ಲೂಕಿನ 10 ಗ್ರಾಮ ಪಂಚಾಯ್ತಿಗಳನ್ನು ಆಯ್ಕೆ ಮಾಡಿಕೊಂಡು ಬಯಲು ಬಹಿರ್ದೆಸೆ ಮುಕ್ತ ಗ್ರಾಮವಾಗಿ ಮಾಡಬೇಕು ಎಂದು ಕರೆ ನೀಡಿದ ಅವರು, ಬಯಲು ಬಹಿರ್ದೆಸೆ ಹೋಗುವುದನ್ನು ತಡೆಯದಿದ್ದರೆ ಇಒಗಳ ವಿರುದ್ಧ ಕೇಸ್ ಹಾಕಲಾಗುವುದು ಎಂದು ಎಚ್ಚರಿಕೆ ನೀಡಿದರು.

10 ಗ್ರಾಮ ಪಂಚಾಯ್ತಿಗಳ ಪ್ರತಿಯೊಂದು ಹಳ್ಳಿಗಳಲ್ಲಿಎಷ್ಟು ಜನಫಲಾನುಭವಿಗಳಿದ್ದಾರೆ. ಎಷ್ಟು ಜನ ಶೌಚಾಲಯ ಕಟ್ಟಿಸಿಕೊಂಡಿದ್ದಾರೆ. ಎಷ್ಟುಜನಕಟ್ಟಿಸಿಕೊಂಡಿಲ್ಲ, ಕಟ್ಟಿಸಿಕೊಂಡವರು ಎಷ್ಟು ಜನ ಬಳಕೆ ಮಾಡುತ್ತಾರೆ, ಎಷ್ಟು ಜನ ಬಳಕೆ ಮಾಡುತ್ತಿಲ್ಲ ಹಾಗೂ ಬಳಕೆ ಮಾಡದಂಥವರ ವಿರುದ್ಧ ಯಾವ ಕ್ರಮಕೈಗೊಂಡಿದ್ದೀರಾ ಎಂಬ ಬಗ್ಗೆ ಸಂಪೂರ್ಣ ವರದಿ ನೀಡಬೇಕು ಎಂದು ಅವರು ತಾಕೀತು ಮಾಡಿದರು.

ಈ ಸಂಬಂಧ ನಿರ್ಲಕ್ಷ್ಯ ತೋರುವ ತಾ.ಪಂ. ಇಒ ವಿರುದ್ಧ ಕರ್ತವ್ಯ ಲೋಪ ಮುಂತಾದ ಗಂಭೀರ ಪ್ರಕರಣ ದಾಖಲಿಸಲಾಗುತ್ತದೆ ಎಂದು ಹೇಳಿದರು.

ಈ ಕುರಿತು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರನ್ನು ಹೊಣೆಗಾರರನ್ನಾಗಿಸಿದಲ್ಲಿ ಮಾತ್ರ ಯಶ ಸಾಧಿಸಲು ಸಾಧ್ಯ ಎಂದು ಕಿವಿ ಮಾತು ಹೇಳಿದ ಅವರು ಎಲ್ಲರೂ ಕೂಡಿ ಗ್ರಾಮಸ್ಥರಿಗೆ ಶೌಚಾಲಯ ಬಳಕೆ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಕಲಬುರಗಿ ಜಿಲ್ಲೆಯಲ್ಲಿ ಕೆರೆಗಳ ಸಂಖ್ಯೆ, ಅತಿಕ್ರಮಣ, ತೆರವು ಹಾಗೂ ಜೀರ್ಣೋದ್ಧಾರಕ್ಕೆ ತೆಗೆದುಕೊಂಡ ಕ್ರಮಗಳ ಬಗ್ಗೆ ವರದಿ ಸಲ್ಲಿಸುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದ ನ್ಯಾ. ಬಿ.ಎಸ್.ಪಾಟೀಲ ಅವರು ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಸಾರ್ವಜನಿಕರಿಗೆ ಸ್ವಚ್ಛ ಕುಡಿಯುವ ನೀರು ಲಭ್ಯವಾಗುವಂತೆ ನೋಡಿಕೊಳ್ಳಬೇಕು ಎಂದು ನ್ಯಾಯಮೂರ್ತಿಗಳು ತಿಳಿಸಿದರು.

**100 ಕಲ್ಯಾಣಿ ಪುನಶ್ಚೇತನ ಯೋಜನೆ:** ಈ ಸಂದರ್ಭದಲ್ಲಿ ಮಾತನಾಡಿದ ಜಿಪಂ ಸಿಇಒ ಡಾ.ದಿಲೀಷ್ ಶಶಿ ಅವರು ನರೇಗಾ ಮತ್ತು ಜಲ ಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಾದ್ಯಂತ ಪಾಳುಬಿದ್ದಿದ್ದ 100 ಕಲ್ಯಾಣಿಗಳಲ್ಲಿ ಗುರುತಿಸಿ, ಪುನಶ್ಚೇತನ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಇದೂವರೆಗೆ 40 ಕಲ್ಯಾಣಿಗಳು ಪುನಶ್ಚೇತನದ ಪರಿಣಾಮ ನೀರಿನಿಂದ ಮೈದುಂಬಿಕೊಂಡಿವೆ. ಇದಲ್ಲದೆ ಪ್ರತಿ ಹಳ್ಳಿಯಲ್ಲಿ ಕೆರೆ ನಿರ್ಮಾಣಕ್ಕೆ ಸರ್ಕಾರ ನಿರ್ದೇಶನ ಬಂದಿದ್ದು, ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನಕ್ಕೆ ತರಲಾಗುವುದು ಎಂದರು.

2012ರ ಬೇಸ್ಲೈನ್ ಸಮೀಕ್ಷೆಯಿಂದ ಹೊರಗುಳಿದ 52438 ಕುಟುಂಬಗಳನ್ನು ಗುರುತಿಸಿದ್ದು, ಇದೂವರೆಗೆ 48218 ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಇನ್ನೂ 2021-22ನೇ ಸಾಲಿನಲ್ಲಿಯೂ 9000 ವೈಯಕ್ತಿಕ ಶೌಚಾಲಯ ನಿರ್ಮಾಣದ ಗುರಿ ಹೊಂದಲಾಗಿದೆ. ಜಿಲ್ಲೆಯಾದ್ಯಂತ 445 ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗಿದ್ದು, 350 ಕಾರ್ಯಚರಣೆಯಲ್ಲಿವೆ ಎಂದು ಮಾಹಿತಿ ನೀಡಿದರು.

ವಸತಿ ನಿಲಯ ಸ್ವಚ್ಛವಾಗಿರಬೇಕು. ಕೋವಿಡ್ ಕಾರಣ ಒಂದೂವರೆ ವರ್ಷದಿಂದ ಶಾಲೆ ತೆರೆದಿಲ್ಲ, ಈಗ ಸರ್ಕಾರ ಹಂತ-ಹಂತವಾಗಿ ತೆರೆಯುತ್ತಿದ್ದು, ಮಕ್ಕಳು ಬಹುತೇಕ ಪಠ್ಯಗಳನ್ನು ಮರೆತಿರುತ್ತಾರೆ. ಮಕ್ಕಳಲ್ಲಿ ಮತ್ತೇ ಓದುವ ಹಂಬಲ ಮೂಡಿಸುವುದರ ಜೊತೆಗೆ ಪಠ್ಯೇತರ ಚಟುವಟಿಕೆಯಲ್ಲಿಯೂ ಲವಲವಿಕೆಯಿಂದ ಇರುವಂತೆ ನೋಡಿಕೊಳ್ಳಬೇಕಾದ ಕೆಲಸ ಶಿಕ್ಷಕರದ್ದಾಗಿದೆ ಎಂದರು.

**ಟಾಸ್ಕ್ ಫೋರ್ಸ್ ಸಂವೇದನಾಶೀಲವಾಗಿರಲಿ:** ಕೋವಿಡ್ ಮೊದಲನೇ ಮತ್ತು ಎರಡನೇ ಅಲೆ ಕಾರಣ ಬಹಳಷ್ಟು ಯುವಕರು ಮತ್ತು ಮೇಧಾವಿಗಳನ್ನು ಕಳೆದುಕೊಂಡಿವೆ. ತಜ್ಞರ ಪ್ರಕಾರ ಮೂರನೇ ಅಲೆ ಮಕ್ಕಳ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಎಲ್ಲಾ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಮುಖ್ಯವಾಗಿ ರೋಗ ಹರಡದಂತೆ ವಿಶೇಷವಾಗಿ ಗ್ರಾಮೀಣ ಭಾಗದಲ್ಲಿ ಅರಿವು ಮೂಡಿಸಬೇಕು. ಗ್ರಾಮೀಣ ಭಾಗದಲ್ಲಿರುವ ಪಿ.ಡಿ.ಒ. ಜನಪ್ರತಿನಿಧಿಗಳು ಹಾಗೂ ಇತರೆ ಇಲಾಖೆಯ ಅಧಿಕಾರಿಗಳು ಒಳಗೊಂಡ ಟಾಸ್ಕ್ ಫೋರ್ಸ್ ಕಮಿಟಿ ಹೆಚ್ಚು ಸಂವೇದನಾಶೀಲವಾಗಿ ಕಾರ್ಯನಿರ್ವಹಿಸಬೇಕು. ಈ ನಿಟ್ಟನಲ್ಲಿ ಕಮಿಟಿಸದಸ್ಯರಿಗೆ ಆರೋಗ್ಯ ಇಲಾಖೆಯಿಂದ ಕಾರ್ಯಾಗಾರ ಆಯೋಜಿಸಿ ಎಂದು ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅಭಿಪ್ರಾಯಪಟ್ಟರು.

**3 ನೇ ಅಲೆ ಎದುರಿಸಲು ಸಿದ್ಧತೆ:** ಲ್ಲಾಧಿಕಾರಿ ವಿ.ವಿ.ಜ್ಯೋತ್ಸ್ನಾ ಅವರು ಮಾತನಾಡಿ, ಪ್ರಸ್ತುತ ಕೋವಿಡ್ ಪಾಸಿಟಿವ್ ಪ್ರಮಾಣ ಶೇ.0.2ರಷ್ಟಿದೆ. ಕಳೆದ 2 ತಿಂಗಳಿನಿಂದ ಪ್ರತಿದಿನ ಒಂದಂಕಿಯಲ್ಲಿ ಪ್ರಕರಣಗಳು ವರದಿಯಾಗುತ್ತಿವೆ. ಸಂಭಾವ್ಯ ಮೂರನೇ ಅಲೆ ತಡೆಗಟ್ಟಲು ಜಿಮ್ಸ್ ಆಸ್ಪತ್ರೆಯಲ್ಲಿ 100 ಹಾಸಿಗೆಯ ಎಸ್.ಎನ್.ಸಿ.ಯೂ ಘಟಕ ಸ್ಥಾಪಿಸಿದ್ದು, ತಾಲೂಕಾ ಆಸ್ಪತ್ರೆಯಲ್ಲಿ ಪ್ರತ್ಯೇಕ 40 ಹಾಸಿಗೆಯ ನಿಗಾ ವಾರ್ಡ್ ಸ್ಥಾಪಿಸಿದೆ ಎಂದರು.

ಜಿಲ್ಲೆಯಲ್ಲಿ ಆಕ್ಸಿಜನ್ ಉತ್ಪಾದನಾ ಪ್ರಮಾಣ ಹೆಚ್ಚಿಸಲಾಗಿದೆ. ಪ್ರತಿ ತಾಲೂಕಾ ಆಸ್ಪತ್ರೆಯಲ್ಲಿ 500 ಎಲ್.ಪಿ.ಎಂ. ಆಕ್ಸಿಜನ್ ಉತ್ಪಾದನಾ ಘಟಕ ಸ್ಥಾಪನೆ ಕಾರ್ಯ ನಡೆದಿದೆ. ಮುಂದುವರೆದು ಈ ಆಸ್ಪತ್ರೆಗಳಲ್ಲಿ ಜಂಬೋ ಸಿಲಿಂಡರ್ ಮತ್ತು ಆಕ್ಸಿಜನ್ ಕನ್ಸಂಟ್ರೇಟರ್ ಸಹ ಒದಗಿಸಲಾಗಿದೆ. ಜಿಲ್ಲೆಯಲ್ಲಿ ತೀವ್ರ ಅಪೌಷ್ಠಿಕತೆಯಿರುವ 623 ಮತ್ತು ಮಧ್ಯಮ ತೀವ್ರ ಅಪೌಷ್ಠಿಕತೆಯಿರುವ 26462 ಮಕ್ಕಳನ್ನು ಗುರುತಿಸಿ ಅವರಿಗೆ ಪೌಷ್ಠಿಕ ಪುನರ್ವಸತಿ ಕೇಂದ್ರದ ಮೂಲಕ ಪೌಷ್ಠಿಕ ಆಹಾರ ನೀಡುವುದರ ಜೊತೆಗೆ ಅವರ ಆರೋಗ್ಯದ ಮೇಲೆ ನಿಗಾ ವಹಿಸಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಎಸ್ಪಿ ಡಾ. ಸಿಮಿ ಮರಿಯಮ್ ಜಾರ್ಜ್, ಮಹಾನಗರ ಪಾಲಿಕೆಯ ಆಯುಕ್ತ ಸ್ನೇಹಲ ಲೋಖಂಡೆ, ಲೋಕಾಯುಕ್ತ ಎಸ್.ಪಿ. ಸತೀಷ್ ಎಸ್. ಚಿಟಗುಬ್ಬಿ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳಿದ್ದರು.

ಭಯಭೀತರಾಗಿದ್ದರೂ ಸರ್ಕಾರ ಯಾವುದೇ ... ತಾಲೂಕಿನ ವಿವಿಧ ... ನಾಟಕಾರ ಇನ್ನಿತರರಿದ್ದರು. ... ರಾಜಕುಮಾರ ...


ತಲಾ 10 ಗ್ರಾಮ ಪಂಚಾಯಿತಿಗಳ ಮಾಹಿತಿ ಕೊಡಲು ತಾಕೀತು | ಕೆರೆಗಳ ಜೀರ್ಣೋದ್ಧಾರಕ್ಕೆ ಉಪಲೋಕಾಯುಕ್ತರ ಸಲಹೆ

# ಬಯಲು ಶೌಚ: ತಾಪಂ ಇಒಗಳ ಮೇಲೆ ಕೇಸ್ ಎಚ್ಚರಿಕೆ

ಕಲಬುರಗಿ: ಗ್ರಾಮೀಣ ಪ್ರದೇಶದಲ್ಲಿ ಬಯಲು ಶೌಚ ಇನ್ನೂ ನಿಂತಿಲ್ಲ, ಮುಂದಿನ ದಿನಗಳಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸಿ, ಬಯಲು ಬಹಿರ್ದೆಸೆ ತಡೆಯದಿದ್ದರೆ ಎಲ್ಲ ತಾಲೂಕು ಪಂಚಾಯಿತಿಗಳ ಕಾರ್ಯ ನಿರ್ವಾಹಕಅಧಿಕಾರಿಗಳ ಮೇಲೆ ಮೊಕದ್ದಮೆ ದಾಖಲಿಸಬೇಕಾಗುತ್ತದೆ ಎಂದು ಉಪ ಲೋಕಾಯುಕ್ತ ನ್ಯಾ। ಬಿ.ಎಸ್ .ಪಾಟೀಲ ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಎಲ್ಲೆಡೆ ಬಯಲು ಶೌಚ ಮುಕ್ತ ಮಾಡಲಾಗಿದೆ ಎಂದು ಘೋಷಣೆ ಮಾಡಲಾಗುತ್ತದೆ. ಆದರೆ, ಪ್ರತಿ ಹಳ್ಳಿಯಲ್ಲಿ ಶೇ.50ರಿಂದ 60ರಷ್ಟು ಜನರು ಬಯಲು ಬಹಿರ್ದೆಸೆಗೆ ಹೋಗುತ್ತಾರೆ. ಹೀಗಾದರೆ ಶೌಚಾಲಯಗಳ ನಿರ್ಮಾಣಕ್ಕೆ ಸರ್ಕಾರ ಅನುದಾನ ನೀಡಿ ಫಲವೇನು ಎಂದು ಪ್ರಶ್ನಿಸಿದರು.

ಸಮಾಜದ ಸ್ವಾಸ್ಥ್ಯ ಮತ್ತು ಶುದ್ಧ ಪರಿಸರ ವಾಗಲು ಬಯಲು ಶೌಚಕ್ಕೆ ಕಡಿವಾಣ ಹಾಕಬೇಕು. ಈ ನಿಟ್ಟಿನಲ್ಲಿ ಎಲ್ಲ ತಾಪಂ ಇಒಗಳು ತಮ್ಮ ತಾಲೂಕಿನ 10 ಗ್ರಾಮ ಪಂಚಾಯಿತಿ ಆಯ್ಕೆ ಮಾಡಿಕೊಳ್ಳಬೇಕು. ಪ್ರತಿಯೊಂದು ಹಳ್ಳಿಗಳಲ್ಲಿ ಎಷ್ಟು ಜನ ವೈಯಕ್ತಿಕ ಶೌಚಾಲಯಗಳ ಫಲಾನುಭವಿಗಳಿದ್ದಾರೆ? ಎಷ್ಟು ಜನ ಶೌಚಾಲಯ ಕಟ್ಟಿಸಿಕೊಂಡಿದ್ದಾರೆ? ಎಷ್ಟು ಜನ ಕಟ್ಟಿಸಿಕೊಂಡಿಲ್ಲ? ಕಟ್ಟಿಸಿಕೊಂಡವರಲ್ಲಿ ಎಷ್ಟು ಜನ ಬಳಕೆ ಮಾಡುತ್ತಾರೆ? ಎಷ್ಟು ಜನ ಬಳಕೆ ಮಾಡುತ್ತಿಲ್ಲ? ಮನೆಯಲ್ಲಿ ಶೌಚಾಲಯ ಇದ್ದರೂ ಯಾಕೆ ಬಳಕೆ ಮಾಡುತ್ತಿಲ್ಲ? ಬಳಕೆ ಮಾಡದಂತಹವರ ವಿರುದ್ಧ ಯಾವ ಕ್ರಮಕೈಗೊಂಡಿದ್ದೀರಾ ಎನ್ನುವ ಬಗ್ಗೆ ಸಂಪೂರ್ಣ ವರದಿ ನೀಡಬೇಕೆಂದು ತಾಕೀತು ಮಾಡಿದರು.



ಕಲಬುರಗಿ: ಡಿಸಿ ಕಚೇರಿ ಸಭಾಂಗಣದಲ್ಲಿ ಶನಿವಾರ ನಡೆದ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯಲ್ಲಿ ಉಪ ಲೋಕಾಯುಕ್ತ ನ್ಯಾ। ಬಿ.ಎಸ್.ಪಾಟೀಲ ಮಾತನಾಡಿದರು.

ಲೋಕಾಯುಕ್ತ ಸಂಸ್ಥೆಯಲ್ಲಿ ದೂರು ಮತ್ತು ಆಪಾದನೆ ಎಂಬ ಎರಡು ವಿಧಗಳಿವೆ. ತನ್ನ ಸಮಸ್ಯೆ ಅಥವಾ ತನಗೆ ಅನ್ಯಾಯವಾದಲ್ಲಿ ಅಂತಹ ವ್ಯಕ್ತಿ ದೂರು ನೀಡಬಹುದು. ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರ, ಲೋಪ ಮುಂತಾದವುಗಳ ವಿರುದ್ಧ ಆಪಾದನೆಯ ಕೇಸ್ ಹಾಕಬಹುದಾಗಿದೆ.

● ನ್ಯಾ। ಬಿ.ಎಸ್.ಪಾಟೀಲ, ಉಪ ಲೋಕಾಯುಕ್ತರು

ಜಿಲ್ಲೆಯಲ್ಲಿ ಪ್ರಸ್ತುತ ಕೊರೊನಾ ಪಾಸಿಟಿವ್ ಪ್ರಮಾಣ ಶೇ.0.2ರಷ್ಟಿದೆ. ಕಳೆದ ಎರಡು ತಿಂಗಳಿನಿಂದ ಪ್ರತಿದಿನ ಒಂದಂಕಿಯಲ್ಲಿ ಪ್ರಕರಣಗಳು ವರದಿಯಾಗುತ್ತಿವೆ. ತೀವ್ರ ಅಪೌಷ್ಟಿಕತೆಯಿರುವ 623 ಮಕ್ಕಳು ಮತ್ತು ಮಧ್ಯಮ ತೀವ್ರ ಅಪೌಷ್ಟಿಕತೆಯಿರುವ 26,462 ಮಕ್ಕಳನ್ನು ಗುರುತಿಸಲಾಗಿದೆ.

● ವಾಸಿರೆಡ್ಡಿ ವಿಜಯಾ ಜ್ಯೋತ್ಸ್ನಾ, ಜಿಲ್ಲಾಧಿಕಾರಿ

ಜಿಲ್ಲೆಯಲ್ಲಿ ಪಾಳುಬಿದ್ದಿದ್ದ 100 ಕಲ್ಯಾಣಿಗಳನ್ನು ಗುರುತಿಸಲಾಗಿದೆ. ಇದರಲ್ಲಿ ನರೇಗಾ ಮತ್ತು ಜಲ ಜೀವನ್ ಮಿಷನ್ ಯೋಜನೆಯಡಿ 40 ಕಲ್ಯಾಣಿಗಳ ಪುನಶ್ಚೇತನ ಮಾಡಲಾಗಿದೆ. ಜತೆಗೆ ಇದುವರೆಗೆ 48,218 ವೈಯಕ್ತಿಕ ಶೌಚಾಲಯಗಳ ನಿರ್ಮಿಸಲಾಗಿದೆ. 2021-22ನೇ ಸಾಲಿನಲ್ಲಿ ಹೆಚ್ಚುವರಿ 9,000 ವೈಯಕ್ತಿಕ ಶೌಚಾಲಯ ನಿರ್ಮಾಣದ ಗುರಿ ಹೊಂದಲಾಗಿದೆ.

● ಡಾ। ದಿಲೀಷ್ ಸಸಿ, ಸಿಇಒ, ಜಿಲ್ಲಾ ಪಂಚಾಯಿತಿ

ಬಯಲು ಶೌಚ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದನ್ನು ತಕ್ಷಣದಿಂದಲೇ ಆರಂಭಿಸಬೇಕು. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರನ್ನು ಜೊತೆಗಾರರನ್ನಾಗಿಸದಲ್ಲಿ ಮಾತ್ರ ಯಶಸ್ಸು ಸಾಧಿಸಲು ಸಾಧ್ಯ. ಆಡಳಿತ ಮತ್ತು ಅಧಿಕಾರಿ ವರ್ಗದ ಎಲ್ಲರೂ ಕೂಡಿ ಗ್ರಾಮಸ್ಥರಿಗೆ ಶೌಚಾಲಯ ಬಳಕೆ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

## ಅಧಿಕಾರಿಗಳೆ ಸ್ವ-ಹಿತಾಸಕ್ತಿ ಬದಿಗೊತ್ತಿ

ಕಲ್ಯಾಣ ಕರ್ನಾಟಕ ಭಾಗಕ್ಕೆ ಆಗುತ್ತಿರುವ ಪ್ರಾದೇಶಿಕ ಅನ್ಯಾಯದ ಬಗ್ಗೆ ಧ್ವನಿ ಎತ್ತುವ ಪ್ರವೃತ್ತಿಯನ್ನು ಜನ ಬೆಳೆಸಿಕೊಳ್ಳಬೇಕು. ಈ ಭಾಗಕ್ಕೆ ಸಂವಿಧಾನದ 371ನೇ (ಜೆ) ವಿಶೇಷ ಕಲಂ ಜಾರಿಯಾಗಿದೆ. ಇದರ ಲಾಭ ಪಡೆದು ಅನೇಕರು ಅಧಿಕಾರಿಗಳು ಆಗಿದ್ದಾರೆ. ಅವರೆಲ್ಲರೂ ಸರ್ಕಾರಿ ನೌಕರಿ ಪಡೆದು ಭಾಗದ ಸುಧಾರಣೆಗೆ ಶ್ರಮಿಸದೇ, ಸುಮ್ಮನೆ ಕುಳಿತರೆ ಮಣ್ಣಿನ ಋಣಕ್ಕೆ ಅನ್ಯಾಯ ಮಾಡಿದಂತೆ ಎಂದು ಉಪ ಲೋಕಾಯುಕ್ತ ನ್ಯಾ। ಬಿ.ಎಸ್.ಪಾಟೀಲ ಬಿಡಿಸಿ ಹೇಳಿದರು. ಒಬ್ಬ ತಾಯಿ ತನ್ನ ಒಬ್ಬ ಮಕ್ಕಳಲ್ಲಿ ಯಾವ ಮಗು ನಿಶ್ಯಕ್ತವಾಗಿರುತ್ತದೋ, ಆ ಮಗುವಿನ ಬಗ್ಗೆ ಆಕೆ ಹೆಚ್ಚು ಕಾಳಜಿ ತೋರುತ್ತಾಳೆ. ಅದೇ ರೀತಿ ಅಭಿವೃದ್ಧಿಯಲ್ಲಿ ತಾರತಮ್ಯ ಅನುಭವಿಸುವ ಈ ಭಾಗಕ್ಕೆ ಇಂತಹದ್ದೇ ಕಾಳಜಿ ಸರ್ಕಾರದಿಂದ ಸಿಗಬೇಕಿದೆ. ಈ ಕೆಲಸ ಆರಂಭವಾಗಬೇಕಾದದ್ದು ಅಧಿಕಾರಿಗಳಿಂದಲೇ ಎಂದರು. ಈ ಭಾಗಕ್ಕೆ ಏನು ಬೇಕಾಗಿದೆ? ಏನು ಬೇಡವಾಗಿದೆ ಎನ್ನುವ ಬಗ್ಗೆ ಅಧಿಕಾರಿಗಳು ಅರಿತುಕೊಳ್ಳಬೇಕು. ಇಲ್ಲಿನ ಸಮಸ್ಯೆ, ಕೊರತೆಗಳ ಬಗ್ಗೆ ಪಟ್ಟಿ ಮಾಡಿ ಪ್ರಸ್ತಾವ ಸಲ್ಲಿಸುವುದನ್ನು ಬೆಳೆಸಿಕೊಳ್ಳಬೇಕು. ಕೊನೆಗೆ ಪತ್ರ ನಮಗೆ ಮನವಿ ನೀಡಿದರೆ ಸರ್ಕಾರದ ಮಟ್ಟದಲ್ಲಿ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ಹೀಗಾಗಿ ಅಧಿಕಾರಿಗಳು ಸ್ವ-ಹಿತಾಸಕ್ತಿ ಬದಿಗೊತ್ತಿ ಸಾರ್ವಜನಿಕ ಸೇವೆಗೆ ನಿಮ್ಮನ್ನು ನೀವು ಅರ್ಪಿಸಿಕೊಳ್ಳಿ. ನೀವು ಮಾಡುವ ಕೆಲಸದ ಬಗ್ಗೆ ಶ್ರದ್ಧೆ ಇದ್ದರೆ ನಿಮ್ಮ ಮೇಲೆ ಮತ್ತೊಬ್ಬರು ನಿಗಾ ವಹಿಸುವ ಅಗತ್ಯವೇ ಇರುವುದಿಲ್ಲ ಎಂದು ಸಲಹೆ ನೀಡಿದರು.

**ಕೆರೆಗಳ ಸಂರಕ್ಷಣೆ ಮಾಡಿ:** ಕಲ್ಯಾಣ ಕರ್ನಾಟಕ ಪ್ರದೇಶದ ಬರದ ನಾಡು ಎಂದು ಕರೆಸಿಕೊಳ್ಳುತ್ತದೆ. ಆದರೂ, ಪ್ರವಾಹ ಉಂಟಾಗುತ್ತದೆ. ಇದೇ ನೀರು ಹಾಗೆ ಹರಿದು ಮುಂದೆ ಹೋಗುತ್ತದೆ. ಕೆರೆ-ಕಟ್ಟೆಗಳು ಹೆಚ್ಚಾಗಿದ್ದರೆ ಅದೇ ನೀರನ್ನು ಸಂಗ್ರಹಿಸಿ ಸದ್ಬಳಕೆ ಮಾಡಿಕೊಳ್ಳುವ ಅವಕಾಶ ಇರುತ್ತದೆ. ಆದರೆ, ಜಿಲ್ಲೆಯಲ್ಲಿ ಇಂತಹ ವ್ಯವಸ್ಥೆ ಮಾಡಿಕೊಂಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಭೂಮಿ ಮೇಲೆ ನೀರು ಇದ್ದರೆ ಕೃಷಿ ಜಾನುವಾರುಗಳಿಗೆ ಅನುಕೂಲವಾಗುತ್ತದೆ. ಪರಿಸರ ಹಸಿರಾಗಿರುತ್ತದೆ. ಅಂತರ್ಜಲ ವೃದ್ಧಿಯಾಗುತ್ತದೆ. ಹೀಗಾಗಿ ಪ್ರತಿಯೊಂದು ಗ್ರಾಮಗಳಲ್ಲೂ ಕೆರೆ ಇರುವಂತೆ ನೋಡಿಕೊಳ್ಳಬೇಕು. ಈಗಾಗಲೇ ಇರುವ ಕೆರೆಗಳ ಸ್ಥಿತಿಗಳ ಅವಲೋಕನ ಮಾಡಬೇಕು. ಎಷ್ಟು ಕೆರೆಗಳು ಇವೆ? ಎಷ್ಟರಲ್ಲಿ ಹೂಳು ತುಂಬಿದೆ? ಎಷ್ಟು ಕೆರೆಗಳು ಅತಿಕ್ರಮಣವಾಗಿವೆ? ಎಲ್ಲೆಲ್ಲಿ ಅತಿಕ್ರಮ ತೆರವು ಮಾಡಲಾಗಿದೆ ಎನ್ನುವ ಮಾಹಿತಿ ಸಂಗ್ರಹಿಸಿ, ಅವುಗಳ ಸಂರಕ್ಷಣೆ ಹಾಗೂ ಜೀರ್ಣೋದ್ಧಾರಕ್ಕೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

**ಹಾಸ್ಟೆಲ್‌ಗಳು ಸ್ವಚ್ಛವಾಗಿರಲಿ:** ಇಂದಿನ ಮಕ್ಕಳೇ ದೇಶದ ಪ್ರಜೆಗಳು. ಅವರಲ್ಲಿ ಈಗಿನಿಂದಲೇ ಶಿಸ್ತು ಇರಬೇಕು. ಇದನ್ನು ಸರ್ಕಾರಿ ಹಾಸ್ಟೆಲ್‌ಗಳಿಂದಲೇ ಆರಂಭವಾಗುವಂತೆ ನೋಡಿಕೊಳ್ಳುವುದು ಅಧಿಕಾರಿಗಳ ಕರ್ತವ್ಯ ಎಂದು ಉಪ ಲೋಕಾಯುಕ್ತರು ಹೇಳಿದರು.

ಸಮಾಜ ಕಲ್ಯಾಣ, ಶಿಕ್ಷಣ ಸೇರಿದಂತೆ ಎಲ್ಲ ಇಲಾಖೆಗಳ ಹಾಸ್ಟೆಲ್‌ಗಳು ಸ್ವಚ್ಛವಾಗಿರಬೇಕು. ಸ್ವಚ್ಛತೆ ಮತ್ತು ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ಕೊಡಿ. ಹಾಸ್ಟೆಲ್‌ಗಳ ಸ್ಥಿತಿಗತಿ ಬಗ್ಗೆ ಅಧಿಕಾರಿಗಳು ವರದಿ ಸಲ್ಲಿಸಬೇಕು. ಕೊರೊನಾ ಕಾರಣ ಒಂದೂವರೆ ವರ್ಷದಿಂದ ಶಾಲೆ ತೆರೆದಿಲ್ಲ. ಈಗ ಸರ್ಕಾರ ಹಂತ-ಹಂತವಾಗಿ ಶಾಲೆ ತೆರೆಯುತ್ತಿದ್ದು, ಮಕ್ಕಳು ಬಹುತೇಕ ಪಠ್ಯಗಳನ್ನು ಮರೆತಿರುತ್ತಾರೆ. ಮಕ್ಕಳಲ್ಲಿ ಮತ್ತೆ ಓದುವ ಹಂಬಲ ಮೂಡಿಸುವುದರ ಜತೆಗೆ ಪಠ್ಯೇತರ ಚಟುವಟಿಕೆಯಲ್ಲಿಯೂ ಲವಲವಿಕೆಯಿಂದ ಇರುವಂತೆ ನೋಡಿಕೊಳ್ಳಿ ಎಂದು ನಿರ್ದೇಶನ ನೀಡಿದರು.

**ಸಂವೇದನಾಶೀಲರಾಗಿ:** ಕೊರೊನಾ ಮೊದಲನೇ ಮತ್ತು ಎರಡನೇ ಅಲೆ ಕಾರಣ ಬಹಳಷ್ಟು ಯುವಕರು ಮತ್ತು ಮೇಧಾವಿಗಳನ್ನು ಕಳೆದುಕೊಂಡಿದ್ದೇವೆ. ತಜ್ಞರ ಪ್ರಕಾರ ಮೂರನೇ ಅಲೆ ಮಕ್ಕಳ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ. ಆದ್ದರಿಂದ ಅಧಿಕಾರಿಗಳು ಎಲ್ಲ ರೀತಿಯ ಮುಂಜಾಗ್ರತೆ ಕೈಗೊಳ್ಳಬೇಕು ಎಂದರು.

ಮಕ್ಕಳ ಮೇಲೆ ಪರಿಣಾಮ ಬೀರಲಿದೆ ಎಂದರೆ ಈ ಕುರಿತು ಮೊದಲು ತಾಯಂದರಿಗೆ ಅರಿವು ಮೂಡಿಸಬೇಕು. ಅದಕ್ಕಾಗಿ ಗ್ರಾಮೀಣ ಭಾಗದಲ್ಲಿರುವ ಪಿಡಿಒಗಳು, ಜನಪ್ರತಿನಿಧಿಗಳು ಹಾಗೂ ಇತರ ಇಲಾಖೆ ಅಧಿಕಾರಿಗಳನ್ನು ಒಳಗೊಂಡ ಟಾಸ್ಕ್ ಫೋರ್ಸ್ ಸಮಿತಿ ಹೆಚ್ಚು ಸಂವೇದನಾಶೀಲವಾಗಿ ಕಾರ್ಯನಿರ್ವಹಿಸಬೇಕು. ಸಮಿತಿ ಸದಸ್ಯರಿಗೆ ಆರೋಗ್ಯ ಇಲಾಖೆಯಿಂದ ಕಾರ್ಯಾಗಾರ ಆಯೋಜಿಸಿ ಎಂದು ಸೂಚಿಸಿದರು.

ಜಿಲ್ಲಾಧಿಕಾರಿ ವಾಸಿರೆಡ್ಡಿ ವಿಜಯಾ ಜ್ಯೋತ್ಸ್ನಾ, ಜಿಲ್ಲಾ ಪಂಚಾಯಿತಿ ಸಿಇಒ ಡಾ। ದಿಲೀಷ್ ಸಸಿ, ಮಹಾನಗರ ಪಾಲಿಕೆ ಆಯುಕ್ತ ಸ್ನೇಹಲ ಸುಧಾಕರ ಲೋಖಂಡೆ ಮಾತನಾಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ। ಸಿಮಿ ಮರಿಯಂ ಜಾರ್ಜ್, ಲೋಕಾಯುಕ್ತ ಎಸ್‌ಪಿ ಸತೀಶ ಚಿಟಗುಪ್ಪಿ ಹಾಗೂ ಅಧಿಕಾರಿಗಳು ಹಾಜರಿದ್ದರು.

ಉಪಲೋಕಾಯುಕ್ತ ಬಿ.ಎಸ್.ಪಾಟೀಲ್ ಎಚ್ಚರಿಕೆ | ಭ್ರಷ್ಟಾಚಾರ ಎಸಗಿದ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ

# ಎಲ್ಲ ಇಒಗಳ ವಿರುದ್ಧ ಕೇಸ್

■ ವಿಕ ಸುದ್ದಿಲೋಕ ಕಲಬುರಗಿ

ಜಿಲ್ಲೆಯ ಎಲ್ಲ ಇಒಗಳ ಮೇಲೆ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳ ವಿರುದ್ಧ ಕೇಸ್ ರಿಜಿಸ್ಟರ್ ಮಾಡಲಾಗುವುದು, ಎಲ್ಲ ಯೋಜನೆಗಳ ಅನುಷ್ಠಾನ ವರದಿ ಜತೆಗೆ ಫಲಾನುಭವಿಗಳ ಬಳಕೆ ಬಗ್ಗೆ ವರದಿ ನೀಡಬೇಕು. ಇಲ್ಲದಿದ್ದರೆ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲಾಗುವುದು ಎಂದು ಉಪ ಲೋಕಾಯುಕ್ತ ಬಿ.ಎಸ್.ಪಾಟೀಲ್ ಖಡಕ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು. ಬಹುತೇಕ ಹಳ್ಳಿಗಳಲ್ಲಿ ಇನ್ನೂ ಶೌಚಾಲಯಗಳನ್ನು ಬಳಸದೆ, ಬಯಲು ಬಹಿರ್ದೆಸೆಗೆ ಹೋಗುತ್ತಾರೆ ಎಂದು ಕಿಡಿಕಾರಿದ ಉಪಲೋಕಾಯುಕ್ತರು, ತಾವು ಇಒಗಳು ತಮ್ಮ ತಾಲೂಕಿನ 10 ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ಆ ಗ್ರಾಮ ವ್ಯಾಪ್ತಿಯಲ್ಲಿ ಎಷ್ಟು ಶೌಚಾಲಯಗಳನ್ನು ಕಟ್ಟಲಾಗಿದೆ. ಫಲಾನುಭವಿಗಳೆಷ್ಟು ? ಯೋಜನೆ ಲಾಭ ಪಡೆದು ಅರ್ಧಂಬರ್ಧ ಶೌಚಾಲಯ ಕಟ್ಟಿದವರೆಷ್ಟು ? ಕಟ್ಟಿದ್ದರೂ ಬಳಸದಿರುವ ಸಂಖ್ಯೆ ಎಷ್ಟು? ಯೋಜನೆ ಲಾಭ ಪಡೆದು ಕಟ್ಟದೇ ಇರುವವರೆಷ್ಟು ? ಎಂಬ ಮಾಹಿತಿ ನೀಡಬೇಕು. ಜತೆಗೆ ಯೋಜನೆ ಲಾಭ ಪಡೆದು ಉಪಯೋಗಿಸದವರಿಗೆ ಜಾಗೃತಿ ಮೂಡಿಸಬೇಕು. ಅಷ್ಟು ಹೇಳಿದರೂ ಕೇಳದವರ ವಿರುದ್ಧ ಕ್ರಮಕ್ಕೆ ಸೂಚನೆ ನೀಡಬೇಕು. ಬಯಲು ಬಹಿರ್ದೆಸೆ ಹೋಗುವುದನ್ನು ತಡೆಯದಿದ್ದರೆ ಇಒಗಳ ವಿರುದ್ಧ ಕೇಸ್ ಹಾಕಲಾಗುವುದು ಎಂದು ಎಚ್ಚರಿಕೆ ನೀಡಿದ ಅವರು, ಇದಕ್ಕೆಲ್ಲ ಪಿಡಿಒಗಳು, ಗ್ರಾಮ ಅಧ್ಯಕ್ಷರು, ಸದಸ್ಯರನ್ನು ತೊಡಗಿಸಿದಾಗ ಮಾತ್ರ ಯಶ ಸಾಧಿಸಲು ಸಾಧ್ಯ ಎಂದು ಹೇಳಿದರು.

**ವಸತಿ ನಿಲಯ ಸ್ವಚ್ಛವಾಗಿರಲಿ**

ವಸತಿ ನಿಲಯ ಸ್ವಚ್ಛವಾಗಿರಬೇಕು. ಅಲ್ಲಿ ಅಭ್ಯಾಸ ಮಾಡುವ ಮಕ್ಕಳು ಭಾವಿ ಪ್ರಜೆಗಳಾಗಿದ್ದು, ಅವರಲ್ಲಿ ಉತ್ತಮ ಶಿಕ್ಷಣ ತರಬೇಕು. ಮಕ್ಕಳು ಕೆಟ್ಟ ಪರಿಸ್ಥಿತಿಯಲ್ಲಿ ಬೆಳೆದರೆ ಅವರ ಮಾನಸಿಕ, ದೈಹಿಕ ಪರಿಸ್ಥಿತಿ ವಿಷಮಗೊಳ್ಳುವುದು. ಆದ್ದರಿಂದ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಹಾಸ್ಟೆಲ್‌ಗಳಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ಕೊಡಬೇಕು. ಕೋವಿಡ್ ಒಂದೂವರೆ ವರ್ಷದಿಂದ ಶಾಲೆ ತೆರೆದಿಲ್ಲ, ಈಗ ಸರಕಾರ ಹಂತ-ಹಂತವಾಗಿ ತೆರೆಯುತ್ತಿದ್ದು, ಮಕ್ಕಳು ಬಹುತೇಕ ಪಠ್ಯ ಮರೆತಿದ್ದಾರೆ. ಮಕ್ಕಳಲ್ಲಿ ಮತ್ತೆ ಓದುವ ಹಂಬಲ ಮೂಡಿಸುವುದರ ಜೊತೆಗೆ ಪಠ್ಯೇತರ ಚಟುವಟಿಕೆ ಯಲ್ಲಿಯೂ ಅವಲಂಬನೆಯಿಂದ ಇರುವಂತೆ ನೋಡಿಕೊಳ್ಳಬೇಕಾದ ಕೆಲಸ ಶಿಕ್ಷಕರದ್ದಾಗಿದೆ ಎಂದರು.

**ಟಾಸ್ಕ್ ಫೋರ್ಸ್ ಸಂವೇದನಾಶೀಲವಾಗಿರಲಿ**

ಸ್ವಲ್ಪ ಪ್ರಮಾಣದ ಕೊರೊನಾ ಮೂರನೇ ಅಲೆ ಮಕ್ಕಳ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಎಲ್ಲ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಅಧಿಕಾರಿಗಳು ಒಳಗೊಂಡ ಟಾಸ್ಕ್ ಫೋರ್ಸ್ ಸಮಿತಿ ಹೆಚ್ಚು ಸಂವೇದನಾಶೀಲವಾಗಿ ಕಾರ್ಯನಿರ್ವಹಿಸಬೇಕು. ಈ ನಿಟ್ಟಿನಲ್ಲಿ ಸಮಿತಿ ಸದಸ್ಯರಿಗೆ ಆರೋಗ್ಯ ಇಲಾಖೆಯಿಂದ ಕಾರ್ಯಾಗಾರ ಆಯೋಜಿಸಿ ಎಂದು ಸೂಚಿಸಿದರು. ಜಿಲ್ಲಾಧಿಕಾರಿ ವಿ.ವಿ.ಜ್ಯೋತ್ಸ್ನಾ ಮಾತನಾಡಿ ಪ್ರಸ್ತುತ ಕೋವಿಡ್ ಪಾಸಿಟಿವ್ ಪ್ರಮಾಣ ಶೇ.0.2ರಷ್ಟಿದೆ. ಎರಡು ತಿಂಗಳಿಂದ ಪ್ರತಿದಿನ ಒಂದಂಕಿಯಲ್ಲಿ ಪ್ರಕರಣಗಳು ವರದಿಯಾಗುತ್ತಿವೆ. ಸಂಭವನೀಯ ಮೂರನೇ ಅಲೆ ತಡೆಗಟ್ಟಲು ಜಿಮ್ಸ್ ಆಸ್ಪತ್ರೆಯಲ್ಲಿ 100 ಹಾಸಿಗೆಯ ಎಸ್.ಎನ್.ಸಿ.ಯು ಘಟಕ ಸ್ಥಾಪಿಸಿದ್ದು, ತಾಲೂಕು ಆಸ್ಪತ್ರೆಯಲ್ಲಿ ಪ್ರತ್ಯೇಕ 40 ಹಾಸಿಗೆ ನಿಗಾ ವಾರ್ಡ್ ಸ್ಥಾಪಿಸಿದೆ. ಜಿಲ್ಲೆಯಲ್ಲಿ ಆಕ್ಸಿಜನ್ ಉತ್ಪಾದನಾ ಪ್ರಮಾಣ ಹೆಚ್ಚಿಸಲಾಗಿದೆ. ಪ್ರತಿ ತಾಲೂಕು ಆಸ್ಪತ್ರೆಯಲ್ಲಿ 500 ಎಲ್‌ಪಿಎಂ ಆಕ್ಸಿಜನ್ ಉತ್ಪಾದನಾ ಘಟಕ ಸ್ಥಾಪನೆ ಕಾರ್ಯ ನಡೆದಿದೆ. ಜಿಲ್ಲೆಯಲ್ಲಿ ತೀವ್ರ ಅಪೌಷ್ಟಿಕತೆಯಿರುವ 623 ಮತ್ತು ಮಧ್ಯಮ ತೀವ್ರ ಅಪೌಷ್ಟಿಕತೆಯಿರುವ 26462 ಮಕ್ಕಳನ್ನು ಗುರುತಿಸಿ, ಅವರಿಗೆ ಪೌಷ್ಟಿಕ ಪುನರ್ವಸತಿ ಕೇಂದ್ರದ ಮೂಲಕ ಪೌಷ್ಟಿಕ ಆಹಾರ ನೀಡುವುದರ ಜೊತೆಗೆ ಅವರ ಆರೋಗ್ಯದ ಮೇಲೆ ನಿಗಾ ವಹಿಸಲಾಗಿದೆ ಎಂದರು.

ಜಿಲ್ಲಾ ಪೊಲೀಸ್ ಅಧೀಕ್ಷಕಿ ಡಾ.ಸಿಮಿ ಮರಿಯಮ್ ಜಾರ್ಜ್, ಪಾಲಿಕೆ ಆಯುಕ್ತ ಸ್ನೇಹಲ ಸುಧಾಕರ ಲೋಖಂಡೆ, ಲೋಕಾಯುಕ್ತ ಎಸ್.ಪಿ.ಮಹೇಶ್ ಎಸ್. ಚಿಟಗುಬ್ಬಿ ಸೇರಿ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳಿದ್ದರು.



ಕಲಬುರಗಿ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳ ಸಭೆಯಲ್ಲಿ ಉಪ ಲೋಕಾಯುಕ್ತ ಬಿ.ಎಸ್ ಪಾಟೀಲ್ ಮಾತನಾಡಿದರು. ಜಿಲ್ಲಾಧಿಕಾರಿ ವಿ.ವಿ.ಜ್ಯೋತ್ಸ್ನಾ ಇತರರಿದ್ದರು.

**ಕೆರೆಗಳ ವರದಿ ಕೊಡಿ**

ಜಿಲ್ಲೆಯಲ್ಲಿ ಕೆರೆಗಳ ಸಂಖ್ಯೆ, ಅತಿಕ್ರಮಣ, ತೆರವು ಹಾಗೂ ಜೀರ್ಣೋದ್ಧಾರಕ್ಕೆ ತೆಗೆದುಕೊಂಡ ಕ್ರಮಗಳ ಬಗ್ಗೆ ವರದಿ ಸಲ್ಲಿಸುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದರು. ಇದಕ್ಕೆ ಸಂಬಂಧಿಸಿದಂತೆಯೂ ಒಂದು ಕೇಸ್ ರಿಜಿಸ್ಟರ್ ಮಾಡುತ್ತೇನೆ. ಕೆರೆಗಳ ಒತ್ತುವರಿ, ಎಷ್ಟಿವೆ ಎಂಬುದು ಮಾಹಿತಿ ನೀಡಬೇಕು ಎಂದು ಹೇಳಿದರು. ಜಿಪಂ ಸಿಇಒ ಡಾ.ದಿಲೀಷ್ ಶಶಿ ಪ್ರತಿಕ್ರಿಯಿಸಿ ನರೇಗಾ ಮತ್ತು ಜಲ ಜೀವನ್ ಮಿಷನ್ ಯೋಜನೆಯಡಿ ಜಿಲ್ಲಾದ್ಯಂತ ಹಾಳು ಬಿದ್ದಿದ್ದ 100 ಕಲ್ಯಾಣಿಗಳನ್ನು ಗುರುತಿಸಿ, ಪುನಶ್ಚೇತನ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಇದುವರೆಗೆ 40 ಕಲ್ಯಾಣಿಗಳು ಪುನಶ್ಚೇತನದ ಪರಿಣಾಮ ನೀರಿನಿಂದ ಮೈದುಂಬಿಕೊಂಡಿವೆ. ಇದಲ್ಲದೆ ಪ್ರತಿ ಹಳ್ಳಿಯಲ್ಲಿ ಕೆರೆ ನಿರ್ಮಾಣಕ್ಕೆ ಸರಕಾರ ನಿರ್ದೇಶನ ಬಂದಿದ್ದು, ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನಕ್ಕೆ ತರಲಾಗುವುದು ಎಂದರು. 2012ರ ಬೇಸ್‌ಲೈನ್ ಸಮೀಕ್ಷೆಯಂತೆ ಹೊರಗುಳಿದ 52438 ಕುಟುಂಬಗಳನ್ನು ಗುರುತಿಸಿದ್ದು, ಇದುವರೆಗೆ 48218 ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆ. 2021-22ನೇ ಸಾಲಿನಲ್ಲಿಯೂ 9000 ವೈಯಕ್ತಿಕ ಶೌಚಾಲಯ ನಿರ್ಮಾಣದ ಗುರಿ ಹೊಂದಲಾಗಿದೆ. ಜಿಲ್ಲಾದ್ಯಂತ 445 ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಿದ್ದು, 350 ಕಾರ್ಯಾಚರಣೆಯಲ್ಲಿವೆ ಎಂದು ಮಾಹಿತಿ ನೀಡಿದರು.

## 371 ಜೆ ಸೌಲಭ್ಯ ಪಡೆದವರು ಅಭಿವೃದ್ಧಿಗೆ ಅರ್ಪಿಸಿಕೊಳ್ಳಿ

371 ಜೆ ಸೌಲಭ್ಯ ಪಡೆದವರು ಅಭಿವೃದ್ಧಿಗೆ ಅರ್ಪಿಸಿಕೊಳ್ಳಿ ಕಲ್ಯಾಣ ಕರ್ನಾಟಕ ಭಾಗಕ್ಕೆ 371ಜೆ ವಿಶೇಷ ಸ್ಥಾನಮಾನ ತರಲಾಗಿದೆ. ಉಚ್ಚ ನ್ಯಾಯಾಲಯದ ಪೀಠ ಬಂತು ಹಲವಾರು ಯೋಜನೆಗಳು-ಅಭಿವೃದ್ಧಿ ಕಾಮಗಾರಿಗಳಾದರೂ ಇಲ್ಲಿನ ಜನರ ಜೀವನ ಮಟ್ಟ ಇನ್ನೂ ಸುಧಾರಿಸಿಲ್ಲವೇಕೆ ಎಂದು ಪ್ರಶ್ನಿಸಿದ ಅವರು, 371ಜೆ ಮೀಸಲಾತಿ ಅಡಿ ಆಯ್ಕೆಯಾದ ಇಲ್ಲಿನ ಅಧಿಕಾರಿಗಳು ಪ್ರದೇಶದ ಅಭಿವೃದ್ಧಿಗೆ ಬದ್ಧರಾಗಿರಬೇಕು. ಸ್ವ-ಹಿತಾಸಕ್ತಿ ಬದಿಗೊತ್ತಿ ಸಾರ್ವಜನಿಕ ಸೇವೆಗೆ ನಿಮ್ಮನ್ನು ನೀವು ಅರ್ಪಿಸಿಕೊಳ್ಳಿ ಎಂದರು.

ಬಿಜಾಪುರದವರಿಂದ ಕಲಬುರಗಿಯಲ್ಲಿ
ಏಕಲವ್ಯ ಕೋಚಿಂಗ್ ಕ್ಲಾಸೆಸ್
Choudari Bldg., Veerendra Patil Badavane, Sedam Road, Kalaburagi
REGULAR CLASSES - 2021-22
Admission Starts from Aug-20th
Class Starts from Aug-23rd
Regular Classes -3rd, 4th & 5th
Navodaya/Sainik/Kittur/Morarji Desai School.
Separate Hostel For Boys & Girls

...ಗಳಿಗೆ ಕಿವಿಗೊಡಬೇಡಿ ಎಂದ ಸಂಸದ, ಶಾಸಕರು

ವಿಜಯ ಕರ್ನಾಟಕ ದಿ: 12/01/2021

ಸಾರ್ವಜನಿಕರ ದೂರಿಗೆ ಸಕಾಲಕ್ಕೆ ಸ್ಪಂದಿಸಿ । ಅಧಿಕಾರಿಗಳಿಗೆ ಉಪ ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ ಸೂಚನೆ

# ಹಣ ದುರ್ಬಳಕೆ ವರದಿ ಸಲ್ಲಿಸಿ

■ **ವಿಕ ಸುದ್ದಿಲೋಕ** ವಿಜಯಪುರ

ಜಿಲ್ಲೆಯಲ್ಲಿ ಶೌಚಾಲಯ ಅನುದಾನ ದುರ್ಬಳಕೆ ಕುರಿತು ಗಂಭೀರವಾಗಿ ಪರಿಗಣಿಸಿದ್ದು, ಈ ಕುರಿತು ಸುಮೋಟೋ ಕೇಸ್ (ಸ್ವಯಂ ಪ್ರೇರೀತ ದೂರು) ದಾಖಲಿಸಿ ದುರ್ಬಳಕೆಯಾದ ಅನುದಾನ ಬಡ್ಡಿ ಸಹಿತ ವಾಪಸ್ ಪಡೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ಉಪಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ ಸಂಬಂಧಿಸಿದ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದರು.

## ನಾನಾ ಇಲಾಖೆಗಳ ಬಾಕಿ ಪ್ರಕರಣ ಪ್ರಗತಿ ಪರಿಶೀಲನಾ ಸಭೆ

ಜಿಪಂ ಸಭಾಂಗಣದಲ್ಲಿ ಸೋಮವಾರ ನಾನಾ ಇಲಾಖೆಗಳ ಬಾಕಿ ಪ್ರಕರಣಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಈವರೆಗೆ ನಿರ್ಮಿಸಿದ ವೈಯಕ್ತಿಕ, ಸಮುದಾಯ ಶೌಚಾಲಯಗಳು, ಅನುದಾನದ ಬಳಕೆ, ಅನುದಾನ ದುರ್ಬಳಕೆ ಸೇರಿದಂತೆ ಸಮಗ್ರ ಮಾಹಿತಿ ಒಳಗೊಂಡ ಪಂಚಾಯಿತಿವಾರು ವರದಿ ತಿಂಗಳೊಳಗೆ ಸಲ್ಲಿಸಬೇಕು ಎಂದು ಸೂಚನೆ ನೀಡಿದರು.

ಗ್ರಾಮೀಣ ನೈರ್ಮಲ್ಯತೆಗೆ ವಿಶೇಷ ಗಮನ ನೀಡಬೇಕು. ಬಹಿರ್ದೆಸೆ ಮುಕ್ತ ಗ್ರಾಮಗಳನ್ನಾಗಿ ರೂಪಿಸಲು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು. ಗ್ರಾಮೀಣ ನೈರ್ಮಲ್ಯ ಕುರಿತು ಎಲ್ಲ ತಾಪಂ ಇಒಗಳಿಗೆ ಜವಾಬ್ದಾರಿ ನೀಡಿ, ಆಯಾ ಗ್ರಾಮೀಣ ಅಭಿವೃದ್ಧಿ ಅಧಿಕಾರಿಗಳಿಂದ ಅವಶ್ಯಕ ಕ್ರಮಕೈಗೊಳ್ಳಲು ತಿಳಿಸಿದರು.

ಗ್ರಾಮಗಳಲ್ಲಿ ಬಹಿರ್ದೆಸೆ ಪದ್ಧತಿಯಿಂದ ಹರಡುವ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಸಾರ್ವಜನಿಕರ ದೂರುಗಳಿಗೆ ಸಕಾಲಕ್ಕೆ ಸ್ಪಂದಿಸುವ ಜತೆಗೆ ಉತ್ತಮ ಆಡಳಿತಕ್ಕಾಗಿ ತಮ್ಮ ಕರ್ತವ್ಯದಲ್ಲಿ ಚಾಕಚಕ್ಯತೆ ಹಾಗೂ ತೀಕ್ಷ್ಣತೆ ರೂಢಿಸಿಕೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಗಂಭೀರ ದೂರುಗಳು ಬಂದಲ್ಲಿ ಕಾನೂನು ಕ್ರಮ ಕೈಗೊಳ್ಳುವುದಾಗಿಯೂ ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಪಿ.ಸುನಿಲ್‌ಕುಮಾರ್, ಜಿಪಂ ಸಿಇಒ ಲಕ್ಷ್ಮಿಕಾಂತ್ ರೆಡ್ಡಿ, ಲೋಕಾಯುಕ್ತ ಪೊಲೀಸ್ ಅಧೀಕ್ಷಕಿ ಯಶೋಧಾ ಒಂಟಗೋಡಿ, ಅಡಿಷನಲ್ ಎಸ್ಪಿ ರಾಮ ಅರಿಸಿದ್ಧಿ, ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ್ ಉಪಸ್ಥಿತರಿದ್ದರು.



ವಿಜಯಪುರದಲ್ಲಿ ಉಪಲೋಕಾಯುಕ್ತ ಬಿ.ಎಸ್.ಪಾಟೀಲ ನಾನಾ ಇಲಾಖೆಗಳ ಬಾಕಿ ಪ್ರಕರಣಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

## ನೀರಾವರಿಯಲ್ಲಿ ಪ್ರಗತಿ

ಜಿಲ್ಲೆಯಲ್ಲಿ ಬೃಹತ್ ಮತ್ತು ಸಣ್ಣ ನೀರಾವರಿ ಯೋಜನೆಗಳ ವ್ಯಾಪ್ತಿಯಲ್ಲಿ ಗಣನೀಯ ಪ್ರಗತಿ ಸಾಧಿಸಿದ್ದು, ಕಾಲುವೆ ಮೂಲಕ ನೀರು ಹರಿದು ಕೆರೆಗಳ ಭರ್ತಿಯಾಗಿ ನೀರು ಪೋಲಾಗುವುದನ್ನು ತಡೆಗಟ್ಟಲು ಈವರೆಗೆ ನಿರ್ಮಿಸಿದ ಬ್ಯಾರೇಜ್, ಚೆಕ್ ಡ್ಯಾಂ ನಿರ್ಮಾಣ, ನೀರು ಪೋಲಾಗದಂತೆ ನಿರ್ವಹಣಾ ವಿಧಾನಗಳ ಬಗ್ಗೆ ಸಮಗ್ರ ವರದಿಯನ್ನು ಸಲ್ಲಿಸುವಂತೆ ಸೂಚಿಸಿದರು. ಈ ಕುರಿತು ಸೂಕ್ತ ಕ್ರಮಕ್ಕೆ ಸರಕಾರಕ್ಕೆ ನಿರ್ದೇಶನ ನೀಡಲಾಗುವುದೆಂದು ಹೇಳಿದರು.

## ಪೊಲೀಸ್ ಇಲಾಖೆಗೂ ಎಚ್ಚರಿಕೆ

ಪೊಲೀಸ್ ಇಲಾಖೆಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದೆ, ಮಾನವ ಹಕ್ಕುಗಳ ಉಲ್ಲಂಘನೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ ಬಿ.ಎಸ್. ಪಾಟೀಲ, ನಾನಾ ಇಲಾಖೆಗಳ ವ್ಯಾಪ್ತಿಯಲ್ಲಿ ಸಾರ್ವಜನಿಕ ದೂರುಗಳಿಗೆ ಸ್ಪಂದಿಸದ, ಭ್ರಷ್ಟಾಚಾರದಲ್ಲಿ ತೊಡಗಿರುವಂತಹ ಅಧಿಕಾರಿ ಮತ್ತು ಸಿಬ್ಬಂದಿ ವಿರುದ್ಧ ಲೋಕಾಯುಕ್ತ ಕಾಯ್ದೆಯಡಿ ಕ್ರಮಕೈಗೊಳ್ಳುವ ಎಚ್ಚರಿಕೆ ನೀಡಿದರು. ವಸತಿ ಯೋಜನೆಗಳಡಿ ಅರ್ಹರಿಗೆ ಸೌಲಭ್ಯ ಕಲ್ಪಿಸಬೇಕು. ಅಧಿಕಾರಿಗಳು ಸಾಮಾಜಿಕ ಬದ್ಧತೆಯೊಂದಿಗೆ ಜನರಿಗೆ ಸೇವೆ ಕಲ್ಪಿಸಬೇಕು ಎಂದು ಸೂಚನೆ ನೀಡಿದರು.

## ವಿಜಯಪುರ ಸ್ವಚ್ಛತೆಗೆ ವಿಶೇಷ ಕ್ರಮ

ವಿಜಯಪುರ ನಗರದ ಸ್ವಚ್ಛತೆ ಬಗ್ಗೆ ವಿಶೇಷ ಕ್ರಮಕೈಗೊಳ್ಳಬೇಕು ಎಂದು ಸೂಚನೆ ನೀಡಿದ ಉಪ ಲೋಕಾಯುಕ್ತರು, ಮಧ್ಯಪ್ರದೇಶದ ಇಂಧೋರ್ ಮತ್ತು ಮೈಸೂರು ಮಾದರಿಯಲ್ಲಿ ಸಮಗ್ರ ಸ್ವಚ್ಛತೆಗೆ ವಿಶೇಷ ಯೋಜನೆ ರೂಪಿಸಿ ವರದಿ ಸಲ್ಲಿಸುವಂತೆ ತಿಳಿಸಿದರು.

## ಮುಖ್ಯಾಂಶಗಳು

- ಕೋವಿಡ್ 2ನೇ ಅಲೆಯ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಿ
- ಕೋವಿಡ್ ಕಡಿಮೆ ಜಿಲ್ಲಾಡಳಿತ, ಆರೋಗ್ಯ ಇಲಾಖೆ ಕ್ರಮಕ್ಕೆ ಮೆಚ್ಚುಗೆ
- ಕೋವಿಡ್ 2ನೇ ಅಲೆ ಬಗ್ಗೆಯೂ ಮುನ್ನೆಚ್ಚರಿಕೆ ಕ್ರಮಕ್ಕೆ ಸೂಚನೆ
- ಕೈಗೊಂಡ ಕ್ರಮಗಳ ಬಗ್ಗೆ ಗಂಭೀರ ಪರಿಶೀಲನೆ, ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ

## ಸಮಗ್ರ ವರದಿ ಸಲ್ಲಿಸಿ

ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಪಿಂಚಣಿ ಸೇರಿದಂತೆ ನಾನಾ ಸೌಲಭ್ಯಗಳ ಬಾಕಿ ಪ್ರಕರಣಗಳು, ಸರಕಾರದ ಸೌಲಭ್ಯವಂಚಿತ ಮತ್ತು ನೆರೆಸಂತ್ರಸ್ತರ ಅರ್ಜಿ ಇತ್ಯರ್ಥ ಕುರಿತು ಸಮಗ್ರ ವರದಿಯನ್ನು ತಿಂಗಳಲ್ಲಿ ಸಲ್ಲಿಸಬೇಕೆಂದು ತಹಸೀಲ್ದಾರ್‌ಗಳಿಗೆ ಸೂಚಿಸಿದ ಉಪ ಲೋಕಾಯುಕ್ತರು, ಬಾಕಿ ಪ್ರಕರಣಗಳ ಬಗ್ಗೆ ನಿಗದಿತ ನಮೂನೆಯಲ್ಲಿ ವರದಿ ಸಲ್ಲಿಸುವಂತೆ ಸೂಚಿಸಿದರು. ರೈತರಿಗೆ ಕಲ್ಪಿಸಿದ ಮಣ್ಣು ತಪಾಸಣೆ ಸೌಲಭ್ಯ ಕುರಿತು ವರದಿ ಸಲ್ಲಿಕೆಗೆ ಸೂಚಿಸಿದರಲ್ಲದೆ, ಕೃಷಿಯಲ್ಲಿನ ನಷ್ಟ ತಪ್ಪಿಸಲು ರೈತರಿಗೆ ಬೆಳೆ ಸಂರಕ್ಷಣೆ ಕುರಿತು ಜಾಗೃತಿ ಆಂದೋಲನ ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಸಂಯುಕ್ತ ಕರ್ನಾಟಕ ದಿ: 12/01/2021

# ಅನುದಾನ ದುರ್ಬಳಕೆ: ಸ್ವಯಂ ಪ್ರೇರಿತ ದೂರು ದಾಖಲಿಸಿ

## ವಿವಿಧ ಇಲಾಖೆಗಳ ಬಾಕಿ ಪ್ರಕರಣಗಳ ಪ್ರಗತಿ ಪರಿಶೀಲನಾ ಸಭೆ



ವಿಜಯಪುರ ಜಿ.ಪಂ. ಸಭಾಂಗಣದಲ್ಲಿ ಉಪಲೋಕಾಯುಕ್ತ ನ್ಯಾ.ಬಿ.ಎಸ್. ಪಾಟೀಲ ಸಭೆ ನಡೆಸಿದರು.

ವಿಜಯಪುರ : ಶೌಚಾಲಯ ನಿರ್ಮಾಣದಲ್ಲಿ ಆಗಿರುವಂತಹ ಅನುದಾನ ದುರ್ಬಳಕೆ ಕುರಿತಂತೆ ಗಂಭೀರವಾಗಿ ಪರಿಗಣಿಸಲಾಗಿದ್ದು, ಈ ಕುರಿತು ಸುಮೋಟೋ ಕೇಸ್ (ಸ್ವಯಂ ಪ್ರೇರೀತ ದೂರು) ದಾಖಲು ಮಾಡಿ ಎಂದು ರಾಜ್ಯ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಬಾಕಿ ಪ್ರಕರಣಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು ಮಾತನಾಡಿದರು.

ಸಾರ್ವಜನಿಕರಿಂದ ಬರುವಂತಹ ದೂರುಗಳಿಗೆ ಸಕಾಲಕ್ಕೆ ಸ್ಪಂದಿಸುವ ಜೊತೆಗೆ ಉತ್ತಮ ಆಡಳಿತಕ್ಕಾಗಿ ತಮ್ಮ ಕರ್ತವ್ಯದಲ್ಲಿ ಚಾಕಚಕ್ಯತೆ ಹಾಗೂ ತೀಕ್ಷ್ಣತೆ ತಂದುಕೊಳ್ಳಬೇಕು. ಗ್ರಾಮೀಣ ನೈರ್ಮಲ್ಯತೆಗೆ ವಿಶೇಷ ಗಮನ ನೀಡಬೇಕು. ಬಹಿರ್ದೆಸೆ ಮುಕ್ತ ಗ್ರಾಮಗಳನ್ನಾಗಿ ರೂಪಿಸಲು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು. ಈವರೆಗೆ ನಿರ್ಮಿಸಲಾದ ವಯಕ್ತಿಕ, ಸಮುದಾಯ ಶೌಚಾಲಯಗಳ ನಿರ್ಮಾಣ, ಅನುದಾನದ ಸಮರ್ಪಕ ಬಳಕೆ, ಅನುದಾನ ದುರ್ಬಳಕೆ ಸೇರಿದಂತೆ ಸಮಗ್ರ ಮಾಹಿತಿಯನ್ನು ಒಳಗೊಂಡ ವರದಿಯನ್ನು ಪ್ರತಿ ಗ್ರಾಮ ಪಂಚಾಯತಿವಾರು ಮುಂದಿನ ಒಂದು ತಿಂಗಳ ಅವಧಿಯಲ್ಲಿ ಸಲ್ಲಿಸಬೇಕು ಎಂದು ಅವರು ಸೂಚನೆ ನೀಡಿದರು.

ದುರ್ಬಳಕೆಯಾಗಿರುವ ಅನುದಾನ ಬಡ್ಡಿ ಸಹಿತ ವಾಪಸ್ ಪಡೆಯಲು ಲೋಕಾಯುಕ್ತ ಅಧಿಕಾರಿ ಮತ್ತು ಸಿಬ್ಬಂದಿಗಳಿಂದ ಸೂಕ್ತ ಕ್ರಮಕ್ಕೆ ಮತ್ತು ಗ್ರಾಮೀಣ ನೈರ್ಮಲ್ಯ ಕಾಪಾಡುವ ಕುರಿತಂತೆ ಎಲ್ಲ ತಾಲೂಕ ಪಂಚಾಯತಿ ಕಾರ್ಯನಿರ್ವಹಣಾ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ, ಆಯಾ ಗ್ರಾಮೀಣ ಅಭಿವೃದ್ಧಿ ಅಧಿಕಾರಿಗಳಿಂದ ಅವಶ್ಯಕ ಕ್ರಮ ಕೈಗೊಳ್ಳಲು ಅವರು ಸೂಚನೆ ನೀಡಿದರು.

ಅದರಂತೆ ಜಿಲ್ಲೆಯಲ್ಲಿ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಪಿಂಚಣಿ ಸೇರಿದಂತೆ ವಿವಿಧ ಸೌಲಭ್ಯಗಳ ಬಾಕಿ ಪ್ರಕರಣಗಳು, ಸರ್ಕಾರದ ಸೌಲಭ್ಯ ವಂಚಿತ ಮತ್ತು ನೆರೆಸಂತ್ರಸ್ತರ ಅರ್ಜಿ ಇತ್ಯರ್ಥ ಕುರಿತು ಸಮಗ್ರ ವಿವರಣೆ ಒಳಗೊಂಡ ವರದಿಗಳನ್ನು ಸಹ ಪ್ರತಿ ತಹಶೀಲ್ದಾರರು ಒಂದು ತಿಂಗಳಲ್ಲಿ ಸಲ್ಲಿಸಬೇಕು. ವಿವರಣೆಯನ್ನು, ಬಾಕಿ ಪ್ರಕರಣಗಳ ಬಗ್ಗೆ ನಿಗದಿತ ನಮೂನೆಯಲ್ಲಿ ವರದಿ ಸಲ್ಲಿಸುವಂತೆ ಅವರು ಸೂಚಿಸಿದರು.

ಪಾರದರ್ಶಕ ಆಡಳಿತ, ಸಾರ್ವಜನಿಕರ ದೂರುಗಳನ್ನು ಸಕಾಲಕ್ಕೆ ಇತ್ಯರ್ಥ ಮತ್ತು ಸರ್ಕಾರದ ಸೌಲಭ್ಯಗಳು ಬಾಕಿ ಉಳಿಯದಂತೆ ನಿಗಾ ಇಡಬೇಕು. ಪ್ರತಿ ತಾಲೂಕಿನಲ್ಲಿ ಬರುವಂತಹ ಸಾರ್ವಜನಿಕ ದೂರುಗಳನ್ನು ತಕ್ಷಣ ಇತ್ಯರ್ಥ ಪಡಿಸುವಂತೆ ಸೂಚನೆ ನೀಡಿದರು.

ರೈತರಿಗೆ ಸರ್ಕಾರದ ಸೌಲಭ್ಯಗಳು ಸಕಾಲಕ್ಕೆ ದೊರೆಯಲು ಮತ್ತು ತಮ್ಮ ವ್ಯವಸಾಯದಲ್ಲಿ ಆಗುವಂತಹ ನಷ್ಟ ತಪ್ಪಿಸಲು ಮಣ್ಣು ತಪಾಸಣೆ, ಸಸಿ, ಬೆಳೆ ಸಂರಕ್ಷಣೆ, ರಸ ಗೊಬ್ಬರಗಳ ಸಮರ್ಪಕ ಬಳಕೆಯ ಬಗ್ಗೆ ಜಾಗೃತಿ ಮೂಡಿಸಬೇಕು. ಗ್ರಾಮವಾರು ಈವರೆಗೆ ರೈತರಿಗೆ ಈ ರೀತಿ ಮಣ್ಣು ತಪಾಸಣೆ ಸೌಲಭ್ಯ ಕಲ್ಪಿಸಿದ ಬಗ್ಗೆ ವರದಿ ಸಲ್ಲಿಸಬೇಕು. ರೈತರಿಗೆ ಸೂಕ್ತ ಮಾರ್ಗಸೂಚಿಯನ್ನು ನೀಡುವ ಅರಿವು ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲು ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗೆ ಕೈಗೊಂಡ ಕ್ರಮಗಳ ವರದಿಯನ್ನು ಸಲ್ಲಿಸಬೇಕು, ವಿವಿಧ ಬೆಳೆಗಳಿಗೆ ರೋಗ ನಿಯಂತ್ರಣ ಹತೋಟಿ ಕ್ರಮಗಳ ಬಗ್ಗೆ ವರದಿ ಸಲ್ಲಿಸಬೇಕು. ಕೃಷಿ ಮತ್ತು ತೋಟಗಾರಿಕೆ ವ್ಯಾಪ್ತಿಯಲ್ಲಿ ರೈತರಿಗೆ ಬೆಳೆ ಸಂರಕ್ಷಣಾ ಕ್ರಮಗಳ ಬಗ್ಗೆ ಜಾಗೃತಿ ಆಂದೋಲನ ಹಮ್ಮಿಕೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ಬೃಹತ್ ಮತ್ತು ಸಣ್ಣ ನೀರಾವರಿ ಯೋಜನೆಗಳು ವ್ಯಾಪ್ತಿಯಲ್ಲಿ ಗಣನೀಯ ಪ್ರಗತಿ ಸಾಧಿಸಿದ್ದು, ವಿವಿಧ ಕಾಲುವೆಗಳ ಮೂಲಕ ನೀರು ಹರಿದು ಕೆರೆಗಳ ಭರ್ತಿಯಾಗಿ ನೀರು ಪೋಲಾಗಿ ಹೋಗುವುದನ್ನು ತಡೆಗಟ್ಟಲು ಈವರೆಗೆ ನಿರ್ಮಿಸಿದ ಬ್ಯಾರೇಜ್, ಚೆಕ್‌ಡ್ಯಾಮ್ ನಿರ್ಮಾಣ ವಿವರ, ನೀರು ಪೋಲಾಗದಂತೆ ನಿರ್ವಹಣಾ ವಿಧಾನಗಳ ಬಗ್ಗೆ ಸಮಗ್ರ ವರದಿಯನ್ನು ಸಲ್ಲಿಸುವಂತೆ ತಿಳಿಸಿದ ಅವರು ಈ ಕುರಿತು ಸೂಕ್ತ ಕ್ರಮಕ್ಕೆ ಸರ್ಕಾರಕ್ಕೆ ನಿರ್ದೇಶನ ಸಹ ನೀಡಲಾಗುವುದೆಂದರು.

ನೀರಾವರಿ ಯೋಜನೆಗಳ ವ್ಯಾಪ್ತಿಯಲ್ಲಿ ಕಾಲುವೆ ನಿರ್ಮಾಣ ಮತ್ತು ಇತರೆ ಕಾಮಗಾರಿಗಳಿಗೆ ಸ್ವಾಧೀನ ಪಡಿಸಿಕೊಳ್ಳಲಾಗುವ ಭೂಮಿಗೆ ಸಂಬಂಧಪಟ್ಟಂತೆ ನಿಗದಿತ ಪರಿಹಾರ ದೊರಕಿಸಿ ಯೋಜನ ಜಾರಿಗೊಳಿಸಲು ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರಿ ಸೇವೆಯಲ್ಲಿರುವ ಪ್ರತಿಯೊಬ್ಬ ಅಧಿಕಾರಿ ಮತ್ತು ಸಿಬ್ಬಂದಿಗಳು ಶೇ.100 ರಷ್ಟು ಸೇವೆ ಕಲ್ಪಿಸಬೇಕು. ಜನರ ತೊಂದರೆಗಳಿಗೆ ತಕ್ಷಣ ಸ್ಪಂದಿಸಬೇಕು. ಹೆಚ್ಚಿನ ದೂರುಗಳಿಗೆ ಅವಕಾಶ ನೀಡದೆ ನ್ಯಾಯಸಮ್ಮತ, ಪಾರದರ್ಶಕ ರೀತಿಯಲ್ಲಿ ಸೇವೆ ಕಲ್ಪಿಸಬೇಕು. ಗಂಭೀರ ರೀತಿಯ ದೂರುಗಳು ಬಂದಲ್ಲಿ ಕಾನೂನಿನ ರೀತಿ ಕ್ರಮಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಜಿಲ್ಲೆಯಲ್ಲಿ ಪ್ರವಾಹ ಸಂದರ್ಭದಲ್ಲಿ ಜಿಲ್ಲಾಡಳಿತ ಕೈಗೊಂಡ ಕ್ರಮಗಳ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿ, ಅದರಂತೆ ಕೋವಿಡ್ ಹಿನ್ನೆಲೆಯಲ್ಲಿ ಪರಿಣಾಮಕಾರಿಯಾಗಿ ಕ್ರಮಗಳನ್ನು ಕೈಗೊಂಡಿರುವುದಕ್ಕೆ ಹಾಗೂ ಕೋವಿಡ್-19 ಪಾಸಿಟಿವ್ ಪ್ರಮಾಣ ಕಡಿಮೆ ಮಾಡಿರುವುದಕ್ಕೆ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು ಕೋವಿಡ್ ಎರಡನೆ ಅಲೆಯ ಬಗ್ಗೆ ಸೂಕ್ತ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು.

ಸಾಮಾಜಿಕ ಅಂತರ, ಮಾಸ್ಕ್ ಧರಿಸುವ ಕುರಿತು ಆರೋಗ್ಯ ಕಾರ್ಯಕರ್ತರಿಂದ ಸೂಕ್ತ ಅರಿವು ಮೂಡಿಸಬೇಕು. ವಿವಿಧ ಗ್ರಾಮಗಳಲ್ಲಿ ಬಹಿರ್ದೆಸೆ ಪದ್ಧತಿಯಿಂದ ಹರಡುವ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು. ವಿಜಯಪುರ ನಗರದ ಸ್ವಚ್ಛತೆ ಬಗ್ಗೆ ವಿಶೇಷ ಕ್ರಮಕೈಗೊಳ್ಳಬೇಕು. ಮಧ್ಯಪ್ರದೇಶದ ಇಂದೋರ್ ಮತ್ತು ಮೈಸೂರ ಮಾದರಿಯಲ್ಲಿ ಸಮಗ್ರ ಸ್ವಚ್ಛತೆಗೆ ವಿಶೇಷ ಯೋಜನೆ ರೂಪಿಸಿ ವರದಿ ಸಲ್ಲಿಸುವಂತೆ ಅವರು ಸೂಚನೆ ನೀಡಿದರು.

ವಿವಿಧ ವಸತಿ ಯೋಜನೆಗಳಡಿ ಅರ್ಹರಿಗೆ ಸೌಲಭ್ಯ ಕಲ್ಪಿಸಬೇಕು. ಅನರ್ಹರಿಗೆ ಈ ಸೌಲಭ್ಯ ದೊರೆಯಬಾರದು. ಅಧಿಕಾರಿಗಳು ಸಾಮಾಜಿಕ ಬದ್ಧತೆಯೊಂದಿಗೆ ಜನರಿಗಾಗಿ ಸೇವೆ ಕಲ್ಪಿಸಬೇಕು. ಕರ್ತವ್ಯದಲ್ಲಿ ಬದ್ಧತೆ ಮತ್ತು ತಕ್ಷಣ ಸ್ಪಂದಿಸಬೇಕು. ಮುಂಬರುವ ದಿನಗಳಲ್ಲಿ ಜಿಲ್ಲೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಗಂಭೀರವಾಗಿ ಪರಿಶೀಲಿಸುವ ಜೊತೆಗೆ ಹಾಗೂ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಪಿ.ಸುನೀಲಕುಮಾರ, ಸಿಇಓ ಲಕ್ಷ್ಮೀಕಾಂತ್ ರೆಡ್ಡಿ, ಲೋಕಾಯುಕ್ತ ಪೊಲೀಸ್ ಅಧೀಕ್ಷಕಿ ಯಶೋಧಾ ಒಂಟಗೋಡಿ, ಎಎಸ್‌ಪಿ ಡಾ.ರಾಮ ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ್ ಉಪಸ್ಥಿತರಿದ್ದರು.

ಪ್ರಜಾವಾಣಿ· ದಿ; 12/01/2021

ೌಚಾಲಯ ನಿರ್ಮಾಣ: ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಸೂಚನೆ

# ಅನುದಾನ ದುರ್ಬಳಕೆ ವಿರುದ್ಧ ಕ್ರಮ

ಜಾವಾಣಿ ವಾರ್ತೆ

ಜಯಪುರ: ಜಿಲ್ಲೆಯಲ್ಲಿ ಶೌಚಾಲಯ ರ್ಮಾಣದಲ್ಲಿ ಆಗಿರುವ ಅನುದಾನ ುರ್ಬಳಕೆ ವಿರುದ್ಧ ಸ್ವಯಂ ್ರೇರಿತ ದೂರು ದಾಖಲು ಮಾಡಿ, ುರ್ಬಳಕೆಯಾಗಿರುವ ಅನುದಾನ ಬಡ್ಡಿ ಸಹಿತ ವಾಪಸ್ ಪಡೆಯಲು ಕ್ರಮಕೈಗೊಳ್ಳಲಾಗುವುದು ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಹೇಳಿದರು.

ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿ ಸೋಮವಾರ ವಿವಿಧ ಇಲಾಖೆಗಳ ಬಾಕಿ ಪ್ರಕರಣಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈವರೆಗೆ ವೈಯಕ್ತಿಕ, ಸಮುದಾಯ ಶೌಚಾಲಯಗಳ ನಿರ್ಮಾಣ, ಅನುದಾನದ ಸಮರ್ಪಕ ಬಳಕೆ, ಅನುದಾನ ದುರ್ಬಳಕೆ ಸೇರಿದಂತೆ ಸಮಗ್ರ ಮಾಹಿತಿಯನ್ನು ಒಳಗೊಂಡ ವರದಿಯನ್ನು ಪ್ರತಿ ಗ್ರಾಮ ಪಂಚಾಯ್ತಿವಾರು ಮುಂದಿನ ಒಂದು ತಿಂಗಳ ಅವಧಿಯಲ್ಲಿ ಸಲ್ಲಿಸಬೇಕು ಎಂದು ಅವರು ಸೂಚನೆ ನೀಡಿದರು.

ಗ್ರಾಮೀಣ ನೈರ್ಮಲ್ಯತೆಗೆ ವಿಶೇಷ ಗಮನ ನೀಡಬೇಕು. ಬಹಿರ್ದೆಸೆ ಮುಕ್ತ ಗ್ರಾಮಗಳನ್ನಾಗಿ ರೂಪಿಸಲು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮೀಣ ನೈರ್ಮಲ್ಯ ಕಾಪಾಡುವ ಕುರಿತಂತೆ ಎಲ್ಲ ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಹಣಾ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ, ಆಯಾ ಗ್ರಾಮೀಣ ಅಭಿವೃದ್ಧಿ ಅಧಿಕಾರಿಗಳಿಂದ ಅವಶ್ಯಕ ಕ್ರಮ ಕೈಗೊಳ್ಳಲು ತಿಳಿಸಿದರು.

ಜಿಲ್ಲೆಯಲ್ಲಿ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಪಿಂಚಣಿ ಸೇರಿದಂತೆ ವಿವಿಧ ಸೌಲಭ್ಯಗಳ ಬಾಕಿ ಪ್ರಕರಣಗಳು, ಸರ್ಕಾರದ ಸೌಲಭ್ಯ ವಂಚಿತ ಮತ್ತು ನೆರೆ ಸಂತ್ರಸ್ತರ ಅರ್ಜಿ ಇತ್ಯರ್ಥ ಕುರಿತು ಸಮಗ್ರ ವಿವರಣೆ ಒಳಗೊಂಡ ವರದಿಯನ್ನು ಸಹ ಪ್ರತಿ ತಹಶೀಲ್ದಾರರು ಒಂದು ತಿಂಗಳಲ್ಲಿ ಸಲ್ಲಿಸಬೇಕು ಎಂದರು.

ಸಾರ್ವಜನಿಕರ ದೂರುಗಳನ್ನು ಸಕಾಲಕ್ಕೆ ಇತ್ಯರ್ಥ ಪಡಿಸಬೇಕು ಮತ್ತು ಸರ್ಕಾರದ ಸೌಲಭ್ಯಗಳು ಬಾಕಿ ಉಳಿಯದಂತೆ ನಿಗಾ ಇಡಬೇಕು. ಪ್ರತಿ ತಾಲ್ಲೂಕಿನಲ್ಲಿ ಬರುವಂತಹ ಸಾರ್ವಜನಿಕರ ದೂರುಗಳನ್ನು ತಕ್ಷಣ ಇತ್ಯರ್ಥ ಪಡಿಸುವಂತೆ ಅವರು ಸೂಚನೆ ನೀಡಿದರು.

ರೈತರಿಗೆ ಸರ್ಕಾರದ ಸೌಲಭ್ಯಗಳು ಸಕಾಲಕ್ಕೆ ದೊರೆಯಲು ಮತ್ತು ತಮ್ಮ ವ್ಯವಸಾಯದಲ್ಲಿ ಅಗುವಂತಹ ನಷ್ಟ ತಪ್ಪಿಸಲು ಮಣ್ಣು ತಪಾಸಣೆ, ಸಸಿ, ಬೆಳೆ ಸಂರಕ್ಷಣೆ, ರಸ ಗೊಬ್ಬರಗಳ ಸಮರ್ಪಕ ಬಳಕೆಯ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.



ವಿಜಯಪುರದ ಕಾಳಿಕಾನಗರಕ್ಕೆ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಸೋಮವಾರ ಭೇಟಿ ನೀಡಿ ಪರಿಶೀಲಿಸಿದರು

## ಖಾಲಿ ನಿವೇಶನ: ಸ್ವಚ್ಛತೆ ಕಾಪಾಡದವರಿಗೆ ನೋಟಿಸ್ ನೀಡಿ

ವಿಜಯಪುರ: ಇಲ್ಲಿನ ಕಾಳಿಕಾನಗರಕ್ಕೆ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್ ಪಾಟೀಲ ಸೋಮವಾರ ಭೇಟಿ ನೀಡಿ ಪರಿಶೀಲಿಸಿದರು.

ಖಾಲಿ ಇದ್ದ ಜಾಗಗಳನ್ನು ಸ್ವಚ್ಛಗೊಳಿಸಬೇಕು. ಇಲ್ಲದಿದ್ದರೆ ಖಾಲಿ ಜಾಗದಲ್ಲಿ ಸಾರ್ವಜನಿಕರು ಕಸಕಡ್ಡಿ ಎಸೆಯುತ್ತಾರೆ. ಸ್ವಚ್ಛತೆಗೆ ಮೊದಲು ಆದ್ಯತೆ ನೀಡಿ, ಖಾಲಿ ನಿವೇಶನದ ಮಾಲೀಕರಿಗೆ ನೋಟಿಸ್ ಜಾರಿ ಮಾಡಿ, ಸ್ವಚ್ಛಗೊಳಿಸಿದ ಖರ್ಚನ್ನು ಅವರಿಂದ ವಸೂಲಿ ಮಾಡಿ ಎಂದು ಸೂಚಿಸಿದರು.

ಗುರುರಾಜ ಕಾಲೊನಿಯಲ್ಲಿರುವ ಕಂದಕಕ್ಕೆ ಭೇಟಿ ನೀಡಿ ಕಂದಕದಲ್ಲಿರುವ ಕಸವನ್ನು ಸ್ವಚ್ಛಗೊಳಿಸಿ, ಅದರಲ್ಲಿರುವ ನೀರನ್ನು ಸ್ವಚ್ಛಗೊಳಿಸಿ ಅದರಲ್ಲಿರುವ ನೀರನ್ನು ವಾಣಿಜ್ಯೋದ್ಯಮಕ್ಕೆ ಬಳಸುವಂತೆ ಯೋಜನೆ ರೂಪಿಸಲು ಸೂಚಿಸಿದರು.

ಕಂದಕದ ಸುತ್ತಲೂ ಯಾವುದೇ ದನ, ಕರುಗಳು ಹೋಗದಂತೆ ಗೋಡೆ ನಿರ್ಮಿಸಲು ಕ್ರಮ ಕೈಗೊಳ್ಳಿ ಎಂದು ಅವರು ಹೇಳಿದರು. ಯಾವುದೇ ಸಾರ್ವಜನಿಕ ಆಸ್ತಿಗಳು ಒತ್ತುವರಿಯಾಗದಂತೆ ನೋಡಿಕೊಳ್ಳಿ ಎಂದು ಅವರು ಅಧಿಕಾರಿಗಳಿಗೆ ಹೇಳಿದರು.

### ಮುಖ್ಯಾಂಶಗಳು

- ವಿಜಯಪುರದ ಸ್ವಚ್ಛತೆಗೆ ವಿಶೇಷ ಯೋಜನೆ ರೂಪಿಸಿ
- ಭ್ರಷ್ಟಾಚಾರದಲ್ಲಿ ತೊಡಗಿರುವ ಅಧಿಕಾರಿಗಳ ವಿರುದ್ಧ ಕ್ರಮ
- ಸಾರ್ವಜನಿಕರ ದೂರುಗಳನ್ನು ತಕ್ಷಣ ಇತ್ಯರ್ಥಪಡಿಸಿ

ಗ್ರಾಮವಾರು ಈವರೆಗೆ ರೈತರಿಗೆ ಮಣ್ಣು ತಪಾಸಣೆ ಸೌಲಭ್ಯ ಕಲ್ಪಿಸಿದ ಬಗ್ಗೆ, ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗೆ ಕೈಗೊಂಡ ಕ್ರಮಗಳು, ವಿವಿಧ ಬೆಳೆಗಳಿಗೆ ರೋಗ ನಿಯಂತ್ರಣ ಹತೋಟಿ ಕ್ರಮಗಳ ಬಗ್ಗೆ ವರದಿ ಸಲ್ಲಿಸಬೇಕು ಎಂದರು.

ಜಿಲ್ಲೆಯಲ್ಲಿ ಬೃಹತ್ ಮತ್ತು ಸಣ್ಣ ನೀರಾವರಿ ಯೋಜನೆಗಳ ವ್ಯಾಪ್ತಿಯಲ್ಲಿ ಗಣನೀಯ ಪ್ರಗತಿ ಸಾಧಿಸಿದ್ದು, ವಿವಿಧ ಕಾಲುವೆಗಳ ಮೂಲಕ ನೀರು ಹರಿದು ಕೆರೆಗಳು ಭರ್ತಿಯಾಗಿ ನೀರು ಪೋಲಾಗಿ ಹೋಗುವುದನ್ನು ತಡೆಗಟ್ಟಲು ಈವರೆಗೆ ನಿರ್ಮಿಸಿದ ಬ್ಯಾರೇಜ್, ಚೆಕ್‌ಡ್ಯಾಮ್ ನಿರ್ಮಾಣದ ವಿವರ, ನೀರು ಪೋಲಾಗದಂತೆ ನಿರ್ವಹಣಾ ವಿಧಾನಗಳ ಬಗ್ಗೆ ಸಮಗ್ರ ವರದಿಯನ್ನು ಸಲ್ಲಿಸುವಂತೆ ತಿಳಿಸಿದರು.

ನೀರಾವರಿ ಯೋಜನೆಗಳ ವ್ಯಾಪ್ತಿಯಲ್ಲಿ ಕಾಲುವೆ ನಿರ್ಮಾಣ ಮತ್ತು ಇತರೆ ಕಾಮಗಾರಿಗಳಿಗೆ ಸ್ವಾಧೀನ ಪಡಿಸಿಕೊಳ್ಳಲಾಗುವ ಭೂಮಿಗೆ ಸಂಬಂಧಪಟ್ಟಂತೆ ನಿಗದಿತ ಪರಿಹಾರ ದೊರಕಿಸಿ, ಯೋಜನೆ ಜಾರಿಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರಿ ಸೇವೆಯಲ್ಲಿರುವ ಪ್ರತಿಯೊಬ್ಬ ಅಧಿಕಾರಿ ಮತ್ತು ಸಿಬ್ಬಂದಿ ಜನರ ತೊಂದರೆಗಳಿಗೆ ತಕ್ಷಣ ಸ್ಪಂದಿಸಬೇಕು. ಹೆಚ್ಚಿನ ದೂರುಗಳಿಗೆ ಅವಕಾಶ ನೀಡದೆ ನ್ಯಾಯಸಮ್ಮತ, ಪಾರದರ್ಶಕ ರೀತಿಯಲ್ಲಿ ಸೇವೆ ಕಲ್ಪಿಸಬೇಕು. ಗಂಭೀರ ರೀತಿಯ ದೂರುಗಳು ಬಂದಲ್ಲಿ ಕಾನೂನಿನ ರೀತ್ಯ ಕ್ರಮಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು. ವಿವಿಧ ಗ್ರಾಮಗಳಲ್ಲಿ ಬಹಿರ್ದೆಸೆಯಿಂದ ಹರಡುವ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

> ಜನರ ದೂರುಗಳಿಗೆ ಸಕಾಲಕ್ಕೆ ಸ್ಪಂದಿಸುವ ಜೊತೆಗೆ ಉತ್ತಮ ಆಡಳಿತಕ್ಕಾಗಿ ಕರ್ತವ್ಯದಲ್ಲಿ ಚಾಕಚಕ್ಯತೆ ಹಾಗೂ ತೀಕ್ಷ್ಣತೆ ತಂದುಕೊಳ್ಳಬೇಕು
>
> **ನ್ಯಾ.ಬಿ.ಎಸ್. ಪಾಟೀಲ**
> ಉಪ ಲೋಕಾಯುಕ್ತ

ವಿಜಯಪುರ ನಗರದ ಸ್ವಚ್ಛತೆ ಬಗ್ಗೆ ವಿಶೇಷ ಕ್ರಮಕೈಗೊಳ್ಳಬೇಕು. ಮಧ್ಯಪ್ರದೇಶದ ಇಂದೋರ್ ಮತ್ತು ಮೈಸೂರು ಮಾದರಿಯಲ್ಲಿ ಸಮಗ್ರ ಸ್ವಚ್ಛತೆಗೆ ವಿಶೇಷ ಯೋಜನೆ ರೂಪಿಸಿ ವರದಿ ಸಲ್ಲಿಸುವಂತೆ ಅವರು ಸೂಚಿಸಿದರು.

ಪೊಲೀಸ್ ಇಲಾಖೆ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದರು.

ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರ ದೂರುಗಳಿಗೆ ಸ್ಪಂದಿಸದ, ಭ್ರಷ್ಟಾಚಾರದಲ್ಲಿ ತೊಡಗಿರುವಂತಹ ಅಧಿಕಾರಿ ಮತ್ತು ಸಿಬ್ಬಂದಿಗಳ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯಡಿ ಸೂಕ್ತ ಕ್ರಮಕೈಗೊಳ್ಳುವದಾಗಿ ಅವರು ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಪಿ.ಸುನೀಲ್ ಕುಮಾರ್, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ, ಲೋಕಾಯುಕ್ತ ಎಸ್‌ಪಿ ಯಶೋಧಾ ಒಂಟಗೋಡಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮ ಅರಿಸಿದ್ದಿ, ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಔದ್ರಾಮ್ ಇದ್ದರು.

ಕನ್ನಡಪ್ರಭ ದಿ: 12/01/2021

# ಖೊಟ್ಟಿ ಠರಾವು ಮಂಡಿಸಿ ಆಸ್ತಿ ಕಬಳಿಕೆ: ದೂರು



ವಿಜಯಪುರ ಜಿಪಂ ಸಭಾಂಗಣದ ಮುಂಭಾಗ ರಾಜ್ಯ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರಿಗೆ ಡಾ. ಚನ್ನಬಸಪ್ಪ ಬೆಳಗಾವಿ ಮನವಿ ಸಲ್ಲಿಸಿದರು.

• **ಕನ್ನಡಪ್ರಭ ವಾರ್ತೆ** ವಿಜಯಪುರ

ತಿಕೋಟಾ ಗ್ರಾಪಂನಲ್ಲಿ ಖೊಟ್ಟಿ ಠರಾವು ಮಂಡಿಸಿ ಆಸ್ತಿ ಕಬಳಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವು ತಿಂಗಳುಗಳಿಂದ ನ್ಯಾಯಕ್ಕಾಗಿ ಅಲೆದಾಡುತ್ತಿರುವ ಖಾಸಗಿ ಆಸ್ಪತ್ರೆ ವೈದ್ಯನೋರ್ವ ಉಪ ಲೋಕಾಯುಕ್ತರ ಮುಂದೆ ಅಳಲು ತೋಡಿಕೊಂಡ ಪ್ರಸಂಗ ನಡೆಯಿತು.

ನಗರದ ಜಿಪಂ ಸಭಾಂಗಣದಲ್ಲಿ ಸೋಮವಾರ ಅಧಿಕಾರಿಗಳ ಸಭೆ ಮುಗಿಸಿ ಹೊರ ಬಂದ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಅವರಿಗೆ ಮನವಿ ಸಲ್ಲಿಸಿರುವ ವೈದ್ಯ ಚನ್ನಬಸಪ್ಪ ಉರ್ಫ್ ರಾಜು ಬೆಳಗಾವಿ, ಪ್ರಕರಣದಡಿ ಕ್ರಮ ಕೈಗೊಳ್ಳಲು ವಿಳಂಬ ನೀತಿ ಅನುಸರಿಸುತ್ತಿರುವ ಅಧಿಕಾರಿಗಳ ನಡೆ ಬಗ್ಗೆ ನೋವು ತೋಡಿಕೊಂಡರು. ತಿಕೋಟಾ ಗ್ರಾಪಂನ ಈ ಹಿಂದಿನ ಪಿಡಿಒ ಹಾಗೂ 29 ಸದಸ್ಯರು ಸೇರಿ ಜೀವಂತವಿದ್ದ ಅಜ್ಜಿಯನ್ನು ಸತ್ತಿರುವುದಾಗಿ ಠರಾವು ಮಂಡಿಸಿ ಅಜ್ಜಿ ಹೆಸರಿನ ಆಸ್ತಿಯನ್ನು ಬೇರೊಬ್ಬರ ಹೆಸರಿಗೆ ನೋಂದಾಯಿಸಿ ಠರಾವು ಮಂಡಿಸಿದ್ದಾರೆ. ಈ ಬಗ್ಗೆ ತಿಕೋಟಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಹ ದಾಖಲಾಗಿದೆ. ಆದರೂ ಈವರೆಗೆ ಕ್ರಮವಾಗಿಲ್ಲ. ಈ ಠರಾವು ರದ್ದತಿಗಾಗಿ ತಾಪಂ ಇಒ ಸುಮಾರು 15 ತಿಂಗಳ ಸುದೀರ್ಘ ತನಿಖೆ ನಡೆಸಿ ಇದೀಗ ಅಸ್ತಿತ್ವಕ್ಕೆ ಬಂದಿರುವ ತಾಪಂನ ನೂತನ ಅಧ್ಯಕ್ಷರ ಮೇಲ್ಮನವಿ ದಾಖಲಿಸಿ 5 ತಿಂಗಳಾದರೂ ಕ್ರಮವಾಗಿಲ್ಲ. ಇನ್ನಾದರೂ ನ್ಯಾಯ ಒದಗಿಸಬೇಕು ಎಂದು ಮನವಿ ಮಾಡಿದರು. ಈ ಬಗ್ಗೆ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

# ದುರಗಮುರಗಿ ಜನಾಂಗಕ್ಕೆ ಸೌಲಭ್ಯ ಒದಗಿಸಿ



ಆಲಮಟ್ಟಿ: ಸ್ಥಳೀಯ ಮಯೂರಕೃಷ್ಣಪ್ರವಾಸಿ ಮಂದಿರದಲ್ಲಿ ಉಪಲೋಕಾಯುಕ್ತರಾದ ಬಿ.ಎಸ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಸಾಮಾಜಿಕ ಸಮಸ್ಯೆ, ದೂರುಗಳ ನಿವಾರಣೆ ಸಭೆ ನಡೆಯಿತು.

ಸಭೆಯಲ್ಲಿ ವಿಜಯಪುರ ಜಿಲ್ಲೆಯ ಹೊನವಾಡ ಗ್ರಾಮದಲ್ಲಿ ಕಳೆದ 70–80 ವರ್ಷಗಳಿಂದ ವಾಸವಾಗಿರುವ ದುರಗಮುರಗಿ ಜನಾಂಗದ ಕುಟುಂಬಗಳಿಗೆ ನಾಗರಿಕ ಸೌಲಭ್ಯಗಳು ಮರೀಚಿಕೆಯಾಗಿ ಅವರು ಹಂದಿ ಸಾಗಾಣಿಕೆ, ದುರಗಮುರಗಿ ಉದ್ಯೋಗ ಹಾಗೂ ತಾವೂ ಭಿಕ್ಷಾಟನೆ ಮಾಡುವದರೊಂದಿಗೆ ಮಕ್ಕಳಿಗೂ ಭಿಕ್ಷಾಟನೆ ಮಾಡಿಸಲಾಗುತಿತ್ತು. ಇದರಿಂದ ಅವರ ಮಕ್ಕಳು ಶಿಕ್ಷಣ ಹಾಗೂ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದರಿಂದ ಲೋಕಾಯುಕ್ತ ಅಧಿಕಾರಿಗಳು ಸಂಬಂಧಿಸಿದ ತಾಲೂಕಾಡಳಿತ ಹಾಗೂ ಗ್ರಾಮಪಂಚಾಯತಿ ಅಧಿಕಾರಿಗಳನ್ನು ದುರಗಮುರಗಿ ಕಾಲನಿಗೆ ಕರೆದುಕೊಂಡು ಹೋಗಿ ವಾಸ್ತವ ಚಿತ್ರಣವನ್ನು ತೋರಿಸಿ ಆ ಕಾಲನಿಯಲ್ಲಿರುವ ಕುಟುಂಬಗಳಿಗೆ ಪಡಿತರ ಚೀಟಿ, ಮತದಾರರ ಪಟ್ಟಿಯಲ್ಲಿ ಹೆಸರು, ವಸತಿ ಯೋಜನೆಯಲ್ಲಿ ವಸತಿ, ಮಕ್ಕಳಿಗೆ ಶಿಕ್ಷಣ ಸೇರಿದಂತೆ ಅಗತ್ಯ ಮೂಲ ಸೌಲಭ್ಯಗಳನ್ನು ಒದಗಿಸಿರುವ ಬಗ್ಗೆ ವಿಜಯಪುರ ಲೋಕಾಯುಕ್ತ ಡಿವೈಎಸ್ಪಿಯವರು ಮಾಹಿತಿ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಉಪಲೋಕಾಯುಕ್ತರಾದ ಬಿ.ಎಸ್. ಪಾಟೀಲ ಅವರು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಈಗಾಗಲೇ ಪ್ರವಾಸ ಕೈಗೊಳ್ಳಲಾಗಿದ್ದು ಅದರನ್ವಯ ವಿಜಯಪುರ ಜಿಲ್ಲೆಯ ಗ್ರಾಮೀಣ ಸಮಸ್ಯೆ, ಪಟ್ಟಣ, ತಾಲೂಕು, ಜಿಲ್ಲೆಗಳಲ್ಲಿ ಹಲವಾರು ಸಮಸ್ಯೆಗಳಿರುತ್ತವೆ ಅವುಗಳ ಪರಿಹಾರಕ್ಕೆ ಅಧಿಕಾರಿಗಳು ಯಾವ ಕ್ರಮಕೈಗೊಂಡಿದ್ದಾರೆ. ಆನರ ಸಮಸ್ಯೆಗಳಿಗ ಸ್ಥಳೀಯ ಅಧಿಕಾರಿಗಳು ಯಾವ ರೀತಿ ಸಮಸ್ಯೆಯನ್ನು ಬಗೆಹರಿಸಿರುತ್ತಾರೆ ಮತ್ತು ಯಾವ ಕಾರಣಕ್ಕೆ ಅಧಿಕಾರಿಗಳಿಂದ ಸಮಸ್ಯೆ ಇತ್ಯರ್ಥವಾಗಿಲ್ಲ ಎನ್ನುವದನ್ನು ಚರ್ಚಿಸಿ ಸೂಕ್ತಕ್ರಮ ಕೈಗೊಳ್ಳುವರೊಂದಿಗೆ ಜಿಲ್ಲೆಗೆ ಭೇಟಿ ನೀಡಿದ್ದೇನೆ.

ಈ ಹಿಂದೆ, ಉಡುಪಿ, ಬೆಂಗಳೂರು, ಮಂಗಳೂರ, ಮೈಸೂರು ಜಿಲ್ಲೆಗಳಲ್ಲಿ ಹಾಗೂ ತಾಲೂಕುಗಳಿಗೆ ಭೇಟಿ ನೀಡಿ ಪೂರ್ವ ಮಾಹಿತಿ ಪಡೆಯಲಾಗಿದೆ ಎಂದರು.

ವಿಜಯಪುರ ಜಿಲ್ಲೆಯ ತಿಕೋಟಾ ಪಟ್ಟಣದಲ್ಲಿ ವೃದ್ಧೆಯು ಜೀವಂತವಿರುವಾಗಲೇ ಖೊಟ್ಟಿ ಮರಣ ಪ್ರಮಾಣ ಪತ್ರ ಸೃಷ್ಟಿಸಿ ಆಸ್ತಿ ಪರಭಾರೆ ವಿಷಯ ಮಾಧ್ಯಮಗಳಲ್ಲಿ ಪ್ರಕಟವಾಗಿರುವ ಹಾಗೂ ಕೃಷ್ಣಾಭಾಗ್ಯಜಲನಿಗಮದ ಆಲಮಟ್ಟಿ ವಲಯ ಮುಖ್ಯ ಅಭಿಯಂತರ ವ್ಯಾಪ್ತಿಯಲ್ಲಿರುವ ವಿವಿಧ ವಿಭಾಗಗಳ ಕಚೇರಿಗಳಲ್ಲಿ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ವಾಸಕ್ಕಾಗಿ ನಿರ್ಮಿಸಲಾಗಿರುವ ವಸತಿಗೃಹಗಳಲ್ಲಿ ವಾಸವಿರದೇ ನಗರಪ್ರದೇಶಗಳಲ್ಲಿ ವಾಸವಾಗಿ ಸರ್ಕಾರ ನಿರ್ಮಿಸಿರುವ ವಸತಿ ಕಟ್ಟಡಗಳನ್ನು ಬೇರೆಯವರಿಗೆ ನೀಡುತ್ತಿರುವ ಕುರಿತು ದೂರುಗಳಿವೆ ಎಂದು ಪತ್ರಕರ್ತರ ಪ್ರಶ್ನೆಗಳಿಗೆ ಉತ್ತರಿಸಿದ ಉಪಲೋಕಾಯುಕ್ತರು ಸಂಬಂಧಿಸಿದ ಇಲಾಖೆಗಳಿಂದ ಮಾಹಿತಿ ಪಡೆದು ಸೂಕಕ್ತಕ್ರಮಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ಬೆಳಗಾವಿ ವಿಭಾಗದ ಲೋಕಾಯುಕ್ತ ಎಸ್ಪಿ ಯಶೋಧಾ ಒಂಟಗೋಡಿ, ಡಿವೈಎಸ್ಪಿಗಳಾದ ಅರುಣ ನಾಯಕ, ಬಸವರಾಜ ಯಲಿಗಾರ, ಎಂ.ಎಚ್. ಬಿದರಿ, ಎಸ್.ಎಂ. ಅವಜಿ, ರಮೇಶ ಅವಜಿ, ಗುರುನಾಥ ಚವ್ಹಾಣ, ರಾಮಚಂದ್ರ ಗಡಾಧಿ, ತಹಶೀಲ್ದಾರ ಶಿವಲಿಂಗಪ್ರಭು ವಾಲಿ, ಡಿ.ಎನ್. ತಹಶೀಲ್ದಾರ, ಇದ್ದರು.

ಸಂಯುಕ್ತ ಕರ್ನಾಟಕ
11-01-2021

# ಸಾಮಾಜಿಕ ಸಮಸ್ಯೆ, ದೂರುಗಳ ನಿವಾರಣೆ ಸಭೆ



**ಆಲಮಟ್ಟಿ:** ಸ್ಥಳೀಯ ಮಯೂರಕೃಷ್ಣಪ್ರವಾಸಿಮಂದಿರದಲ್ಲಿ ಉಪಲೋಕಾಯುಕ್ತ ಬಿ.ಎಸ್.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಸಾಮಾಜಿಕ ಸಮಸ್ಯೆ, ದೂರುಗಳ ನಿವಾರಣೆ ಸಭೆ ನಡೆಯಿತು.

ಸಭೆಯಲ್ಲಿವಿಜಯಪುರ ಜಿಲ್ಲೆಯ ಹೊನವಾಡ ಗ್ರಾಮದಲ್ಲಿ ಕಳೆದ 70–80 ವರ್ಷಗಳಿಂದ ವಾಸವಾಗಿರುವ ದುರಗಮುರಗಿ ಜನಾಂಗದ ಕುಟುಂಬಗಳಿಗೆ ನಾಗರಿಕ ಸೌಲಭ್ಯಗಳು ಮರೀಚಿಕೆಯಾಗಿ ಅವರು ಹಂದಿ ಸಾಕಣೆ, ದುರಗಮುರಗಿ ಉದ್ಯೋಗ ಹಾಗೂ ತಾವೂ ಭಿಕ್ಷಾಟನೆ ಮಾಡುವದರೊಂದಿಗೆ ಮಕ್ಕಳಿಗೂ ಭಿಕ್ಷಾಟನೆ ಮಾಡಿಸಲಾಗುತ್ತಿತ್ತು. ಇದರಿಂದ ಅವರ ಮಕ್ಕಳು ಶಿಕ್ಷಣ ಹಾಗೂ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದರಿಂದ ಲೋಕಾಯುಕ್ತ ಅಧಿಕಾರಿಗಳು ಸಂಬಂಧಿಸಿದ ತಾಲೂಕಾಡಳಿತ ಹಾಗೂ ಗ್ರಾ.ಪಂ. ಅಧಿಕಾರಿಗಳನ್ನು ದುರಗಮುರಗಿ ಕಾಲೋನಿಗೆ ಕರೆದುಕೊಂಡು ಹೋಗಿ ವಾಸ್ತವ ಚಿತ್ರಣ ತೋರಿಸಿ ಆ ಕಾಲೋನಿಯಲ್ಲಿರುವ ಕುಟುಂಬಗಳಿಗೆ ಪಡಿತರ ಚೀಟಿ, ಮತದಾರರಪಟ್ಟಿಯಲ್ಲಿ ಹೆಸರು, ವಸತಿ ಯೋಜನೆಯಲ್ಲಿ ವಸತಿ, ಮಕ್ಕಳಿಗೆ ಶಿಕ್ಷಣ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಿರುವ ಬಗ್ಗೆ ವಿಜಯಪುರ ಲೋಕಾಯುಕ್ತ ಡಿವೈಎಸ್ಪಿಯವರು ಮಾಹಿತಿ ನೀಡಿದರು.

ಬಯಲು ಬಹಿರ್ದೆಸೆ ನಿರ್ಮೂಲನೆಗಾಗಿ ನಿಡಗುಂದಿ ಪಟ್ಟಣದ ನಿವಾಸಿಗಳು ಈಗಾಗಲೇ ಪ್ರತಿ ಮನೆ ಗಳಿಗೂ ಶೌಚಾಲಯ ಹಾಗೂ ಸಾಮೂಹಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆ ಎಂದು ಸಭೆಯಲ್ಲಿ ಚರ್ಚಿಸಲಾಯಿತು.

ಇನ್ನು ಸಭೆಯಲ್ಲಿ ಭಾಗವಹಿಸಿದ್ದ ಲೋಕಾಯುಕ್ತ ಅಧಿಕಾರಿಗಳು ಸಭೆಯಲ್ಲಿ ವಿವಿಧ ಮಾಹಿತಿಗಳನ್ನು ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಉಪಲೋಕಾಯುಕ್ತ ಬಿ.ಎಸ್.ಪಾಟೀಲ, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಈಗಾಗಲೇ ಪ್ರವಾಸಕೈಗೊಳ್ಳಲಾಗಿದ್ದು ಅದರನ್ವಯ ವಿಜಯಪುರ ಜಿಲ್ಲೆಯ ಗ್ರಾಮೀಣ ಸಮಸ್ಯೆ, ಪಟ್ಟಣ, ತಾಲೂಕು, ಜಿಲ್ಲೆಗಳಲ್ಲಿ ಹಲವಾರು ಸಮಸ್ಯೆಗಳಿರುತ್ತವೆ ಅವುಗಳ ಪರಿಹಾರಕ್ಕೆ ಅಧಿಕಾರಿಗಳು ಯಾವ ಕ್ರಮಕೈಗೊಂಡಿದ್ದಾರೆ. ಅವರ ಸಮಸ್ಯೆಗಳಿಗೆ ಸ್ಥಳೀಯ ಅಧಿಕಾರಿಗಳು ಯಾವ ರೀತಿ ಸಮಸ್ಯೆಯನ್ನು ಬಗೆಹರಿಸಿರುತ್ತಾರೆ ಮತ್ತುಯಾವಕಾರಣಕ್ಕೆಅಧಿಕಾರಿಗಳಿಂದಸಮಸ್ಯೆ ಇತ್ಯರ್ಥವಾಗಿಲ್ಲ ಎನ್ನುವದನ್ನು ಚರ್ಚಿಸಿ ಸೂಕ್ತ ಕ್ರಮಕೈಗೊಳ್ಳುವರೊಂದಿಗೆ ಜಿಲ್ಲೆಗೆ ಭೇಟಿ ನೀಡಿದ್ದೇನೆ ಎಂದರು.

ಬೆಳಗಾವಿ ವಿಭಾಗದ ಲೋಕಾಯುಕ್ತ ಎಸ್ಪಿ ಯಶೋಧಾ ಒಂಟಗೋಡಿ, ಡಿವೈಎಸ್ಪಿಗಳಾದ ಅರುಣ ನಾಯಕ, ಬಸವರಾಜ ಯಲಿಗಾರ, ಎಂ.ಎಚ್.ಬಿದರಿ, ಎಸ್.ಎಂ.ಅವಜಿ, ರಮೇಶ ಅವಜಿ, ಗುರುನಾಥ ಚವ್ಹಾಣ, ರಾಮಚಂದ್ರ ಗಡಾಧಿ, ತಹಶೀಲ್ದಾರ್ ಶಿವಲಿಂಗಪ್ರಭು ವಾಲಿ, ಡಿ.ಎನ್.ತಹಶೀಲ್ದಾರ, ತಾ.ಪಂ.ಇಒ ವಿ.ಎಸ್ .ಹಿರೇಮಠ, ಡಿ.ಎನ್.ತಹಶೀಲ್ದಾರ, ಕೆಬಿಜೆನ್ನೆಲ್ ಅಧೀಕ್ಷಕ ಅಭಿಯಂತರ ಡಿ.ಬಸವರಾಜ, ಡಾ.ಪ್ರಕಾಶ ಗೋಡಖಿಂಡ್ಕಿ ಮೊದಲಾದವರಿದ್ದರು.

ಹೊಸ ದಿಗಂತ
11-01-2021

ಹೊಸದಿಗಂತ - 14-01-2021

# ಸಮಸ್ಯೆ ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಿ



**ಮುದ್ದೇಬಿಹಾಳ:** ಕರ್ನಾಟಕ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಅವರು ಪಟ್ಟಣಕ್ಕೆ ಬುಧವಾರ ದಿಢೀರ್ ಭೇಟಿ ನೀಡಿ ತಾಲೂಕು ಪಂಚಾಯತಿ ಸಭಾ ಭವನದಲ್ಲಿ ವಿವಿಧ ಇಲಾಖೆ ಪರಿಶೀಲನಾ ಸಭೆ ನಡೆಸಿ ತಾಲೂಕು ಮಟ್ಟದ ಅಧಿಕಾರಿಗಳಿಂದ ಸಮಗ್ರ ವರದಿ ಪಡೆದುಕೊಂಡರು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದ ಜನತೆ ಎದುರಿಸುತ್ತಿರುವ ಕೆಲ ಸಮಸ್ಯೆಗಳನ್ನು ನೇರವಾಗಿಯೇ ಬಗೆಹರಿಸಬೇಕು ಎನ್ನುವ ನಿಟ್ಟಿನಲ್ಲಿ ಲೋಕಾಯುಕ್ತ ಕಚೇರಿ ಕಾರ್ಯನಿರ್ವಸುತ್ತಿದೆ. ದೂರುದಾರರು ನೀಡಿದ ದೂರಿನ ಪ್ರಕ್ರಿಯೆಯನ್ನು ವಾಸ್ತವಿಕವಾಗಿ ನಡೆಸಿ ಸಮಸ್ಯೆಗಳನ್ನು ಹೊಗಲಾಡಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ನಡೆಸಲಾಗುತ್ತಿದೆ ಎಂದು ಹೇಳಿದರು.

**ಶೌಚಾಲಯಗಳ ಬಗ್ಗೆ ಮಾಹಿತಿ ನೀಡಿ:** ತಾಲೂಕಿನ ಗ್ರಾಮ ಪಂಚಾಯತಿಗಳ ಮೂಲಕ ನಿರ್ಮಿಸಿಕೊಟ್ಟಂತಹ ಶೌಚಾಲಯಗಳ ಬಗ್ಗೆ ಸಮಗ್ರ ಮಾಹಿತಿಯನ್ನು ಕೇಳಿದ ಲೋಕಾಯುಕ್ತರು, ನಿರ್ಮಿಸಿದ ಶೌಚಾಲಯಗಳ ಇಂದಿನ ಸ್ಥಿತಿಗತಿಗಳನ್ನು ವಾಸ್ತವಿಕವಾಗಿ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಬೇಕು. ಇದರಲ್ಲಿ ಫಲಾನುಭವಿಗಳಿಂದ ಅವ್ಯವಹಾರ ಮಾಡಿದ್ದು ಕಂಡು ಬಂದರೆ ಅದನ್ನೂ ಕೂಡಾ ವರದಿ ನೀಡಬೇಕು. ಅವ್ಯವಹಾರದಲ್ಲಿ ತೊಡಗಿದ ಪ್ರತಿಯೊಬ್ಬ ಅಧಿಕಾರಿಗಳಿಗೆ ಹಾಗೂ ಫಲಾನುಭವಿಗಳಿಗೆ ದಂಡ ಸಮೇತ ಶಿಕ್ಷೆಗೆ ಒಳಪಡಿಸಲಾಗುವುದು. ಅಲ್ಲದೇ ಮೇಲಾಧಿಕಾರಿಗಳೂ ಇದರಲ್ಲಿ ಭಾಗಿಯಾಗಿದ್ದರೆ ಅವರ ಮೇಲೆಯೂ ದೂರು ದಾಖಲು ಮಾಡುವಂತೆ ಪ್ರಸ್ತಾವಣೆ ಸಲ್ಲಿಸಲಾಗುವುದು ಎಂದು ಹೇಳಿದರು.

**ರೈತರ ಜಮೀನಿಗೆ ಮೊದಲು ಪರಿಹಾರ ಒದಗಿಸಿ:** ಕೆಬಿಜೆಎನ್ಎಲ್ ಸೇರಿದಂತೆ ಇತರೆ ಇಲಾಖೆಯಿಂದ ನಿರ್ಮಿಸಲಾಗುವ ಕಾಲುವೆಗೆ ಸ್ವಾಧೀನ ಪಡೆದುಕೊಳ್ಳುವ ರೈತರ ಜಮೀನಿಗೆ ಮೊದಲು ಪರಿಹಾರ ಒದಗಿಸಿ ನಂತರ ಮುಂದಿನ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಕಾನೂನಿನಲ್ಲಿ ಹೊಸದಾಗಿ ಆದೇಶ ಹೊರಡಿಸಿದ್ದು ಆದೇಶ ಸ್ಥಳೀಯ ಅಧಿಕಾರಿಗಳು ತಪ್ಪದೆ ಪಾಲಿಸಬೇಕು. ಇದರಿಂದ ರೈತರು ಸರ್ಕಾರದ ಪರಿಹಾರದಿಂದ ವಂಚಿತಗೊಳ್ಳುವುದಿಲ್ಲ ಎಂದು ಉಪ ಲೋಕಾಯಕ್ತರು ತಿಳಿಸಿದರು. ಕಾಲುವೆಗಳು ಕಳಪೆ ಕಂಡು ಬಂದಲ್ಲಿ ಅದರ ಗುತ್ತಿಗೆದಾರರಿಗೆ ನೋಟಿಸ್ ನೀಡಿ ಅದನ್ನು ಸರಿಪಡಿಸಬೇಕು ಎಂದು ಉಪ ಲೋಕಾಯುಕ್ತ ಖಡಕ್ಕಾಗಿ ಸೂಚನೆ ನೀಡಿದರು.

> **ಅಭಿವೃದ್ಧಿ ಕೆಲಸಗಳಲ್ಲಿ ಮಿತಿ ಮೀರಿ ಕಾರ್ಯನಿರ್ವಹಿಸಿದ್ದೇನೆ ಎಂದು ಅಧಿಕಾರಿಗಳು ಅಂದುಕೊಳ್ಳಬಾರದು. ಅಭಿವೃದ್ಧಿ ವಿಷಯದಲ್ಲಿ ಅಧಿಕಾರಿಗಳಿಗೆ ಮಿತಿಯೇ ಇಲ್ಲಾ, ಆದರೆ ಅಧಿಕಾರಿಗಳು ನಿಷ್ಠುರ ಹಾಗೂ ಸತ್ಯದ ಬಗ್ಗೆ ಜಾಗೃತಿ ವಹಿಸುವುದು ಅಗತ್ಯವಿದೆ.**
>
> ■ ಭೀಮನಗೌಡ ಸಂಗನಗೌಡ ಪಾಟೀಲ, ಉಪ ಲೋಕಾಯುಕ್ತ

ಅಹವಾಲು ಪಡೆದ ಉಪ ಲೋಕಾಯುಕ್ತರು: ಸಭೆಯ ನಂತರ ಸಾರ್ವಜನಿಕರ ಸಮಸ್ಯೆಗಳ ಬಗ್ಗೆ ಅಹವಾಲುಗಳನ್ನು ಪಡೆದಿದ್ದು ಸ್ವೀಕರಿಸಿದ ಅಹವಾಲುಗಳನ್ನು ಕಾನೂನು ನಿಯಮಾನುಸಾರವಾಗಿ ಕ್ರಮ ಕೈಗೊಳ್ಳಲಾಗುವುದು. ಒಂದು ವೇಳೆ ಇಲಾಖೆಯಲ್ಲಿ ದೂರು ದಾಖಲಾಗ ಬೇಕೆನ್ನುವ ಅಹವಾಲಿಗೆ ಅಹವಾಲುದಾರರಿಗೆ ನೋಟಿಸ್ ನೀಡಲಾಗುವುದು. ಲೋಕಾಯುಕ್ತ ಕಚೇರಿಯ ನಿಯಮಾನುಸಾರವಾಗಿ ದೂರು ದಾಖಲಿಸಬಹುದು ಎಂದು ಹೇಳಿದರು.

ಉಪ ಲೋಕಾಯುಕ್ತ ಗೆಜೆಟೆಡ್ ಸಹಾಯಕಿ ಯಶೋದಾ ಒಂಟಗೂಡಿ, ಎಸಿ ರಾಮಚಂದ್ರ ಗಡಾದೆ, ಡಿವಾಯ್ಎಸ್‌ಪಿ ಬಸವರಾಜ ಯಳಿಗಾರ, ಪಿಎಸ್‌ಐಗಳಾದ ರಮೇಶ ಅವಜಿ, ಗುರುನಾಥ ಚವ್ಹಾಣ, ತಾ.ಪಂ ಇಒ ಶಶಿಕಾಂತ ಶಿವಪುರೆ, ಕೆಬಿಜೆಎನ್ಎಲ್ ಅಧಿಕಾರಿ ಜಿ.ಎಸ್.ಪಾಟೀಲ, ತಹಶೀಲ್ದಾರ ಅನೀಲಕುಮಾರ ಢವಳಗಿ ಇದ್ದರು.

ಕನ್ನಡ ಪ್ರಭ — 14-01-2021

# ವೇತನ, ಪಡಿತರ ಚೀಟಿಗೆ ಲಂಚ ಕೇಳಿದ್ರೆ ಶಿಕ್ಷೆ

## ವಿವಿಧ ಇಲಾಖೆಗಳ ಅಧಿಕಾರಿಗಳ ಪರಿಶೀಲನಾ ಸಭೆಯಲ್ಲಿ ಉಪಲೋಕಾಯುಕ್ತ ಬಿ ಎಸ್ ಪಾಟೀಲ್ ಎಚ್ಚರಿಕೆ

• **ಕನ್ನಡಪ್ರಭ ವಾರ್ತೆ** ಮುದ್ದೇಬಿಹಾಳ

ತಾಲೂಕಿನ ಕಂದಾಯ ಇಲಾಖೆಯಲ್ಲಿ ಸಂಧ್ಯಾ ಸುರಕ್ಷಾ ವಿಧವಾ ವೇತನ, ಪಡಿತರ ಚೀಟಿ ಮಾಡಿಸಲು ಅನಗತ್ಯ ವಿಳಂಬ ಹಾಗೂ ಇದಕ್ಕೆ ಲಂಚ ಕೇಳುವುದು ಕಂಡುಬಂದರೆ ಅಂತವರ ಮೇಲೆ ಕೂಡಲೇ ಕ್ರಮ ಕೈಗೊಳ್ಳುವ ಮೂಲಕ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ಉಪಲೋಕಾಯುಕ್ತ ಬಿ.ಎಸ್.ಪಾಟೀಲ್ ಎಚ್ಚರಿಕೆ ನೀಡಿದರು.

ಪಟ್ಟಣದ ಇಲ್ಲಿನ ತಾಪಂ ಸಭಾಭವನದಲ್ಲಿ ಬುಧವಾರ ನಡೆದ ಜಿಪಂ, ತಾಪಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಈಗಾಗಲೇ ತಾಲೂಕಿನಲ್ಲಿ ಆಯಾ ಇಲಾಖೆಗಳ ಕಾರ್ಯವೈಖರಿ ಪ್ರಸ್ತುತ ಪ್ರಾರಂಭಗೊಂಡಿರುವ ಕಾಮಗಾರಿಗಳು ಆಗಬೇಕಿರುವ ಅಭಿವೃದ್ಧಿಗಳು ಅಪೂರ್ಣಗೊಂಡ ಕೆಲಸಗಳನ್ನು ಪೂರ್ಣ ಮಾಡುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು? ಈ ಕುರಿತು ಸಂಪೂರ್ಣ ವರದಿ ತಯಾರಿಸಿ ನೀಡುವಂತೆ ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದರು.

ತೋಟಗಾರಿಕೆ ಹಾಗೂ ಕೃಷಿ ಇಲಾಖೆಗಳಲ್ಲಿ ರೈತರಿಗೆ ಸಂಬಂಧಿಸಿದಂತೆ ಸರ್ಕಾರದ ಯೋಜನೆಗಳನ್ನು ರೈತರಿಗೆ ನಿಗದಿತ ಅವಧಿಯಲ್ಲಿ ತಲುಪಿಸಬೇಕು ಹಾಗೂ ಕೃಷಿ ಚಟುವಟಿಕೆಯಲ್ಲಿ ರೈತರಿಗೆ ಮಣ್ಣಿನ ಪರೀಕ್ಷೆ ಮಾಡುವಂತೆ ರೈತರಿಗೆ ಜಾಗೃತಿ ಮೂಡಿಸುವ ಮೂಲಕ ಮಣ್ಣಿನ ಸತ್ವ ಹೆಚ್ಚಾಗಲು ಮತ್ತು ಉತ್ತಮ ಬೆಳೆ ಬೆಳೆದು ಫಸಲು ದೊರಕುವಂತೆ ಮಾಡಲು ಮಣ್ಣಿನ ಪರೀಕ್ಷೆಯಿಂದ ಏನೆಲ್ಲ ಲಾಭವಿದೆ ಎಂದು ರೈತರಿಗೆ ಅಗತ್ಯ ಮಾಹಿತಿ ನೀಡಬೇಕು ಎಂದು ತಿಳಿಸಿದರು.

**ಮಾಸ್ಕ್ ಧರಿಸದವರಿಗೆ ದಂಡ:** ಮಂಗಲ ಭವನಗಳಲ್ಲಿ ತ್ಯಾಜ್ಯದ ನಿರ್ವಹಣೆ ಕುರಿತು ಪುರಸಭೆ ಇಲಾಖೆ ಕೈಗೊಂಡ ಕ್ರಮಗಳು ಏನು? ಗ್ರೀನ್ ಬಾಸ್ಕೆಟ್, ಯಲ್ಲೊ ಬಾಸ್ಕೆಟ್‌ಗಳನ್ನು ಪಾನ್‌ಶಾಪ್‌ಗಳ ಮುಂದೆ ಇರಬೇಕು. ಸ್ವಚ್ಛತೆಗೆ ಆದ್ಯತೆ ನೀಡಬೇಕು. ಇಲ್ಲಿ ಯಾರೂ ಮಾಸ್ಕ್‌ನ್ನು ಇಲ್ಲಿಯ ಜನರು ಧರಿಸುತ್ತಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಪುರಸಭೆ ಮುಖ್ಯಾಧಿಕಾರಿ ಗೋಪಾಲ ಕಾಸೆ, ಮಾಸ್ಕ್ ಕುರಿತು ಜಾಗೃತಿ ಅಭಿಯಾನ ಮಾಡಿದ್ದೇವೆ ಮತ್ತು ಮಾಸ್ಕ್ ಧರಿಸದ ಜನರಿಗೆ ದಂಡವನ್ನು ವಿಧಿಸಿದ್ದೇವೆ ಎಂದರು.



ಶಾಲೆಗಳಲ್ಲಿ ಕುಡಿಯುವ ನೀರು ,ಆಟದ ಮೈದಾನ ,ಶೌಚಾಲಯ ಎಲ್ಲಾ ಶಾಲೆಗಳಲ್ಲಿ ಆಗಬೇಕು. ಯಾವ ಶಾಲೆಯಲ್ಲಿ ಆಗಿಲ್ಲ. ಅಪೂರ್ಣ ಕಾಮಗಾರಿಗಳಿದ್ದರೆ ಪೂರ್ಣಗೊಳಿಸಲು ಕ್ಷೇತ್ರದ ಶಿಕ್ಷಣಾಧಿಕಾರಿ ವಿರೇಶ ಜೇವರಗಿ ಅವರಿಗೆ ಸೂಚಿಸಿದರು

**ಬಿರುಕು ಬಿಟ್ಟ ಕಾಲುವೆಗಳು:** ಈ ಭಾಗದ ಬಹುದಿನದ ಕನಸಿನಂತೆ ಕಾಲುವೆಗಳು ಆಗಿ ದ್ದು, ಪ್ರತಿವಾರ ಕೆನಾಲ್‌ಗೆ ನೀರು ಬಿಡಲಾಗು ತ್ತದೆ. ಕೆನಾಲ್ ಲೈನಿಂಗ್ ಕಿತ್ತುಕೊಂಡು ಹೋ ಗಿವೆ. ಹಲವಡೆ ಬಿರುಕು ಬಿಟ್ಟಿವೆ. ಇದರಿಂದ ಕಾಲುವೆಗಳು ಹಾಳಾಗಿವೆ. ಅಕ್ಕಪಕ್ಕದ ಹೊಲ ಗಳಿಗೆ ನೀರು ನುಗ್ಗಿ ಹೊಲಗಳು ಹಾಳಾಗುತ್ತಿವೆ. ಇದಕ್ಕೆ ಯಾರು ಹೊಣೆ? ಬಿರುಕು ಬಿಟ್ಟ ಕೆನಾಲ್ ಹೇಗೆ ಸರಿಪಡಿಸ್ತಿರಾ? ನೀರು ವ್ಯರ್ಥ ಮಾಡಬಾರದು. ಇದಕ್ಕೆ ಹೇಗೆ ಕ್ರಮಕೈಗೊಳ್ಳಿತ್ತಿ ರ ತೋರಿಸಿ? ನೀರು ವ್ಯರ್ಥವಾದರೆ ಮಹಾಪರಾಧ ಮಾಡಿದಂತೆ. ಹೀಗಾದರೆ ಕ್ರಮ ಕೈಗೊಂಡು ಕೇಸ್ ಮಾಡಬೇಕಾಗುತ್ತದೆ ಎಂ ದು ಕೆಬಿಜೆಎನೆಲ್ ಅಧಿಕಾರಿಗಳಿಗೆ ಸಹಾಯಕ ಅಭಿಯಂತರಗಳಿಗೆ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಲೋಕಾಯುಕ್ತ ಎಸ್ ಪಿ ಯಶೋಧಾ ಒಂಟಗೋಡಿ, ಡಿವೈಎಸ್‌ಪಿ ಬಸವರಾಜ ಯಲಿಗಾರ, ಇನ್ಸಸ್ಪೆಕ್ಟರ್ ರಮೇಶ ಅವಜಿ, ಗುರುನಾಥ ಚವ್ಹಾಣ, ವಿಜಯಪುರ ಉಪವಿಭಾಗಾಧಿಕಾರಿ ರಾಮಚಂದ್ರ ಗಡಾದ, ತಹಸೀಲ್ದಾರ್ ಅನಿಲ ಢವಳಗಿ ಸೇರಿದಂತೆ ಹಲವು ಅಧಿಕಾರಿಗಳು ಮುಖಂಡರು ಇದ್ದರು.

### ನಿಷ್ಠೆಯಿಂದ ಕೆಲಸ ಮಾಡಿ

ಮೀನುಗಾರಿಕೆ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ,ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪಶುಸಂಗೋಪನೆ ಇಲಾಖೆ,ಕೃಷಿ ಇಲಾಖೆ, ಕಡಿಯುವ ನೀರು ಮತ್ತು ನೈರ್ಮಲ್ಯ, ಸಮಾಜಕಲ್ಯಾಣ ,ಲೋಕೋಪಯೋಗಿ ಇಲಾಖೆ, ಅರಣ್ಯ ಇಲಾಖೆ, ಹೆಸ್ಕಾಂ,ವಾಣಿಜ್ಯ ಇಲಾಖೆ ಹೀಗೆ ವಿವಿಧ ಇಲಾಖೆಗಳ ಪರಿಶೀಲನೆ ಸಭೆ ನಡೆಸಿ ಸಾರ್ವಜನಿಕರಿಗೆ ಸರ್ಕಾರದ ಸವಲತ್ತುಗಳನ್ನು ತಲುಪಿಸುವ ಕೆಲಸವನ್ನು ಮಾಡಬೇಕು. ಆಯಾ ಇಲಾಖೆಗಳ ಜವಾಬ್ದಾರಿ ಅರಿತು ಕರ್ತವ್ಯ ನಿಷ್ಠೆಯಿಂದ ಕೆಲಸಮಾಡಿ ಮಾದರಿಯಾಗಬೇಕು ಎಂದು ಉಪಲೋಕಾಯುಕ್ತ ಬಿ.ಎಸ್.ಪಾಟೀಲ್ ಹೇಳಿದರು.

ಸಂಯುಕ್ತ ಕರ್ನಾಟಕ 14-01-2021

# 'ಸರ್ಕಾರಿ ಸೇವೆಗೆ ಲಂಚ ಸ್ವೀಕರಿಸಿದರೆ ಕ್ರಮ'

## ಧಿಕಾರಿಗಳಿಗೆ ಉಪಲೋಕಾಯುಕ್ತ ಬಿ.ಎಸ್. ಪಾಟೀಲ ಎಚ್ಚರಿಕೆ



ಮುದ್ದೇಬಿಹಾಳದ ತಾ.ಪಂ. ಸಭಾಭವನದಲ್ಲಿ ಬುಧವಾರ ನಡೆದ ವಿವಿಧ ಇಲಾಖೆಗಳ ಪರಿಶೀಲನಾ ಸಭೆಯಲ್ಲಿ ಯಲ್ಲಿ ಉಪಲೋಕಾಯುಕ್ತ ಬಿ.ಎಸ್. ಪಾಟೀಲ ಮಾತನಾಡಿದರು.

**ಮುದ್ದೇಬಿಹಾಳ :** ತಾಲೂಕಿನ ಕಂದಾಯ ಇಲಾಖೆಯಲ್ಲಿ ಸಂಧ್ಯಾಸುರಕ್ಷಾ ವಿಧವಾ ವೇತನ, ಪಡಿತರ ಚೀಟಿ ಮಾಡಿಸಲು ಅನಗತ್ಯ ವಿಳಂಬ ಹಾಗೂ ಇದಕ್ಕೆ ಲಂಚವನ್ನು ಕೇಳುವುದು ಕಂಡು ಬಂದರೆ ಅಂತವರ ಮೇಲೆ ಕೂಡಲೆ ಕ್ರಮ ಕೈಗೊಳ್ಳುವ ಮೂಲಕ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ಉಪಲೋಕಾಯುಕ್ತ ಬಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ತಾಪಂ ಸಭಾಭವನದಲ್ಲಿ ಬುಧವಾರ ವಿವಿಧ ಇಲಾಖೆಗಳ ಅಧಿಕಾರಿಗಳ ಪರಿಶೀಲನಾ ಸಭೆಯಲ್ಲಿ ಯಲ್ಲಿ ಅವರು ಮಾತನಾಡಿದರು.

ಈಗಾಗಲೇ ತಾಲೂಕಿನಲ್ಲಿ ಆಯಾ ಇಲಾಖೆಗಳ ಕಾರ್ಯವೈಖರಿ ಪ್ರಸ್ತುತ ಪ್ರಾರಂಭಗೊಂಡಿರುವ ಕಾಮಗಾರಿಗಳು ಆಗಬೇಕಿರುವ ಅಭಿವೃದ್ಧಿಗಳು ಅಪೂರ್ಣ ಗೊಂಡ ಕೆಲಸಗಳನ್ನು ಪೂರ್ಣ ಮಾಡುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು? ಈ ಕುರಿತು ಸಂಪೂರ್ಣ ವರದಿ ತಯಾರಿಸಿ ನೀಡುವಂತೆ ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದರು.

ತೋಟಗಾರಿಕೆ, ಹಾಗೂ ಕೃಷಿ ಇಲಾಖೆಗಳಲ್ಲಿ ರೈತರಿಗೆ ಸಂಬಂಧಿಸಿದಂತೆ ಸರ್ಕಾರದ ಯೋಜನೆಗಳನ್ನು ರೈತರಿಗೆ ನಿಗದಿತ ಅವಧಿಯಲ್ಲಿ ತಲುಪಿಸಬೇಕು. ಹಾಗೂ ಕೃಷಿ ಚಟುವಟಿಕೆಯಲ್ಲಿ ರೈತರಿಗೆ ಮಣ್ಣಿನ ಪರೀಕ್ಷೆ ಮಾಡುವಂತೆ ರೈತರಿಗೆ ಜಾಗೃತಿ ಮೂಡಿಸುವ ಮೂಲಕ ಮಣ್ಣಿನ ಸತ್ವ ಹೆಚ್ಚಾಗಲು ಮತ್ತು ಉತ್ತಮ ಬೆಳೆ ಬೆಳೆದು ಫಸಲು ದೊರಕುಂವಂತೆ ಮಾಡಲು ಮಣ್ಣಿನ ಪರೀಕ್ಷೆಯಿಂದ ಏನೆಲ್ಲಾ ಲಾಭವಿದೆ ಎಂದು ರೈತರಿಗೆ ಅಗತ್ಯ ಮಾಹಿತಿಯನ್ನು ನೀಡಬೇಕು.

ಮಂಗಲ ಭವನಗಳಲ್ಲಿ ತಾಜ್ಯದ ನಿರ್ವಹಣೆ ಕುರಿತು ಪುರಸಭೆ ಇಲಾಖೆ ಕೈಗೊಂಡ ಕ್ರಮಗಳು ಏನು? ಗ್ರೀನ್ ಬಾಸ್ಕೆಟ್, ಯಲ್ಲೊ ಬಾಸ್ಕೆಟ್‌ಗಳನ್ನು ಪಾನಶಾಪ್‌ಗಳ ಮುಂದೆ ಇರಬೇಕು. ಸ್ವಚ್ಚತೆಗೆ ಆದ್ಯತೆ ನೀಡಬೇಕು. ಇಲ್ಲಿ ಯಾರೂ ಕೂಡ ಮಾಸ್ಕ್‌ನ್ನು ಜನರು ಧರಿಸುತ್ತಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಪುರಸಭೆ ಮುಖ್ಯಾಧಿಕಾರಿ ಗೋಪಾಲ ಕಾಸೆ, ಮಾಸ್ಕ್ ಕುರಿತು ಜಾಗೃತಿ ಅಭಿಯಾನ ಮಾಡಿದ್ದೇವೆ. ಮತ್ತು ಮಾಸ್ಕ್ ಧರಿಸದ ಜನರಿಗೆ ದಂಡವನ್ನು ವಿಧಿಸಿದ್ದೇವೆ. ಇನ್ನೂ ತರಕಾರಿ ಮಾರುಕಟ್ಟೆಯಲ್ಲಿ ಒಣಕಸ ಹಸಿಕಸ ಹಾಕುವ ಕುರಿತು ಕ್ರಮಕೈಗೊಳ್ಳಲಿದ್ದೇವೆ, ನಗರದಲ್ಲಿ 40 ರಿಂದ 45 ರಸ್ತೆಗಳ ಅತಿಕ್ರಮಣ ತೆರವುಗೊಳಿಸಿದ್ದೇವೆ, ಶೇ.80 ಜನರು ನಮಗೆ ಸಹಕಾರ ನೀಡುತ್ತಿದ್ದಾರೆ ಎಂದರು.

### ಕಾಲುವೆಗಳು ಬಿರಕು ಬಿಟ್ಟಿವೆ....

ಈ ಭಾಗದ ಬಹುದಿನದ ಕನಸಿನಂತೆ ಕಾಲುವೆಗಳು ಆಗಿದ್ದು ಪ್ರತಿವಾರ ಕೆನಾಲ್‌ಗೆ ನೀರು ಬಿಡಲಾಗುತ್ತದೆ. ಕೆನಾಲ್ ಲೈನಿಂಗ್ ಕಿತ್ತುಕೊಂಡು ಹೋಗಿವೆ. ಹಲವಡೆ ಬಿರಕು ಬಿಟ್ಟಿವೆ, ಇದರಿಂದ ಕಾಲುವೆಗಳು ಹಾಲಾಗಿವೆ ಅಕ್ಕಪಕ್ಕದ ಹೊಲಗಳಿಗೆ ನೀರು ನುಗ್ಗಿ ಹೊಲಗಳು ಹಾಳಾಗುತ್ತಿವೆ ಇದಕ್ಕೆ ಯಾರು ಹೋಣೆ?. ಬಿರಕು ಬಿಟ್ಟ ಕೆನಾಲ್ ಹೇಗೆ ಸರಿಪಡಿಸ್ತಿರಾ? ನೀರು ವ್ಯರ್ಥ ಮಾಡಬಾರದು ಇದಕ್ಕೆ ಹೇಗೆ ಕ್ರಮಕೈಗೂಳ್ಳಿತ್ತಿರ ತೋರಿಸಿ? ನೀರು ವ್ಯರ್ಥವಾದರೆ ಮಹಾಪರಾಧ ಮಾಡಿದಂತೆ. ಹೀಗಾದರೆ ಕ್ರಮ ಕೈಗೊಂಡು ಕೇಸ್ ಮಾಡಬೇಕಾಗುತ್ತದೆ ಎಂದು ಕೆಬಿಜೆಎನ್‌ಎಲ್ ಅಧಿಕಾರಿಗಳಿಗೆ ಸಹಾಯಕ ಅಭಿಯಂತರಗಳಿಗೆ ಎಚ್ಚರಿಕೆ ನೀಡಿದ್ದರು.

ಶಾಲೆಗಳಲ್ಲಿ ಕುಡಿಯುವ ನೀರು, ಆಟದ ಮೈದಾನ, ಶೌಚಾಲಯ ಎಲ್ಲಾ ಶಾಲೆಗಳಲ್ಲಿ ಆಗಬೇಕು ಯಾವ ಶಾಲೆಯಲ್ಲಿ ಆಗಿಲ್ಲ. ಅಪೂರ್ಣ ಕಾಮಗಾರಿಗಳಿದ್ದರೆ ಪೂರ್ಣಗೊಳಿಸಲು ಕ್ಷೇತ್ರದ ಶಿಕ್ಷಣಾಧಿಕಾರಿ ವೀರೇಶ ಜೇವರಗಿ ಅವರಿಗೆ ಸೂಚಿಸಿದರು.

ಪಂಚಾಯತ್ ರಾಜ್ಯ ಇಲಾಖೆ ವ್ಯಾಪ್ತಿಯಲ್ಲಿ ಪ್ರತಿ ಹಳ್ಳಿಗಳಲ್ಲಿ ಸರಿಯಾದ ಚರಂಡಿಗಳು ಯಾಕೆ ನಿರ್ಮಾಣ ಮಾಡಿಲ್ಲ? ಈಗಲೂ ಹಳ್ಳಿಗಳಲ್ಲಿ ಬಚ್ಚಲು ನೀರು ರಸ್ತೆಯ ಮೇಲೆಯೇ ಹರಿಯುತ್ತವೆ ಇದರಿಂದ ಅನೇಕ ಗಂಭೀರವಾದ ಕಾಯಿಲೆಗಳಿಗೆ ಜನರು ತುತ್ತಾಗುತ್ತಿದ್ದಾರೆ, ಇಂತಹ ಹಳ್ಳಿಗಳಲ್ಲಿ ಸರಿಯಾದ ಚರಂಡಿ ನಿರ್ಮಾಣ ಮಾಡಬೇಕು.

ಮೀನುಗಾರಿಕೆ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ,ಪಶುಸಂಗೋಪನೆ ಇಲಾಖೆ, ಕೃಷಿ ಇಲಾಖೆ, ಕುಡಿಯುವ ನೀರು ಮತ್ತು ನೈರ್ಮಲ್ಯ, ಸಮಾಜ ಕಲ್ಯಾಣ, ಲೋಕೋಪಯೋಗಿ ಇಲಾಖೆ, ಅರಣ್ಯ ಇಲಾಖೆ, ಹೆಸ್ಕಾಂ, ವಾಣಿಜ್ಯ ಇಲಾಖೆ, ಹೀಗೆ ವಿವಿಧ ಇಲಾಖೆಗಳ ಪರಿಶೀಲನೆ ಸಭೆ ನಡೆಸಿ ಸಾರ್ವಜನಿಕರಿಗೆ ಸರ್ಕಾರದ ಸವಲತ್ತುಗಳನ್ನು ತಲುಪಿಸುವ ಕೆಲಸವನ್ನು ಮಾಡಬೇಕು. ಆಯಾ ಇಲಾಖೆಗಳ ಜವಾಬ್ದಾರಿ ಅರಿತು ಕರ್ತವ್ಯ ನಿಷ್ಠೆಯಿಂದ ಕೆಲಸ ಮಾಡಿ ಮಾದರಿಯಾಗಬೇಕು ಎಂದರು.

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಲೋಕಾಯುಕ್ತ ಎಸ್.ಪಿ. ಯಶೋಧಾ ಒಂಟಗೋಡಿ, ಡಿ.ಐ.ಎಸ್.ಪಿ ಬಸವರಾಜ ಯಲಿಗಾರ, ಇನ್ಸ್‌ಪೆಕ್ಟರ್ ರಮೇಶ ಅವಜಿ, ಗುರುನಾಥ ಚವ್ಹಾಣ, ವಿಜಯಪುರ ಉಪವಿಭಾಗಾಧಿಕಾರಿ ರಾಮಚಂದ್ರ ಗಡಾದ, ತಹಶೀಲ್ದಾರ ಅನೀಲ ಢವಳಗಿ ಸೇರಿದಂತೆ ಹಲವು ಅಧಿಕಾರಿಗಳು ಮುಖಂಡರು ಇದ್ದರು.

ವಿಜಯವಾಣಿ - 15 - 01 2021



ರಾಜ್ಯ ಉಪಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಮಂಗಳವಾರ ಕರಿಭಂಟನಾಳ ಶ್ರೀಗುರು ಗಂಗಾಧರೇಶ್ವರರ ಕರ್ತೃ ಗದ್ದುಗೆಯ ದರ್ಶನ ಪಡೆದರು. ಪೀಠಾಧಿಕಾರಿ ಶಿವಕುಮಾರ ಸ್ವಾಮಿಗಳು ಇದ್ದರು.

## ಉಪ ಲೋಕಾಯುಕ್ತ ಪಾಟೀಲ ಎಚ್ಚರಿಕೆ | ಪ್ರಗತಿ ಪರಿಶೀಲನೆ

# ಭ್ರಷ್ಟರ ವಿರುದ್ಧ ಶಿಸ್ತು ಕ್ರಮ

■ ವಿಜಯವಾಣಿ ಸುದ್ದಿಜಾಲ ಮುದ್ದೇಬಿಹಾಳ

ಸರ್ಕಾರದ ಕೆಲಸಗಳನ್ನು ಮಾಡಿಕೊಡಲು ಲಂಚ ಪಡೆಯುವ ಅಧಿಕಾರಿಗಳನ್ನು ಸುಮ್ಮನೆ ಬಿಡುವುದಿಲ್ಲ. ಅಂಥವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಉಪ ಲೋಕಾಯುಕ್ತ, ನಿವೃತ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅಧಿಕಾರಿಗಳಿಗೆ ಖಡಕ್ ವಾರ್ನಿಂಗ್ ಮಾಡಿದರು.

ಪಟ್ಟಣದ ತಾಪಂ ಸಭಾಭವನದಲ್ಲಿ ಬುಧವಾರ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಅವರು ಮಾತನಾಡಿದರು.

ಸಾರ್ವಜನಿಕರು ತಮ್ಮ ಕೆಲಸಗಳು ಸರಿಯಾಗಿ ಆಗದಿರುವ ಬಗ್ಗೆ, ಅಧಿಕಾರಿಗಳು ಸರ್ಕಾರಿ ಕೆಲಸಕ್ಕೆ ಕಿರುಕುಳ ನೀಡುತ್ತಿರುವ ಬಗ್ಗೆ ಲೋಕಾಯುಕ್ತ ಕಚೇರಿಗೆ ಲಿಖಿತ ದೂರು ಸಲ್ಲಿಸಿದರೆ ಅಂತಹ ಅಧಿಕಾರಿ ವಿರುದ್ಧ ಕಠಿಣ ಕ್ರಮ ಜರುಗಿಸುತ್ತೇವೆ ಎಂದು ಹೇಳಿದರು.

**» ಭ್ರಷ್ಟಾಚಾರ ಕಂಡು ಬಂದರೆ ಸುಮೋಟೊ ಪ್ರಕರಣ ದಾಖಲು**

ತಾಪಂ ಕಾರ್ಯ ನಿರ್ವಾಹಕ ಅಧಿಕಾರಿ, ಪುರಸಭೆ ಮುಖ್ಯಾಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಉಪ ಲೋಕಾಯುಕ್ತರು, ಪಟ್ಟಣ ಹಾಗೂ ನಗರ ಪ್ರದೇಶಗಳಲ್ಲಿ ಇಂದಿಗೂ ಅನೈರ್ಮಲ್ಯ ವಾತಾವರಣ ಹೆಚ್ಚಿದೆ. ಶೌಚಗೃಹ ಕಟ್ಟಿಕೊಂಡಿರುವುದಾಗಿ ಹೇಳಿ ಹಣ ದುರುಪಯೋಗ ಮಾಡಿಕೊಂಡಿರುವ ಪ್ರಕರಣಗಳೇ ಅಧಿಕವಾಗಿವೆ. ಅಂತಹ ಪ್ರಕರಣಗಳಲ್ಲಿ ಭಾಗಿಯಾದ ಪಿಡಿಒ, ಕಾರ್ಯದರ್ಶಿಗಳು ಹಾಗೂ ಫಲಾನುಭವಿಗಳ ವಿರುದ್ಧ ಕ್ರಮ ಕೈಗೊಳ್ಳಲು ಹಿಂದೇಟು ಹಾಕಬಾರದು. ಒಂದು ವೇಳೆ ನೀವು ಕ್ರಮ ಕೈಗೊಳ್ಳಲು ನಿರ್ಲಕ್ಷ್ಯ ವಹಿಸಿದರೆ ನಿಮ್ಮ ವಿರುದ್ಧ ಕ್ರಮ ಕೈಗೊಳ್ಳಲು ಮೇಲಧಿಕಾರಿಗಳಿಗೆ ಸೂಚನೆ ಕೊಡಬೇಕಾಗುತ್ತದೆ. ಅವರು ನಿಮ್ಮ ಮೇಲೆ ಕ್ರಮ ಕೈಗೊಳ್ಳಲು ವಿಳಂಬ ಮಾಡಿದರೆ ಅವರ ವಿರುದ್ಧವೂ ಕ್ರಮ ಕೈಗೊಳ್ಳಲಾಗುತ್ತದೆ. ಗ್ರಾಮೀಣ ಪ್ರದೇಶಗಳಲ್ಲಿ ಶೌಚಗೃಹ ನಿರ್ಮಾಣ,ಚರಂಡಿಗಳ ನಿರ್ಮಾಣದ ಕುರಿತು ತಾಪಂ ವಿರುದ್ಧ ಸುಮೋಟೊ ಕೇಸ್ ದಾಖಲಿಸಿಕೊಳ್ಳಲಾಗುತ್ತದೆ ಎಂದು ಹೇಳಿದರು.

ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಕೃಷಿ, ತಾಲೂಕು ಪಂಚಾಯಿತಿ, ಸಿಡಿಪಿಒ, ಕುಡಿವ ನೀರು ಮತ್ತು ನೈರ್ಮಲ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪಂಚಾಯತ್ ರಾಜ್, ಪಿಡಬ್ಲ್ಯುಡಿ ಇತರ ಇಲಾಖೆ ಅಧಿಕಾರಿಗಳು ತಮ್ಮ ಇಲಾಖೆಯ ಪ್ರಗತಿಯನ್ನು ಸಭೆಯಲ್ಲಿ ಮಂಡಿಸಿದರು. ಲೋಕಾಯುಕ್ತ ಎಸ್ಪಿ ಯಶೋದಾ ಒಂಟಿಗೋಡಿ ಇದ್ದರು. ತಾಲೂಕಿಗೆ ಆಗಮಿಸಿದ ಉಪ ಲೋಕಾಯುಕ್ತರನ್ನು ತಹಸೀಲ್ದಾರ್ ಅನೀಲಕುಮಾರ ಢವಳಗಿ ಸ್ವಾಗತಿಸಿದರು.

**ಪಡೇಕನೂರ ಶಾಲೆಗೆ ಸೌಲಭ್ಯ ಕಲ್ಪಿಸಲು ಸೂಚನೆ:** ಪಡೇಕನೂರಿನ ಕೆಲ ಗ್ರಾಮಸ್ಥರು ಉಪ ಲೋಕಾಯುಕ್ತರಿಗೆ ಮನವಿ ಸಲ್ಲಿಸಿ, ಗ್ರಾಮದ ಶಾಲೆಗೆ ಮೂಲ ಸೌಕರ್ಯಗಳನ್ನು ಕಲ್ಪಿಸಬೇಕು. ಕುಡಿವ ನೀರು, ಕಾಂಪೌಂಡ್ ಹಾಗೂ ಶೌಚಗೃಹ ನಿರ್ಮಿಸಿಕೊಡುವಂತೆ ವಿನಂತಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ವೀರೇಶ ಜೇವರಗಿ ಹಾಗೂ ತಾಪಂ ಇಒ ಶಶಿಕಾಂತ ಶಿವಪುರೆ ಅವರಿಗೆ ತ್ವರಿತವಾಗಿ ಅಗತ್ಯ ಸೌಕರ್ಯಗಳನ್ನು ಕಲ್ಪಿಸುವಂತೆ ಪಾಟೀಲ ಸೂಚಿಸಿದರು.



ಮುದ್ದೇಬಿಹಾಳ ಪಟ್ಟಣದ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಉಪಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ನೇತೃತ್ವದಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆ ನಡೆಯಿತು.

### ರಸ್ತೆ ಬದಿ ಅತಿಕ್ರಮಣ ತೆರವಿಗೆ ಮುಲಾಜಿಲ್ಲದೆ ಕ್ರಮ ಜರುಗಿಸಿ

ಪಟ್ಟಣ ಹಾಗೂ ಗ್ರಾಮೀಣ ಭಾಗದ ರಸ್ತೆಯ ಬದಿ ಅತಿಕ್ರಮಣ ಮಾಡುವವರ ವಿರುದ್ಧ ಅಧಿಕಾರಿಗಳು ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು. ಅದಕ್ಕೆ ಹಿಂದೇಟು ಹಾಕಬಾರದು.ವಿರೋಧ ಹೆಚ್ಚಾದರೆ ಪೊಲೀಸರ ಸಹಕಾರ ಪಡೆದುಕೊಂಡು ಅತಿಕ್ರಮಣ ತೆರವು ಗೊಳಿಸಬೇಕು ಎಂದು ಪುರಸಭೆ ಅಧಿಕಾರಿಗಳಿಗೆ ಉಪ ಲೋಕಾಯುಕ್ತರು ಸೂಚಿಸಿದರು.

ಪ್ರಜಾವಾಣಿ 15-01-2021

## ಉಪಲೋಕಾಯುಕ್ತ ಬಿ.ಎಸ್.ಪಾಟೀಲ ಆದೇಶ

# ಹನಿ ನೀರನ್ನೂ ಉಳಿಸಿ; ಸೋರಿಕೆ ತಪ್ಪಿಸಿ

ಪ್ರಜಾವಾಣಿ ವಾರ್ತೆ

ಮುದ್ದೇಬಿಹಾಳ: 'ಬರಗಾಲ ಪ್ರದೇಶದ ಅಭಿವೃದ್ಧಿಗೆಂದು ನಿರ್ಮಾಣವಾಗಿರುವ ಕೃಷ್ಣಾ ನದಿ ದಂಡೆ ಕಾಲುವೆಗಳು ಬಹಳಷ್ಟು ಕಡೆ ಒಡೆದಿದ್ದು, ಅಪಾರ ಪ್ರಮಾಣದ ನೀರು ವ್ಯರ್ಥವಾಗಿ ಪೋಲಾಗುತ್ತಿರುವ ಬಗ್ಗೆ ನನಗೆ ಎರಡು ದಿನಗಳಲ್ಲಿ ವರದಿ ಬೇಕು' ಎಂದು ಕೃಷ್ಣಾ ಭಾಗ್ಯಜಲ ನಿಗಮದ ಅಧಿಕಾರಿಗಳಿಗೆ ಉಪಲೋಕಾಯುಕ್ತ ಬಿ.ಎಸ್.ಪಾಟೀಲ ಅವರು ಖಡಕ್ ಆದೇಶ ನೀಡಿದರು.

ಬುಧವಾರ ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಭವನದಲ್ಲಿ ತಾಲ್ಲೂಕಿನ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

'ಮುದ್ದೇಬಿಹಾಳ, ತಾಳಿಕೋಟಿ, ಶೋರಾಪೂರ, ಆಲಮಟ್ಟಿ ಪ್ರದೇಶಗಳಲ್ಲಿ ನಿರ್ಮಾಣವಾಗಿರುವ ಎಲ್ಲ ಎಡದಂಡೆ ಕಾಲುವೆಗಳನ್ನು ಪರೀಕ್ಷಿಸಿ, ಎಲ್ಲೆಲ್ಲಿ ಸೋರಿಕೆ ಆಗುತ್ತಿದೆ. ಒಡೆದ ಕಾಲುವೆಗಳ ಕಾಮಗಾರಿ ಮಾಡಿರುವ ಗುತ್ತಿಗೆದಾರರನ್ನು ಕರೆದು ಕೂಡಲೇ ಕೆಲಸ ಸಂಪೂರ್ಣವಾಗಿ ಮುಗಿಸುವಂತೆ ಹೇಳಬೇಕು. ಇಲ್ಲವಾದರೆ ನಾನು ಮುಂದಿನ ಕ್ರಮ ಜರುಗಿಸುತ್ತೇನೆ' ಎಂದರು.

ಬಹುತೇಕ ನೀರಾವರಿ ಇಲಾಖೆಯನ್ನೇ ಗಮನದಲ್ಲಿಟ್ಟುಕೊಂಡು ಸುಮಾರು ಮೂರು ತಾಸುಗಳ ಕಾಲ ಸಭೆ ನಡೆಸಿದ ಉಪಲೋಕಾಯುಕ್ತರು, 'ಹೊಸ ಕಾನೂನು ಪ್ರಕಾರ ಕಾಲುವೆಗಳ ನಿರ್ಮಾಣಕ್ಕೆ ಭೂಮಿಯನ್ನು ವಶಕ್ಕೆ ಪಡೆಯುವ ಮೊದಲು ಭೂಸ್ವಾಧೀನದ ಹಾಗೂ ಬೆಳೆ ನಷ್ಟದ ಪರಿಹಾರ ನೀಡಬೇಕು. ಅಧಿಕಾರಿಗಳು ಟಾರ್ಗೆಟ್ ಮುಟ್ಟಲು ಮುಗ್ಧ ರೈತರ ಅನುಮತಿಯಿಲ್ಲದೇ, ಯಾವುದೇ ಪರಿಹಾರ ನೀಡದೇ ಕೆಲಸ ಮಾಡಬೇಡಿ' ಎಂದವರು ಸೂಚಿಸಿದರು.

ಹಳ್ಳಿಹಳ್ಳಿಗೆ ತೆರಳಿ ದನಕರುಗಳಿಗೆ ಬರಬಹುದಾದ ಸಾಂಕ್ರಾಮಿಕ ಕಾಯಿಲೆಗಳ ಬಗ್ಗೆ ಮಾಹಿತಿ ನೀಡಿ ಎಂದು ಪಶು ಸಂಗೋಪನೆ ಇಲಾಖೆಯ ವೈದ್ಯಾಧಿಕಾರಿಗಳಿಗೆ ಹೇಳಿದರು.

ಸ್ವಚ್ಛತೆ ಮತ್ತು ಗ್ರಾಮೀಣ ಪ್ರದೇಶದ ಕುಡಿಯುವ ನೀರು ಘಟಕಗಳ ಬಗ್ಗೆ ವಿಚಾರಿಸಿದ ಉಪಲೋಕಾಯುಕ್ತರು, 'ಎಲ್ಲೆಲ್ಲಿ ಶೌಚಾಲಯ ಕಟ್ಟಿಯೂ ಬಳಸುತ್ತಿಲ್ಲವೋ ಅವರಿಗೆ ದಂಡ ಹಾಕಿ. ಬಂದ್ ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಪುನರಾರಂಭಕ್ಕೆ ಕ್ರಮ ಜರುಗಿಸಿ' ಎಂದರು.

ಅಮಾಸಿ ದಿವ್ಸ ಬಂದ್ರ ಯಾರ ಇರ್ತಾರ್ರಿ. ಉಪ ಲೋಕಾಯುಕ್ತರು ಬರೂದು, ಅಧಿಕಾರಿಗಳ ಭೇಟಿಗೋ, ಇಲ್ಲಾ ಜನ ಸಾಮಾನ್ಯರ ಭೇಟಿಗೋ ಎಂದು ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಮಲ್ಲಿಕಾರ್ಜುನ ತಂಗಡಗಿ ಪ್ರಶ್ನಿಸಿದರು.



ಮುದ್ದೇಬಿಹಾಳ ತಾಲ್ಲೂಕಿನ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆಯನ್ನು ನ್ಯಾಯಮೂರ್ತಿ ಉಪಲೋಕಾಯುಕ್ತ ಬಿ.ಎಸ್.ಪಾಟೀಲ ಬುಧವಾರ ನಡೆಸಿದರು

ಪ್ರಜಾವಾಣಿ - 5-1-2021

## ಉಪಲೋಕಾಯುಕ್ತರ ಪ್ರವಾಸ ಜ.9ರಿಂದ

ವಿಜಯಪುರ: ರಾಜ್ಯ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ಎನ್. ಪಾಟೀಲ ಅವರು ಜ.9 ರಿಂದ 13ರ ವರೆಗೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಜ.9 ರಂದು ಬೆಳಿಗ್ಗೆ 11ರಿಂದ ಮಧ್ಯಾಹ್ನ 2ರ ವರೆಗೆ ವಿಜಯಪುರದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬಾಕಿ ಪ್ರಕರಣಗಳ ಪರಿಶೀಲನೆ ನಡೆಸುವರು. ಅಂದು ಮಧ್ಯಾಹ್ನ 3ರಿಂದ ಸಂಜೆ 6ರ ವರೆಗೆ ವಿಜಯಪುರ ಹಾಗೂ ಸಮೀಪದ ತಾಲ್ಲೂಕುಗಳ ಸರ್ಕಾರಿ ಕಚೇರಿಗಳ ಪರಿಶೀಲನೆ ಮಾಡಲಿದ್ದಾರೆ.

ಜ.12 ರಂದು ಬೆಳಿಗ್ಗೆ 11ರಿಂದ ಮಧ್ಯಾಹ್ನ 2ರವರೆಗೆ ಬಸವನ ಬಾಗೇವಾಡಿಯಲ್ಲಿ ಅಧಿಕಾರಿಗಳ ಸಭೆ ಹಾಗೂ ಸ್ಥಳೀಯ ಕಚೇರಿಗಳ ತಪಾಸಣೆ ನಡೆಸುವರು.

ಕನ್ನಡಪ್ರಭ - 06-01-2021

## ಉಪಲೋಕಾಯುಕ್ತ ಪ್ರವಾಸ ಜ.9ರಿಂದ

**ವಿಜಯಪುರ:** ರಾಜ್ಯ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ಎನ್. ಪಾಟೀಲ ಅವರು ಜ. 9ರಿಂದ 13ರವರೆಗೆ ಜಿಲ್ಲೆಯಲ್ಲಿ ಪ್ರವಾಸ ನಡೆಸಲಿದ್ದಾರೆ. ಅಂದು ಮಧ್ಯಾಹ್ನ 1 ಗಂಟೆಗೆ ಹಿರಿಯೂರು ಸರ್ಕ್ಯೂಟ್ ಹೌಸ್‌ದಿಂದ ಆಲಮಟ್ಟಿ ಕೆ.ಎಸ್.ಟಿ.ಡಿ.ಸಿ. ಅತಿಥಿ ಗೃಹಕ್ಕೆ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ. ನಂತರ ಜ. 11ರಂದು ಬೆಳಗ್ಗೆ 11ರಿಂದ ಮಧ್ಯಾಹ್ನ 2ರವರೆಗೆ ವಿಜಯಪುರದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಬಾಕಿ ಪ್ರಕರಣಗಳ ಪರಿಶೀಲನೆ ನಡೆಸುವರು. ಅಂದು ಮಧ್ಯಾಹ್ನ 3 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿಜಯಪುರ ಹಾಗೂ ಸಮೀಪದ ತಾಲೂಕುಗಳ ಸರ್ಕಾರಿ ಕಚೇರಿಗಳ ಪರಿಶೀಲಿಸಿ ವಿಜಯಪುರದಲ್ಲಿ ವಾಸ್ತವ್ಯ ಮಾಡುವರು. ಜ. 12ರಂದು ಬೆಳಗ್ಗೆ 9.30ಕ್ಕೆ ವಿಜಯಪುರದಿಂದ ಬಸವನ ಬಾಗೇವಾಡಿ ತಾಲೂಕಿಗೆ ಹೊರಟು ಬೆಳಗ್ಗೆ 11ರಿಂದ ಮಧ್ಯಾಹ್ನ 2 ಗಂಟೆವರೆಗೆ ಅಧಿಕಾರಿಗಳೊಂದಿಗೆ ಸಭೆ ಹಾಗೂ ಸ್ಥಳೀಯ ಕಚೇರಿಗಳ ತಪಾಸಣೆ ನಡೆಸುವರು. ಜ. 13ರಂದು ಬೆಳಗ್ಗೆ 11ರ ನಂತರ ಮುದ್ದೇಬಿಹಾಳದಲ್ಲಿ ಸರ್ಕಾರಿ ಕಚೇರಿಗಳ ತಪಾಸಣೆ ನಡೆಸಿ ಪಡೇಕನೂರದಲ್ಲಿ ವಾಸ್ತವ್ಯ ಮಾಡುವರು.

ವಿಜಯ ಕರ್ನಾಟಕ - 06-01-2021

## ನ್ಯಾ.ಬಿ.ಎನ್.ಪಾಟೀಲ ಜಿಲ್ಲಾ ಪ್ರವಾಸ

**ವಿಜಯಪುರ:** ರಾಜ್ಯ ಉಪಲೋಕಾಯುಕ್ತ ನ್ಯಾ.ಬಿ.ಎನ್.ಪಾಟೀಲ ಅವರು ಜ.9ರಿಂದ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ನಾನಾ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

9ರಂದು ಮಧ್ಯಾಹ್ನ 1 ಗಂಟೆಗೆ ಹಿರಿಯೂರು ವಸತಿ ಗೃಹದಿಂದ ಆಲಮಟ್ಟಿ ಕೆಎಸ್‌ಟಿಡಿಸಿ ಅತಿಥಿ ಗೃಹಕ್ಕೆ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ.

11ರಂದು ಬೆಳಗ್ಗೆ 11ರಿಂದ ಮಧ್ಯಾಹ್ನ 2ರವರೆಗೆ ವಿಜಯಪುರದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಬಾಕಿ ಪ್ರಕರಣಗಳ ಪರಿಶೀಲನೆ ನಡೆಸುವರು. ಮಧ್ಯಾಹ್ನ 3ರಿಂದ ಸಂಜೆ 6ರವರೆಗೆ ವಿಜಯಪುರ ಹಾಗೂ ಸಮೀಪದ ತಾಲೂಕುಗಳ ಸರಕಾರಿ ಕಚೇರಿಗಳ ಪರಿಶೀಲನೆ ಮಾಡಿ ವಿಜಯಪುರದಲ್ಲಿ ವಾಸ್ತವ್ಯ ಮಾಡುವರು.

12ರಂದು ಬೆಳಗ್ಗೆ 9.30ಕ್ಕೆ ವಿಜಯಪುರದಿಂದ ಬಸವನಬಾಗೇವಾಡಿ ತಾಲೂಕಿಗೆ ಹೊರಟು ಬೆಳಗ್ಗೆ 11ರಿಂದ ಮಧ್ಯಾಹ್ನ 2ರವರೆಗೆ ಅಧಿಕಾರಿಗಳೊಂದಿಗೆ ಸಭೆ ಹಾಗೂ ಸ್ಥಳೀಯ ಕಚೇರಿಗಳ ತಪಾಸಣೆ ನಡೆಸುವರು. 13ರಂದು ಬೆಳಗ್ಗೆ 11ರ ನಂತರ ಮುದ್ದೇಬಿಹಾಳದಲ್ಲಿ ಸರಕಾರಿ ಕಚೇರಿಗಳ ತಪಾಸಣೆ ನಡೆಸಿ ಪಡೇಕನೂರ ಗ್ರಾಮದಲ್ಲಿ ವಾಸ್ತವ್ಯ ಮಾಡುವರು. 15ರಂದು ಬೆಳಗ್ಗೆ 10.30ಕ್ಕೆ ನಾನಾ ಗ್ರಾಮಗಳಿಗೆ ಭೇಟಿ ನೀಡಿ ಪಡೇಕನೂರ ಗ್ರಾಮದಲ್ಲಿ ವಾಸ್ತವ್ಯ ಮಾಡಲಿದ್ದಾರೆ. 16ರಂದು ಬೆಳಗ್ಗೆ 8.30ಕ್ಕೆ ಪಡೇಕನೂರ ಗ್ರಾಮದಿಂದ ಹೊಸಪೇಟೆಗೆ ಹೊರಡುವರು ಎಂದು ಪ್ರಕಟಣೆ ತಿಳಿಸಿದೆ.

# ‘ಮೂರನೇ ಅಲೆ ಎದುರಿಸಲು ಸಿದ್ಧರಾಗಿ’

## ಕೋವಿಡ್‌ನ ಎರಡೂ ಅಲೆಯಿಂದ ಕಲಿತ ಪಾಠ ನೆರವಾಗಲಿ: ಬಿ.ಎಸ್.ಪಾಟೀಲ್

“ಪ್ರಜಾವಾಣಿ ದಿನಾಂಕ 25-7-2021”

ಪ್ರಜಾವಾಣಿ ವಾರ್ತೆ



ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಸಭೆಯಲ್ಲಿ ಮಾತನಾಡಿದರು. ಡಾ.ಬಗಾದಿ ಗೌತಮ್, ಆರ್.ಚೇತನ್, ಪಿ.ವಿ.ಸ್ನೇಹಾ ಇದ್ದಾರೆ

ಮೈಸೂರು: ‘ಕೋವಿಡ್‌ನ ಎರಡು ಅಲೆಗಳಿಂದ ಕಲಿತಿರುವ ಪಾಠಗಳನ್ನು ಮೂರನೇ ಅಲೆ ಎದುರಿಸಲು ಬಳಸಬೇಕು’ ಎಂದು ಕರ್ನಾಟಕ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಹೇಳಿದರು.

ಶನಿವಾರ ಜಿಲ್ಲಾಡಳಿತದ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿ, ‘ಮೊದಲ ಎರಡು ಅಲೆಗಳಿಂದ ಅಧಿಕಾರಿಗಳು ಪಾಠ ಕಲಿತಿದ್ದಾರೆ. ಸಂಭಾವ್ಯ ಮೂರನೇ ಅಲೆಯ ಬಗ್ಗೆ ತಜ್ಞರು ಮುನ್ಸೂಚನೆ ನೀಡಿದ್ದಾರೆ. ಅದನ್ನು ಎದುರಿಸಲು ಈಗಿನಿಂದಲೇ ಸೂಕ್ತ ಸಿದ್ಧತೆ ಮಾಡಿಕೊಳ್ಳದಿದ್ದರೆ, ಅಪಾಯ ಖಚಿತ’ ಎಂದು ಎಚ್ಚರಿಸಿದರು.

‘ಗ್ರಾಮ ಪಂಚಾಯಿತಿ ಸದಸ್ಯರು, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರನ್ನು ಒಳಗೊಂಡಂತೆ ಗ್ರಾಮಮಟ್ಟದ ಟಾಸ್ಕ್ ಫೋರ್ಸ್ ರಚಿಸಿ, ಸೂಕ್ತ ತರಬೇತಿ ನೀಡಬೇಕು. ವೈದ್ಯಕೀಯ ಸೌಲಭ್ಯಗಳು ಜಿಲ್ಲಾ ಕೇಂದ್ರದಲ್ಲಿ ಮಾತ್ರ ಇದ್ದರೆ ಸಾಲದು. ತಾಲ್ಲೂಕು, ಗ್ರಾಮ ಮಟ್ಟದಲ್ಲೂ ಸಿಗಬೇಕು’ ಎಂದು ಸಲಹೆ ನೀಡಿದರು.

ಮೂರನೇ ಅಲೆ ಎದುರಿಸಲು ಕೈಗೊಂಡಿರುವಕ್ರಮಗಳ ಬಗ್ಗೆ ವಿವರಿಸಿದ ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್, ‘ಹಿಂದಿನ ಅನುಭವಗಳ ಆಧಾರದಲ್ಲಿ ಸಿದ್ಧತೆ ಮಾಡಿಕೊಂಡಿದ್ದೇವೆ. ಕೋವಿಡ್ ತೀವ್ರಗೊಂಡಿದ್ದ ಸಂದರ್ಭದಲ್ಲಿ ನಿತ್ಯ ಮೂರು ಸಾವಿರ ಪ್ರಕರಣಗಳು ದಾಖಲಾಗಿದ್ದವು. ಮುಂದೆ ನಿತ್ಯ ಐದು ಸಾವಿರ ಪ್ರಕರಣ ವರದಿಯಾದರೂ, ಅದಕ್ಕೆ ಬೇಕಾಗುವಷ್ಟು ವೈದ್ಯಕೀಯ ಸೌಲಭ್ಯ ಹೊಂದಿಸಿಕೊಂಡಿದ್ದೇವೆ’ ಎಂದರು.

‘ಬೆಂಗಳೂರು ಹೊರತು ಪಡಿಸಿದರೆ ಮೈಸೂರು ಜಿಲ್ಲೆಯಲ್ಲಿ ರಾಜ್ಯದಲ್ಲೇ ಅತಿ ಹೆಚ್ಚು ಕೋವಿಡ್ ಪರೀಕ್ಷೆಗಳು ನಡೆದಿವೆ. ಜಿಲ್ಲೆಯ ಶೇ.50ರಷ್ಟು ಜನರಿಗೆ ಲಸಿಕೆ ಹಾಕಲಾಗಿದೆ’ ಎಂದು ಹೇಳಿದರು.

ಸಭೆಯಲ್ಲಿ ಎಸ್‌ಪಿ ಆರ್.ಚೇತನ್, ಲೋಕಾಯುಕ್ತ ಎಸ್‌ಪಿ ಪಿ.ವಿ.ಸ್ನೇಹಾ, ಡಿಸಿಪಿ ಪ್ರದೀಪ್ ಗುಂಟಿ, ಜಿಲ್ಲಾ ಪಂಚಾಯಿತಿ ಸಿಇಒ ಎ.ಎಂ.ಯೋಗೀಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಎಚ್.ಪ್ರಸಾದ್, ಎಂಎಂಸಿಆರ್‌ಐ ನಿರ್ದೇಶಕ ಡಾ.ಸಿ.ಪಿ.ನಂಜರಾಜ್ ಉಪಸ್ಥಿತರಿದ್ದರು.

> ಮೂರನೇ ಅಲೆ ಮಕ್ಕಳನ್ನು ಬಾಧಿಸುತ್ತದೆ ಎನ್ನಲಾಗುತ್ತಿದೆ. **ಪೋಷಕರ ಮೂಲಕವೇ ಮಕ್ಕಳಿಗೆ ಸೋಂಕು ಹರಡುವ ಸಾಧ್ಯತೆ ಇದೆ. ಅವರು ಎಚ್ಚರವಹಿಸಬೇಕು**
>
> **ಬಿ.ಎಸ್.ಪಾಟೀಲ್**
> ಉಪ ಲೋಕಾಯುಕ್ತ ನ್ಯಾಯಮೂರ್ತಿ

ಆಂದೋಲನ ದಿನಪತ್ರಿಕೆ ದಿನಾಂಕ 25-07-2021

# ‘ಮೂರನೇ ಅಲೆ ತಡೆಗೆ ಜನರಿಗೆ ತಿಳಿವಳಿಕೆ ನೀಡಿ’

## ಮೂರನೇ ಅಲೆ ಎದುರಿಸಲು ಜಿಲ್ಲಾಡಳಿತದ ಸಿದ್ಧತೆ ಬಗ್ಗೆ ಮಾಹಿತಿ ಪಡೆದ ಉಪ ಲೋಕಾಯುಕ್ತ ಪಾಟೀಲ್

ಮೈಸೂರು: ಕೋವಿಡ್ ಮೊದಲನೇ ಮತ್ತು ಎರಡನೇ ಅಲೆಯಿಂದ ಅಧಿಕಾರಿಗಳು ಹಲವಾರು ಪಾಠ ಕಲಿತಿದ್ದಾರೆ. 3ನೇ ಅಲೆ ಬಗ್ಗೆ ಪರಿಣತರು ಮುನ್ಸೂಚನೆ ನೀಡಿದ್ದಾರೆ. ಈ ಬಗ್ಗೆ ಸೂಕ್ತ ಸಿದ್ಧತೆ ಮಾಡಿಕೊಳ್ಳದಿದ್ದರೆ ಮತ್ತೆ ಅಂತಹದ್ದೇ ಸ್ಥಿತಿ ಬರಬಹುದು. ಅದು ಮರುಕಳಿಸಬಾರದು ಎಂದು ಕರ್ನಾಟಕ ಉಪ ಲೋಕಾ ಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶನಿವಾರ ಅಧಿಕಾರಿಗಳ ಸಭೆ ನಡೆಸಿ ಕೋವಿಡ್ ಮೂರನೇ ಅಲೆ ಎದುರಿಸಲು ಜಿಲ್ಲಾಡಳಿತ ಮಾಡಿಕೊಂಡಿರುವ ಪೂರ್ವಸಿದ್ಧತೆ ಬಗ್ಗೆ ಮಾಹಿತಿ ಪಡೆದು ಮಾತನಾಡಿದ ಅವರು, 3ನೇ ಅಲೆಯಲ್ಲಿ ನಿರ್ಲಕ್ಷ್ಯ ಆಗದಂತೆ ಅಧಿಕಾರಿಗಳು



ಹಿಂದಿನ ಅನುಭವಗಳ ಮೇಲೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದ್ದೇವೆ. ಪ್ರತಿದಿನ 5 ಸಾವಿರ ಪ್ರಕರಣಗಳು ಬಂದರೂ ಅಗತ್ಯ ವೈದ್ಯಕೀಯ ಸೌಲಭ್ಯ ಹೊಂದಿಸಿಕೊಂಡಿದ್ದೇವೆ. ರಾಜ್ಯದಲ್ಲೇ ಬೆಂಗಳೂರು ಹೊರತುಪಡಿಸಿದರೆ ಜಿಲ್ಲೆಯಲ್ಲಿ ಅತಿ ಹೆಚ್ಚು ಟೆಸ್ಟ್ ಆಗಿದೆ. ಈವರೆಗೆ ಸುಮಾರು 17 ಲಕ್ಷ ಜನರಿಗೆ ಲಸಿಕೆ ಆಗಿದ್ದು, ಜಿಲ್ಲೆಯ ಶೇ.50ರಷ್ಟು ಜನರಿಗೆ ಲಸಿಕೆ ಹಾಕಿದಂತಾಗಿದೆ. -ಡಾ.ಬಗಾದಿ ಗೌತಮ್, ಜಿಲ್ಲಾಧಿಕಾರಿ

ಜನರಿಗೆ ತಿಳಿವಳಿಕೆ ನೀಡಬೇಕು. 3ನೇ ಅಲೆ ಮಕ್ಕಳನ್ನು ಬಾಧಿಸುತ್ತದೆ ಎಂದು ಹೇಳಲಾಗುತ್ತಿದೆ. ಪೋಷಕರ ಮೂಲಕವೇ ಮಕ್ಕಳಿಗೆ ಸೋಂಕು ಹರಡುವ ಸಾಧ್ಯತೆಯಿರುವುದರಿಂದ, ಮಕ್ಕಳನ್ನು ರಕ್ಷಿಸಿಕೊಳ್ಳಲು ಪೋಷಕರು ಅನುಸರಿಸಬೇಕಾದ ಕ್ರಮಗಳ ಬಗ್ಗೆ ತಿಳಿವಳಿಕೆ ನೀಡಬೇಕು ಎಂದರು.

ಗ್ರಾಪಂ ಸದಸ್ಯರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಮತ್ತಿತರರನ್ನು ಒಳಗೊಂಡ ಗ್ರಾಮ ಮಟ್ಟದ ಟಾಸ್ಕ್‌ಫೋರ್ಸ್‌ಗೆ ಸೂಕ್ತ ತರಬೇತಿ ನೀಡಿ, ಎಲ್ಲಾ ವೈದ್ಯಕೀಯ ಸೌಲಭ್ಯಗಳು ಜಿಲ್ಲಾ ಕೇಂದ್ರದಲ್ಲಿ ಇದ್ದರೆ ಸಾಲದು. ತಾಲ್ಲೂಕು ಮಟ್ಟದಲ್ಲಿ, ಗ್ರಾಮ ಮಟ್ಟದಲ್ಲೂ ವೈದ್ಯಕೀಯ ಸೌಲಭ್ಯ ಸಿಗುವಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಎಸ್‌ಪಿ ಆರ್.ಚೇತನ್, ಲೋಕಾಯುಕ್ತ ಪೊಲೀಸ್ ಅಧೀಕ್ಷಕಿ ಪಿ.ವಿ.ಸ್ನೇಹಾ, ಡಿಸಿಪಿ ಪ್ರದೀಪ್ ಗುಂಟಿ, ಜಿಪಂ ಸಿಇಒ ಎ.ಎಂ.ಯೋಗೀಶ್, ಡಿಎಚ್‌ಒ ಡಾ.ಕೆ.ಎಚ್.ಪ್ರಸಾದ್, ಎಂಎಂಸಿಆರ್‌ಐ ನಿರ್ದೇಶಕ ಡಾ.ಸಿ.ಪಿ.ನಂಜರಾಜ್ ಮುಂತಾದವರು ಸಭೆಯಲ್ಲಿ ಹಾಜರಿದ್ದರು.

# ಅನಾಹುತ ಮರುಕಳಿಸದಿರಲಿ

## ಕರೊನಾ ಬಗ್ಗೆ ಎಚ್ಚರ ವಹಿಸಲು ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಸೂಚನೆ

■ ವಿಜಯವಾಣಿ ಸುದ್ದಿಜಾಲ ಮೈಸೂರು

ಕೋವಿಡ್ 3ನೇ ಅಲೆ ಬಗ್ಗೆ ಪರಿಣಿತರು ಮುನ್ಸೂಚನೆ ನೀಡಿದ್ದಾರೆ. ಆದ್ದರಿಂದ ಅನಾಹುತಗಳು ಮರುಕಳಿಸದಂತೆ ಎಚ್ಚರ ವಹಿಸಬೇಕು ಎಂದು ಕರ್ನಾಟಕ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಹೇಳಿದರು.

ಕೋವಿಡ್-19ರ ಮೂರನೇ ಅಲೆ ಎದುರಿಸಲು ಜಿಲ್ಲಾಡಳಿತ ಮಾಡಿಕೊಂಡಿರುವ ಪೂರ್ವಸಿದ್ಧತೆ ಕುರಿತು ನಗರದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. ಕೋವಿಡ್ ಆರಂಭದಲ್ಲಿ ಜನರು ಮುಂಜಾಗ್ರತ ಕ್ರಮಗಳನ್ನು ಪಾಲಿಸುತ್ತಿದ್ದರು. ಆದರೆ, ಮೊದಲ ಅಲೆ ಕಡಿಮೆಯಾಗುತ್ತಿದ್ದಂತೆ ನಿರ್ಲಕ್ಷ್ಯ ವಹಿಸಿ, ಜನರು ಮಾಸ್ಕ್ ಹಾಕುವುದನ್ನು ಬಿಟ್ಟಿದ್ದರು. ಎರಡನೇ ಅಲೆ ತೀವ್ರಗೊಳ್ಳುವವರೆಗೂ ಎಚ್ಚರ ತಪ್ಪಿದ್ದರಿಂದ ಹೆಚ್ಚಿನ ಹಾನಿಯಾಗಿದೆ. 3ನೇ ಅಲೆಯಲ್ಲಿ ಇಂತಹ ನಿರ್ಲಕ್ಷ್ಯ ಆಗದಂತೆ ಅಧಿಕಾರಿಗಳು ಜನರಿಗೆ ತರಬೇತಿ, ತಿಳಿವಳಿಕೆ ನೀಡಬೇಕು ಎಂದು ತಿಳಿಸಿದರು.

ಹೆಚ್ಚಿನ ಸ್ಥಳೀಯ ಸುದ್ದಿಗಳಿಗೆ ಪುಟ I ನೋಡಿ

3ನೇ ಅಲೆಯಲ್ಲಿ ಮಕ್ಕಳನ್ನು ಬಾಧಿಸುತ್ತದೆ ಎಂದು ಹೇಳಲಾಗುತ್ತಿದೆ. ಪಾಲಕರ ಮೂಲಕವೇ ಮಕ್ಕಳಿಗೆ ಸೋಂಕು ಹರಡುವ ಸಾಧ್ಯತೆ ಹೆಚ್ಚಿರುವುದರಿಂದ, ಮಕ್ಕಳನ್ನು ರಕ್ಷಿಸಿಕೊಳ್ಳಲು ಪಾಲಕರು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಗ್ರಾಮ ಪಂಚಾಯಿತಿ ಸದಸ್ಯರು, ಅಂಗನವಾಡಿ, ಆಶಾ ಕಾರ್ಯಕರ್ತೆಯರನ್ನೊಳಗೊಂಡ ಗ್ರಾಮ ಮಟ್ಟದ ಟಾಸ್ಕ್‌ಫೋರ್ಸ್‌ಗೆ ಸೂಕ್ತ ತರಬೇತಿ ನೀಡಿ, ಆ ಮೂಲಕ ಪ್ರತಿಯೊಬ್ಬರಿಗೂ ಅರಿವು ಮೂಡಿಸುವುದು ಬಹಳ ಮುಖ್ಯ ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್ ಮಾತನಾಡಿ, ಹಿಂದಿನ ಅನುಭವಗಳ ಮೇಲೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಂಡಿದ್ದೇವೆ. ಕೋವಿಡ್ ತೀವ್ರಗೊಂಡಿದ್ದ ಸಂದರ್ಭದಲ್ಲಿ ಕೆಲ ದಿನಗಳು 3 ಸಾವಿರ ಪ್ರಕರಣಗಳು ದಾಖಲಾಗಿದ್ದವು. ಅಂತಹ ಪರಿಸ್ಥಿತಿ ಮುಂದೆ ಎದುರಾದರೂ ಬೇಕಾಗುವಷ್ಟು ವೈದ್ಯಕೀಯ ಸೌಲಭ್ಯ ಹೊಂದಿಸಿಕೊಂಡಿದ್ದೇವೆ ಎಂದು ತಿಳಿಸಿದರು.

ಬೆಂಗಳೂರು ಹೊರತು ಪಡಿಸಿದರೆ ಮೈಸೂರಿನಲ್ಲಿ ರಾಜ್ಯದಲ್ಲೇ ಅತಿ ಹೆಚ್ಚು ಟೆಸ್ಟ್ ಆಗಿದೆ. ಈವರೆಗೆ ಸುಮಾರು 17 ಲಕ್ಷ ಜನರಿಗೆ ಲಸಿಕೆ ನೀಡಿದ್ದು, ಜಿಲ್ಲೆಯ ಶೇ.50 ರಷ್ಟು ಜನರಿಗೆ ಲಸಿಕೆ ಹಾಕಿದಂತಾಗಿದೆ ಎಂದು ಹೇಳಿದರು. ಜಿಲ್ಲಾ ಪೊಲೀಸ್ ಅಧೀಕ್ಷಕ ಆರ್. ಚೇತನ್, ಲೋಕಾಯುಕ್ತ ಪೊಲೀಸ್ ಅಧೀಕ್ಷಕಿ ಪಿ.ವಿ.ಸ್ನೇಹಾ, ಡಿಸಿಪಿ ಪ್ರದೀಪ್ ಗುಂಟಿ, ಜಿಲ್ಲಾ ಪಂಚಾಯಿತಿ ಸಿಇಒ ಎ.ಎಂ.ಯೋಗೀಶ್, ಡಿಎಚ್ಒ ಡಾ.ಕೆ.ಎಚ್.ಪ್ರಸಾದ್, ಎಂಎಂಸಿಆರ್‌ಐ ನಿರ್ದೇಶಕ ಡಾ. ಸಿ.ಪಿ.ನಂಜರಾಜ್ ಇತರರು ಇದ್ದರು.



ವಿಜಯವಾಣಿ ಚಿತ್ರ

ಕೋವಿಡ್-19 ಮೂರನೇ ಅಲೆ ಎದುರಿಸುವ ಸಂಬಂಧ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಅಧ್ಯಕ್ಷತೆಯಲ್ಲಿ ಶನಿವಾರ ಅಧಿಕಾರಿಗಳ ಸಭೆ ಆಯೋಜಿಸಲಾಗಿತ್ತು. ಡಾ. ಬಗಾದಿ ಗೌತಮ್, ಆರ್.ಚೇತನ್, ಪಿ.ವಿ.ಸ್ನೇಹಾ, ಪ್ರದೀಪ್ ಗುಂಟಿ ಇದ್ದರು

# ಕೋವಿನ್- ಕೇರ್ ಪ್ರಾಯೋಗಿಕ ಚಾಲನೆ

■ ವಿಜಯವಾಣಿ ಸುದ್ದಿಜಾಲ ಮೈಸೂರು

ಹೊಸದಾಗಿ ಲಸಿಕೆ ಪಡೆಯುವವರು ಮತ್ತು 2ನೇ ಡೋಸ್ ಪಡೆಯಬೇಕಿರುವವರು ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಳ್ಳಲು ಅನುಕೂಲವಾಗುವಂತೆ ರಾಜ್ಯ ಸರ್ಕಾರ ಅಭಿವೃದ್ಧಿ ಪಡಿಸಿರುವ 'ಕೋವಿನ್-ಕೇರ್' ತಂತ್ರಾಂಶ ಜು.26ರಿಂದ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಚಾಲನೆಗೊಳ್ಳಲಿದೆ.

**» ನಾಳೆಯಿಂದ ಕಾರ್ಯ ನಿರ್ವಹಣೆ**

ಈ ತಂತ್ರಾಂಶದ ಮೂಲಕ ಮೈಸೂರು ನಗರದ ನಾಗರಿಕರು ಆನ್‌ಲೈನ್‌ನಲ್ಲೇ ಲಸಿಕೆ ಪಡೆಯಲು ನೋಂದಣಿ ಮಾಡಿಕೊಳ್ಳಬಹುದು. ಕೋವಿನ್ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್‌ಲೋಡ್ ಮಾಡಿ ನೋಂದಾಯಿಸಿಕೊಳ್ಳಬೇಕು. cowin.karnataka.gov.in ಲಿಂಕ್ ಹಾಗೂ ಮೈಸೂರು ಜಿಲ್ಲಾಡಳಿತದ ಅಂತರ್ಜಾಲದ ಮೂಲಕವೂ ಸ್ವಯಂ ಪ್ರೇರಿತವಾಗಿ ನೋಂದಾಯಿಸಿಕೊಳ್ಳಲು ಅವಕಾಶವಿದೆ ಎಂದು ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಲಸಿಕೆಯ ಲಭ್ಯತೆ ಆಧರಿಸಿ ಲಸಿಕಾ ದಿನ, ಸರ್ಕಾರಿ ಆರೋಗ್ಯ ಕೇಂದ್ರದ ಹೆಸರು ಮತ್ತು ಸಮಯದ ಬಗ್ಗೆ 24 ಗಂಟೆಗಳ ಮುಂಚೆ ಮೊಬೈಲ್‌ಗೆ ಎಸ್‌ಎಂಎಸ್ ಸಂದೇಶ ಬರಲಿದೆ. ಫಲಾನುಭವಿಗಳು ಆದ್ಯತೆ ಮೇರೆಗೆ ಲಸಿಕೆ ಮತ್ತು ನಿಗದಿತ ದಿನಾಂಕವನ್ನು ಆಯ್ಕೆ ಮಾಡುವ ಸ್ವಾತಂತ್ರ್ಯ ಹೊಂದಿರುತ್ತಾರೆ. ತಮ್ಮ ಲಸಿಕೆ ದಿನವನ್ನು 1 ಬಾರಿ ಬದಲಾವಣೆ ಮಾಡಿಕೊಳ್ಳಲು ಅವಕಾಶ ಇದೆ ಎಂದು ತಿಳಿಸಿದ್ದಾರೆ.

ಕರ್ನಾಟಕ ಲೋಕಾಯುಕ್ತ

# ಶ್ರೀ. ಬಿ.ಎಸ್. ಪಾಟೀಲ,

## ಗೌರವಾನ್ವಿತ ನ್ಯಾಯಮೂರ್ತಿಗಳು ಹಾಗೂ ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ರಾಜ್ಯ

ರವರ ಅಧ್ಯಕ್ಷತೆಯಲ್ಲಿ ದಿನಾಂಕ. 07.08.2021 ರಂದು ಬೆಳಗಾವಿ ಜಿಲ್ಲೆಯ ಕೋವಿಡ್-19 ಹಾಗೂ ಪ್ರವಾಹ ನಿರ್ವಹಣೆಯ ಕುರಿತು ಜಿಲ್ಲಾ ಪಂಚಾಯತ ಸಭಾ ಭವನ, ಬೆಳಗಾವಿ ಯಲ್ಲಿ ನಡೆದ ಪರಿಶೀಲನಾ ಸಭೆಯ ಬಗ್ಗೆ ದಿನಪತ್ರಿಕೆಗಳಲ್ಲಿ ಪ್ರಕಟವಾದ ಸುದ್ಧಿ ತುಣುಕುಗಳು.

— ೧ ವಿಜಯವಾಣಿ ೧ —

ದಿನಾಂಕ
08/08/2021

## ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಸೂಚನೆ | ಕರೊನಾ ತಡೆಗೆ ಜಾಗೃತಿ ಮೂಡಿಸಿ

# ವೈದ್ಯರಿಂದ ಕಾರ್ಯಾಗಾರ ಆಯೋಜಿಸಿ

■ ವಿಜಯವಾಣಿ ಸುದ್ದಿಜಾಲ ಬೆಳಗಾವಿ

ಕೋವಿಡ್-19 ಸಂಭವನೀಯ ಮೂರನೇ ಅಲೆ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೇ ತಜ್ಞ ವೈದ್ಯರಿಂದ ಕಾರ್ಯಾಗಾರ ಆಯೋಜಿಸಬೇಕು. ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಕೋವಿಡ್-19 ಹಾಗೂ ಅತಿವೃಷ್ಟಿ ನಿರ್ವಹಣೆ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೋವಿಡ್-1 ಮತ್ತು 2ನೇ ಅಲೆಯಲ್ಲಿ ಎದುರಾದ ಸಮಸ್ಯೆಗಳು ಮತ್ತೆ ಮರುಕಳಿಸದಂತೆ ಎಚ್ಚರ ವಹಿಸಿ. ಮಗು ಮತ್ತು ತಾಯಿಯ ಆರೋಗ್ಯ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

**» ಕೋವಿಡ್-19, ಅತಿವೃಷ್ಟಿ ನಿರ್ವಹಣೆ ಪರಿಶೀಲನೆ ಸಭೆ**

**ನಿರ್ಲಕ್ಷ್ಯ ಮಾಡಬೇಡಿ:** ನೆರೆಯ ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳ ಗಡಿ ಹಂಚಿಕೊಂಡಿರುವ ಬೆಳಗಾವಿ ಜಿಲ್ಲೆಯಲ್ಲಿ ಕರೊನಾ ಸೋಂಕು ತಡೆಗಟ್ಟಲು ಅಧಿಕಾರಿಗಳು ದಿನದ 24 ಗಂಟೆಯೂ ಸೇವೆ ಸಲ್ಲಿಸಬೇಕು. ಗಡಿಯಲ್ಲಿರುವ ಚೆಕ್‌ಪೋಸ್ಟ್‌ಗಳಲ್ಲಿ ಕಟ್ಟುನಿಟ್ಟಿನ ಕ್ರಮ ವಹಿಸಬೇಕು. ಸಂಭವನೀಯ ಕೋವಿಡ್ ಮೂರನೇ ಅಲೆ ಸಾಧ್ಯತೆ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಗ್ರಾಪಂ ಸಿಬ್ಬಂದಿ, ಪೊಲೀಸರು, ತಾಲೂಕು ಮತ್ತು ಜಿಲ್ಲಾಮಟ್ಟದ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯಮಾಡಬೇಡಿ ಎಂದು ಸೂಚಿಸಿದರು.

**ನಂಬಿಕೆ ಉಳಿಸಿಕೊಳ್ಳಿ:** ಅತಿವೃಷ್ಟಿ, ನದಿಗಳ ಪ್ರವಾಹ, ಕೋವಿಡ್-19 ಸಂಕಷ್ಟದ ಸಮಯದಲ್ಲಿ ಸರ್ಕಾರವು ನೌಕರರಿಗೆ ವೇತನ ಸೇರಿ ಯಾವುದೇ ಸೌಲಭ್ಯ ಕಡಿತಗೊಳಿಸಿಲ್ಲ. ಹೀಗಾಗಿ ಇಂತಹ ಕ್ಲಿಷ್ಟಕರ ಸಂದರ್ಭದಲ್ಲಿ ಕರ್ತವ್ಯ ಪಾಲನೆ ಮಾಡಬೇಕು. ಜನರು ಮತ್ತು ಸರ್ಕಾರ ಇಟ್ಟಿರುವ ನಂಬಿಕೆ ಉಳಿಸಿಕೊಳ್ಳಿ. ಯಾವುದೇ ಕಾರಣಕ್ಕೂ ಆಕ್ಸಿಜನ್, ಬೆಡ್, ವೈದ್ಯರು, ವೈದ್ಯಕೀಯ ಸೌಲಭ್ಯಗಳ ಕೊರತೆ ಆಗದಂತೆ ಕ್ರಮ ವಹಿಸಬೇಕು ಎಂದು ತಿಳಿಸಿದರು.

**ತಾರತಮ್ಯ ಸಲ್ಲದು:** ಜನರಿಗೆ ಸಮರ್ಪಕವಾಗಿ ಲಸಿಕೆ ವಿತರಣೆ ಆಗುತ್ತಿಲ್ಲ. ಲಸಿಕೆ ನೀಡುವುದರಲ್ಲಿ ತಾರತಮ್ಯ ಮಾಡುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆ. ಯಾವುದೇ ಕಾರಣಕ್ಕೂ ಬಡವರು, ಕೂಲಿ ಕಾರ್ಮಿಕರು ಲಸಿಕೆಯಿಂದ ವಂಚಿತರಾಗಬಾರದು. ಲಭ್ಯವಿರುವ ಲಸಿಕೆ ಎಲ್ಲರಿಗೂ ಸಮಾನವಾಗಿ ಹಂಚಿಕೆಯಾಗಬೇಕು. ಲಸಿಕೆಗಾಗಿಯೇ ದಿನದ ಕೂಲಿ ಬಿಟ್ಟು ಕಾರ್ಮಿಕರು, ಬಡವರು ಅಲೆದಾಡುವಂತೆ ಮಾಡಬೇಡಿ. ಬಡ ಕುಟುಂಬಗಳನ್ನು ಗುರುತಿಸಿ ಲಸಿಕೆ ನೀಡಿ. ಈ ವಿಷಯದಲ್ಲಿ ನಿರ್ಲಕ್ಷಿಸಿದರೆ ಸುಮ್ಮನೆ ಇರುವುದಿಲ್ಲ ಎಂದು ಆರೋಗ್ಯ ಇಲಾಖೆಗೆ ಬಿ.ಎಸ್. ಪಾಟೀಲ ಎಚ್ಚರಿಸಿದರು. ಜಿಲ್ಲಾಧಿಕಾರಿ ಎಂ.ಜಿ. ಹಿರೇಮಠ, ಜಿಲ್ಲಾ ಪಂಚಾಯಿತಿ ಸಿಇಒ ಎಚ್.ವಿ.ದರ್ಶನ, ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಮಹಾನಗರ ಪೊಲೀಸ್ ಆಯುಕ್ತ ಡಾ.ಕೆ.ತ್ಯಾಗರಾಜನ್, ಲೋಕಾಯುಕ್ತ ಎಸ್ಪಿ ಯಶೋದಾ ವಂಟಗೋಡಿ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.



ಬೆಳಗಾವಿ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಮಾತನಾಡಿದರು. ಜಿಲ್ಲಾಧಿಕಾರಿ ಎಂ.ಜಿ.ಹಿರೇಮಠ, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಚ್.ವಿ. ದರ್ಶನ, ಎಸ್ಪಿ ಲಕ್ಷ್ಮಣ ನಿಂಬರಗಿ, ನಗರ ಪೊಲೀಸ್ ಆಯುಕ್ತ ಡಾ. ಕೆ.ತ್ಯಾಗರಾಜನ್, ಲೋಕಾಯುಕ್ತ ಎಸ್ಪಿ ಯಶೋದಾ ವಂಟಗೋಡಿ ಇದ್ದರು.

### ಶೌಚಗೃಹ ನಿರ್ಮಾಣ ತನಿಖೆ ನಡೆಸಿ

ಸರ್ಕಾರಗಳು ಬಯಲು ಶೌಚ ಮುಕ್ತವನ್ನಾಗಿಸಲು ಪ್ರತಿ ಮನೆ ಮನೆಗೆ ಶೌಚಗೃಹ ಸೌಲಭ್ಯ ಕಲ್ಪಿಸಿದೆ. ಆದರೆ, ಹಳ್ಳಿಗಳಲ್ಲಿ ಇಂದಿಗೂ ಬಯಲು ಶೌಚ ಪದ್ಧತಿ ಜೀವಂತವಾಗಿದೆ. ಆ ಹಿನ್ನೆಲೆಯಲ್ಲಿ ಸರ್ಕಾರದ ಅನುದಾನದಲ್ಲಿ ಎಷ್ಟು ಜನ ಶೌಚಗೃಹಗಳನ್ನು ನಿರ್ಮಿಸಿಕೊಂಡಿದ್ದಾರೆ? ಎಷ್ಟು ಜನ ಬಳಕೆ ಮಾಡುತ್ತಿದ್ದಾರೆ? ಶೌಚಗೃಹಕ್ಕೆ ನೀರು, ವಿದ್ಯುತ್ ಸೌಲಭ್ಯ ಕಲ್ಪಿಸಲಾಗಿದೆಯೇ? ಯಾವ ಕಾರಣಕ್ಕೆ ಶೌಚಗೃಹ ಬಳಕೆ ಮಾಡುತ್ತಿಲ್ಲ ಎಂಬ ಬಗ್ಗೆ ಸಮಗ್ರ ತನಿಖೆ ನಡೆಸಿ ಲೋಕಾಯುಕ್ತಕ್ಕೆ ವರದಿ ಸಲ್ಲಿಸಬೇಕು ಎಂದು ಜಿಪಂ ಸಿಇಒ ಎಚ್.ವಿ. ದರ್ಶನ ಅವರಿಗೆ ಬಿ.ಎಸ್. ಪಾಟೀಲ ಸೂಚಿಸಿದರು.

### ಸರ್ಕಾರದ ಇಲಾಖೆಗಳಲ್ಲಿ ಭ್ರಷ್ಟಾಚಾರ ನಿಲ್ಲಲಿ

ಕೆರೆ, ಅರಣ್ಯ ಪ್ರದೇಶ ದೇಶದ ಸಂಪತ್ತು. ಅವುಗಳನ್ನು ರಕ್ಷಣೆ ಮಾಡುವುದು ಎಲ್ಲರ ಜವಾಬ್ದಾರಿ. ಕೆರೆಗಳ ಒತ್ತುವರಿ ತೆರವಿಗೆ ಯಾವ ಕ್ರಮ ಕೈಗೊಂಡಿದ್ದೀರಿ? ಎಷ್ಟು ಕೆರೆಗಳಿವೆ? ಅವುಗಳಲ್ಲಿ ಎಷ್ಟು ಒತ್ತುವರಿಯಾಗಿವೆ ಎಂಬ ಕುರಿತು ಜಿಲ್ಲಾಡಳಿತ ಮಾಹಿತಿ ಸಲ್ಲಿಸಬೇಕು. ಇಲಾಖೆಗಳಲ್ಲಿ ಭ್ರಷ್ಟಾಚಾರ ನಿಲ್ಲಬೇಕು. ಒಂದೇ ಕೇಸ್ ಬಂದರೂ ಸಮಗ್ರ ತನಿಖೆ ನಡೆಸಿ ಕ್ರಮ ವಹಿಸಬೇಕಾಗುತ್ತದೆ. ನೆರೆ ಸಂತ್ರಸ್ತರಿಗೆ ನ್ಯಾಯಯುತವಾಗಿ ಪರಿಹಾರ ಕಲ್ಪಿಸಿ. ಪರಿಹಾರಕ್ಕಾಗಿ ಅಲೆದಾಡುವಂತೆ ಮಾಡಬೇಡಿ ಎಂದು ಅಧಿಕಾರಿಗಳಿಗೆ ಉಪ ಲೋಕಾಯುಕ್ತ ಪಾಟೀಲ ಸೂಚಿಸಿದರು.

– ವಿಜಯ ಕರ್ನಾಟಕ –

ದಿನಾಂಕ
08/08/2021

www.vijaykarnataka.com
www.apps.vijaykarnataka.com
ವಿಜಯ ಕರ್ನಾಟಕ VK

### ಜಿಲ್ಲಾಡಳಿತಕ್ಕೆ ಉಪಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ ತಾಕೀತು

# ಲಸಿಕೆಗಾಗಿ ಯಾರನ್ನೂ ಕಾಯಿಸಬೇಡಿ

**ವಿಕ ಸುದ್ದಿಲೋಕ** ಬೆಳಗಾವಿ

ಲಭ್ಯವಿರುವ ಕೋವಿಡ್ ಲಸಿಕೆ ಎಲ್ಲ ವರ್ಗದ ಜನರಿಗೂ ಸಮಾನ ಹಂಚಿಕೆಯಾಗಬೇಕು. ಕೂಲಿ ಕಾರ್ಮಿಕರು ಐದು ನಿಮಿಷದ ಲಸಿಕೆಗಾಗಿ ಇಡೀ ದಿನದ ಕೆಲಸ ಬಿಟ್ಟು ಕಾಯುವಂತಾಗಬಾರದು ಎಂದು ಉಪ ಲೋಕಾಯುಕ್ತ ನ್ಯಾ.ಬಿ.ಎಸ್. ಪಾಟೀಲ ಜಿಲ್ಲಾಡಳಿತಕ್ಕೆ ತಾಕೀತು ಮಾಡಿದ್ದಾರೆ.



ಕೋವಿಡ್ ನಿರ್ವಹಣೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡುತ್ತಿರುವ ಉಪಲೋಕಾಯುಕ್ತ ನ್ಯಾ. ಬಿ.ಎಸ್.ಪಾಟೀಲ.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ನಡೆದ ಕೋವಿಡ್ ನಿರ್ವಹಣೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ''ಲಸಿಕೆ ವಿಷಯದಲ್ಲಿ ವಿಳಂಬ, ತಾರತಮ್ಯ ಮತ್ತಿತರ ವಿಚಾರವಾಗಿ ಲೋಕಾಯುಕ್ತ ಕಚೇರಿಗೆ ದೂರುಗಳು ಬರುತ್ತಿವೆ. ಯಾವುದೇ ಕಾರಣಕ್ಕೂ ಬಡವರು, ಕೂಲಿ ಕಾರ್ಮಿಕರು ಲಸಿಕೆಯಿಂದ ವಂಚಿತರಾಗಬಾರದು'', ಎಂದರು.

> ಬೆಳಗಾವಿ ವಿವಿಧ ರಾಜ್ಯಗಳ ಗಡಿ ಮತ್ತು ನೆರೆ ಪೀಡಿತ ಪ್ರದೇಶವಾಗಿರುವುದರಿಂದ ಇಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ಪ್ರತಿ ಕ್ಷಣವೂ ಸವಾಲು ಎದುರಿಸಲು ಸನ್ನದ್ಧವಾಗಿರಬೇಕು. ಇಲ್ಲಿ ಕೆಲಸ ಮಾಡುವ ಅಧಿಕಾರಿಗಳು ನಿವೃತ್ತಿ ನಂತರವೂ ನೆನಪಿನಲ್ಲಿ ಇಟ್ಟುಕೊಳ್ಳುವ ಮಾದರಿಯಲ್ಲಿ ಸೇವೆ ಸಲ್ಲಿಸಬೇಕು.
>
> **- ನ್ಯಾ. ಬಿ.ಎಸ್. ಪಾಟೀಲ,** ಉಪ ಲೋಕಾಯುಕ್ತ

**ಶೌಚದ ವರದಿ ಬೇಕು:** ಹಳ್ಳಿಗಳಲ್ಲಿ ಇಂದಿಗೂ ಬಯಲು ಶೌಚ ಜೀವಂತವಾಗಿದೆ. ಎಲ್ಲಿ ನೈರ್ಮಲ್ಯ ಇರುವುದಿಲ್ಲವೋ ಅಲ್ಲಿ ಅಪೌಷ್ಟಿಕತೆ ಮತ್ತು ಅನಾರೋಗ್ಯ ಕಾಡುತ್ತದೆ. ಹಾಗಾಗಿ, ಸರಕಾರದ ಯೋಜನೆ ಪಡೆದು ಶೌಚಾಲಯ ನಿರ್ಮಿಸಿಕೊಳ್ಳದವರ ಸಮೀಕ್ಷೆ ಮಾಡಿ ವರದಿ ನೀಡಬೇಕು. ಅನುದಾನ ದುರ್ಬಳಕೆ ಮಾಡಿಕೊಂಡಿರುವ ಫಲಾನುಭವಿಗಳ ಮೇಲೆ ಕ್ರಮ ಕೈಗೊಂಡರೆ ವ್ಯವಸ್ಥೆ ಸುಧಾರಿಸುತ್ತದೆ. ಶೌಚಾಲಯ ಕಲ್ಪಿಸಿ ವಿದ್ಯುತ್, ನೀರು ಮೊದಲಾದ ಪೂರಕ ಸೌಲಭ್ಯ ನೀಡದ ಅಧಿಕಾರಿಗಳ ಮೇಲೂ ಶಿಸ್ತು ಕ್ರಮ ಜರುಗಬೇಕು. ಈ ಕುರಿತು ಸಮಗ್ರ ತನಿಖೆ ನಡೆಸಿ ಲೋಕಾಯುಕ್ತಕ್ಕೆ ವರದಿ ಸಲ್ಲಿಸಬೇಕು'', ಎಂದು ಸೂಚನೆ ನೀಡಿದರು.

**ಭ್ರಷ್ಟಾಚಾರ ತಡೆಯಿರಿ:** ಕೆರೆಗಳ ಒತ್ತುವರಿ ತೆರವಿಗೆ ಕೈಗೊಂಡ ಕ್ರಮಗಳ ಕುರಿತು ಜಿಲ್ಲಾಡಳಿತ ಮಾಹಿತಿ ನೀಡಬೇಕು. ವಿವಿಧ ಇಲಾಖೆಗಳಲ್ಲಿನ ಭ್ರಷ್ಟಾಚಾರಕ್ಕೂ ಕಡಿವಾಣ ಹಾಕಬೇಕು. ಯಾವುದೇ ಕಾರಣಕ್ಕೂ ಜನ ಸಾಮಾನ್ಯರು ಕಚೇರಿಗಳಿಗೆ ಅಲೆದಾಡುವಂತಾಗಬಾರದು'', ಎಂದು ನ್ಯಾ. ಬಿ. ಎಸ್.ಪಾಟೀಲ ತಾಕೀತು ಮಾಡಿದರು.

ನೆರೆ ಮತ್ತು ಕೋವಿಡ್ ನಿಯಂತ್ರಣಕ್ಕಾಗಿ ಜಿಲ್ಲೆಯಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ಜಿಲ್ಲಾಧಿಕಾರಿ ಎಂ.ಜಿ.ಹಿರೇಮಠ ಸಭೆಗೆ ಮಾಹಿತಿ ನೀಡಿದರು. ಜಿಪಂ ಸಿಇಒ ದರ್ಶನ ಎಚ್.ವಿ, ಎಸ್‌ಪಿ ಲಕ್ಷ್ಮಣ ನಿಂಬರಗಿ, ನಗರ ಪೊಲೀಸ್ ಆಯುಕ್ತ ಡಾ.ಕೆ. ತ್ಯಾಗರಾಜ, ಲೋಕಾಯುಕ್ತ ಎಸ್‌ಪಿ ಯಶೋಧಾ ವಂಟಗೋಡಿ ಸೇರಿ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

— ಶ್ರೀ ಪ್ರಜಾವಾಣಿ ಶ್ರೀ —

ದಿನಾಂಕ
08/08/2021

# ಕೋವಿಡ್‌ನಿಂದ ಮಕ್ಕಳನ್ನು ಕಾಪಾಡಿ

## ಬೆಳಗಾವಿ: ಅಧಿಕಾರಿಗಳಿಗೆ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಸೂಚನೆ

ಪ್ರಜಾವಾಣಿ ವಾರ್ತೆ



ಬೆಳಗಾವಿಯಲ್ಲಿ ಶನಿವಾರ ನಡೆದ ಸಭೆಯಲ್ಲಿ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಮಾತನಾಡಿದರು

ಬೆಳಗಾವಿ: 'ಸಂಭಾವ್ಯ ಕೋವಿಡ್ 3ನೇ ಅಲೆಯು ಮಕ್ಕಳ ಮೇಲೆ ಪರಿಣಾಮ ಬೀರಲಿದೆ ಎಂಬ ಮಾಹಿತಿ ಇದೆ. ಅವರನ್ನು ಕಾಪಾಡಿಕೊಳ್ಳುವುದು ನಮ್ಮ ಕರ್ತವ್ಯ. ಜತೆಗೆ ಪ್ರವಾಹ ಪರಿಸ್ಥಿತಿಯನ್ನೂ ಎದುರಿಸಲು ಅಧಿಕಾರಿಗಳು ಹೆಚ್ಚಿನ ಶ್ರಮವಹಿಸಬೇಕು' ಎಂದು ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಸೂಚಿಸಿದರು.

ಇಲ್ಲಿನ ಜಿಲ್ಲಾ ಪಂಚಾಯ್ತಿ ಕಚೇರಿಯಲ್ಲಿ ಶನಿವಾರ ನಡೆದ ಕೋವಿಡ್ ನಿರ್ವಹಣೆ ಹಾಗೂ ಅತಿವೃಷ್ಟಿ, ಪ್ರವಾಹ ಪರಿಸ್ಥಿತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

'ಜಿಲ್ಲೆಯ ಜನ ಕೋವಿಡ್ ಜತೆ ಪ್ರವಾಹವನ್ನೂ ಎದುರಿಸುವ ದುಸ್ಥಿತಿ ಬಂದಿದೆ. ಗಡಿ ಆಗಿರುವುದರಿಂದ ಮುನ್ನೆಚ್ಚರಿಕೆ ಅಗತ್ಯ' ಎಂದು ತಿಳಿಸಿದರು.

'ಗಡಿ ಜಿಲ್ಲೆಯಲ್ಲಿ ಕೊರೊನಾ ಹರಡುತ್ತಿದ್ದು ಬೇರೆ ರಾಜ್ಯದಿಂದ ಸೋಂಕು ಹರಡದಂತೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು' ಎಂದು ಸೂಚಿಸಿದರು.

'ಗಡಿ ಜಿಲ್ಲೆ ಆಗಿರುವುದರಿಂದ ಹೆಚ್ಚಿನ ಕೋವಿಡ್ ಲಸಿಕೆ ಪೂರೈಕೆಗೆ ಸರ್ಕಾರಕ್ಕೆ ಮನವಿ ಮಾಡಲಾಗುವುದು' ಎಂದು ತಿಳಿಸಿದರು.

**ಕಠಿಣ ಕ್ರಮದ ಎಚ್ಚರಿಕೆ:** 'ಭ್ರಷ್ಟಾಚಾರದ ಕುರಿತು ಲೋಕಾಯುಕ್ತದ ಗಮನಕ್ಕೆ ಬಂದಲ್ಲಿ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು' ಎಂದು ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಎಂ.ಜಿ. ಹಿರೇಮಠ, 'ಜಿಲ್ಲೆಯಲ್ಲಿ 7 ನದಿಗಳಿದ್ದು, 14 ತಾಲ್ಲೂಕುಗಳ 201 ಗ್ರಾಮಗಳು ಪ್ರವಾಹಕ್ಕೆ ತುತ್ತಾಗಿವೆ. ಪ್ರವಾಹದಲ್ಲಿ ಸಿಲುಕಿದ್ದ 1,50,015 ಜನರನ್ನು ಹಾಗೂ 67,329 ಜಾನುವಾರುಗಳನ್ನು ರಕ್ಷಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು ಮೂವರು ಮತ್ತು 59 ಜಾನುವಾರು ಮರಣ ಹೊಂದಿವೆ. 1,19,422 ಹೆಕ್ಟೇರ್ ಕೃಷಿ ಹಾಗೂ ತೋಟಗಾರಿಕಾ ಪ್ರದೇಶದಲ್ಲಿ ಪ್ರವಾಹದಿಂದ ಬೆಳೆ ಹಾನಿ ಆಗಿದೆ. 324 ಮನೆಗಳು ಪೂರ್ಣ ಪ್ರಮಾಣದಲ್ಲಿ ಹಾಗೂ 5,003 ಭಾಗಶಃ ಹಾನಿಗೊಳಗಾಗಿವೆ' ಎಂದು ಮಾಹಿತಿ ನೀಡಿದರು.

'ಕಾಳಜಿ ಕೇಂದ್ರಗಳಲ್ಲಿ ಆರೋಗ್ಯ ಸಿಬ್ಬಂದಿ ನಿಯೋಜಿಸಿ, ಉತ್ತಮ ಗುಣ ಮಟ್ಟದ ಆಹಾರದ ವ್ಯವಸ್ಥೆ ಮಾಡಲಾಗಿದೆ. ನೆರೆ ಸಂತ್ರಸ್ತರಿಗೆ ಆರ್.ಟಿ.ಜಿ.ಎಸ್. ಮೂಲಕ ಅವರ ಬ್ಯಾಂಕ್ ಖಾತೆಗಳಿಗೆ ಪರಿಹಾರ ಹಣ ಜಮೆ ಮಾಡಲಾಗುವುದು' ಎಂದು ತಿಳಿಸಿದರು.

'ಹಿಪ್ಪರಗಿಬ್ಯಾರೇಜ್‌ನಿಂದಬಿಡುಗಡೆಯಾಗುವ ನೀರಿನಿಂದ ಅಥಣಿ ತಾಲ್ಲೂಕಿನ 21 ಗ್ರಾಮಗಳು ಬಾಧಿತವಾಗುತ್ತಿದ್ದು, ಶಾಶ್ವತ ಪರಿಹಾರಕ್ಕಾಗಿ 9 ಹಳ್ಳಿಯ ಜನರಿಗೆ ಅನುಕೂಲವಾಗುವಷ್ಟು ಜಮೀನನ್ನು ಖರೀದಿಸಲಾಗಿದೆ. ಮುಂದಿನ ದಿನಗಳಲ್ಲಿ ಹಕ್ಕುಪತ್ರ ವಿತರಿಸಲಾಗುವುದು' ಎಂದರು.

ಜಿ.ಪಂ. ಸಿಇಒ ಎಚ್.ವಿ. ದರ್ಶನ್, ಪೊಲೀಸ್ ಆಯುಕ್ತ ಕೆ. ತ್ಯಾಗರಾಜನ್, ಎಸ್ಪಿ ಲಕ್ಷ್ಮಣ ನಿಂಬರಗಿ, ಲೋಕಾಯುಕ್ತ ಎಸ್ಪಿ ಯಶೋಧಾ ವಂಟಗೋಡಿ ಇದ್ದರು.

### 'ನೆರೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಿ'

'ಪ್ರವಾಹದಲ್ಲಿ ನೊಂದು ಮನೆ, ಜಾನುವಾರು ಹಾಗೂ ಬೆಳೆ ಕಳೆದುಕೊಂಡ ಜನರಿಗೆ ಅನುದಾನದಲ್ಲಿ ವಿಳಂಬ ಮಾಡದೆ, ಸಕಾಲದಲ್ಲಿ ಲೋಪವಿಲ್ಲದೆ ತಲುಪಿಸುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು. ನೆರೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ತಜ್ಞರಿಂದ ಸಲಹೆ ಪಡೆಯಬೇಕು' ಎಂದು ಪಾಟೀಲ ಹೇಳಿದರು.

'ಬಯಲು ಶೌಚ ಮುಕ್ತ ದೇಶ ಎಂದು ಹೇಳುತ್ತೇವೆ. ಆದರೆ, ಹಳ್ಳಿಗಳಲ್ಲಿ ಸರ್ಕಾರದ ಅನುದಾನದಿಂದ ಶೌಚಾಲಯಗಳನ್ನು ನಿರ್ಮಿಸಿ, ಅವುಗಳನ್ನು ಬಳಸದೆ ಇರುವುದನ್ನು ಗಮನಿಸಿದ್ದೇವೆ. ಆದ್ದರಿಂದ ಎಲ್ಲಾ ಗ್ರಾಮ ಪಂಚಾಯ್ತಿ ಅಧಿಕಾರಿಗಳು ಮಾಹಿತಿ ಕಲೆ ಹಾಕಬೇಕು ಹಾಗೂ ಸೌಲಭ್ಯ ಪಡೆದುಕೊಂಡು ಅದನ್ನು ಬಳಸದೆ ಇರುವವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಕೆರೆಗಳ ಮಾಹಿತಿ ಸಲ್ಲಿಸಬೇಕು' ಎಂದು ನಿರ್ದೇಶನ ನೀಡಿದರು.

'ಹಿಂದಿನ ತಪ್ಪುಗಳನ್ನು ಪಾಠವೆಂದು ಪರಿಗಣಿಸಿ ಮುಂಜಾಗ್ರತೆ ಹಾಗೂ ಪೂರ್ವ ಸಿದ್ಧತೆಯೊಂದಿಗೆ ಕೆಲಸ ಮಾಡಬೇಕು. ಇದರಿಂದ ಕೆಲಸದಲ್ಲಿ ಪ್ರಗತಿ ಸಾಧಿಸಲು ಸಾಧ್ಯ' ಎಂದು ತಿಳಿಸಿದರು.

— ಸಂಯುಕ್ತ ಕರ್ನಾಟಕ —

ದಿನಾಂಕ
08/08/2021

# ಕೋವಿಡ್‌ನಿಂದ ಮಕ್ಕಳ ಕಾಪಾಡಿ



ಬೆಳಗಾವಿ : ಸಂಭಾವ್ಯ ಕೋವಿಡ್-19ರ ಮೂರನೇ ಅಲೆಯು ಮಕ್ಕಳ ಮೇಲೆ ಪರಿಣಾಮ ಬೀರಲಿದೆ ಎಂಬ ಮಾಹಿತಿ ಇದೆ. ಮಕ್ಕಳೇ ನಾಳಿನ ಭವಿಷ್ಯ ಹಾಗೂ ಅವರನ್ನು ಕಾಪಾಡಿಕೊಳ್ಳುವುದು ನಮ್ಮ ಕರ್ತವ್ಯವಾಗಿದೆ. ಜೊತೆಗೆ ಪ್ರವಾಹ ಪರಿಸ್ಥಿತಿಯನ್ನೂ ಎದುರಿಸಲು ಎಲ್ಲ ಅಧಿಕಾರಿಗಳು ಹೆಚ್ಚಿನ ಶ್ರಮ ವಹಿಸಬೇಕು ಎಂದು ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ್ ತಿಳಿಸಿದರು.

ಜಿಲ್ಲಾ ಪಂಚಾಯತ ಕಾರ್ಯಲಯದ ಸಭಾಂಗಣದಲ್ಲಿ ಶನಿವಾರ ನಡೆದ ಕೋವಿಡ್-19ರ ನಿರ್ವಹಣೆ ಹಾಗೂ ಅತಿವೃಷ್ಟಿ / ಪ್ರವಾಹ ಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳಗಾವಿ ಜಿಲ್ಲೆಯು ಹಲವು ವೈಶಿಷ್ಟ್ಯ ಹೊಂದಿದೆ. ಅದು ವರ ಹಾಗೂ ಶಾಪವೂ ಆಗಿದೆ. ಜಿಲ್ಲೆಯ ಜನರು ಕೋವಿಡ್ ಜೊತೆಗೆ ಪ್ರವಾಹವನ್ನು ಕೂಡ ಎದುರಿಸುವ ದುಸ್ಥಿತಿ ಎದುರಾಗಿದೆ. ಗಡಿ ಜಿಲ್ಲೆಯಾಗಿರುವುದರಿಂದ ಮುನ್ನೆಚ್ಚರಿಕೆ ಅಗತ್ಯವಾಗಿದೆ ಎಂದರು.

ಕೋವಿಡ್ ಹಾಗೂ ಪ್ರವಾಹ ಇವು ಒಂದೆರಡು ದಿನಗಳಿಗೆ ಸೀಮಿತವಾದ ಸಮಸ್ಯೆಗಳಲ್ಲ. ಇವುಗಳ ವಿರುದ್ಧ ಹೋರಾಡುವ ಮನಸ್ಥಿತಿಯನ್ನು ನಾವು ಹೊಂದಬೇಕು. ಸಮಸ್ಯೆ ಇಲ್ಲದಾಗಲೂ ಜಾಗೃತೆ ವಹಿಸಬೇಕು. ಕೋವಿಡ್‌ನಿಂದ ಹಲವಾರು ಜನರನ್ನು ನಾವು ಕಳೆದುಕೊಂಡಿದ್ದೇವೆ. ಇದೊಂದು ಪಾಠವಾಗಬೇಕು ಎಂದು ಅವರು ತಿಳಿಸಿದರು.

ಕೋವಿಡ್ ಹಿನ್ನಲೆ ಸರಕಾರವು ಆರ್ಥಿಕ ಸಂಕಷ್ಟ ಅನುಭವಿಸುತ್ತಿದೆ. ಆದರೂ ಸರಕಾರಿ ಕೆಲಸ ಮಾಡುವ ಎಲ್ಲಾ ಅಧಿಕಾರಿಗಳಲ್ಲಿ ವೇತನದಲ್ಲಿ ಯಾವುದೇ ರೀತಿಯ ತಡೆ ಹಿಡಿದಿಲ್ಲ ಹಾಗೂ ಯಾವ ಸೌಲಭ್ಯಗಳಲ್ಲಿ ಕೊರತೆ ಮಾಡಿಲ್ಲ. ಆದ್ದರಿಂದ ನಮ್ಮ ಅಧಿಕಾರದಲ್ಲಿ ಯಾವುದೇ ರೀತಿಯ ಕೊರತೆ ಆಗಬಾರದು ಅದು ನಮ್ಮ ಮೂಲಭೂತ ಕರ್ತವ್ಯವಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಎಂ.ಜಿ. ಹಿರೇಮಠ ಮಾತನಾಡಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ದರ್ಶನ್ ಎಚ್.ವಿ., ಪೊಲೀಸ್ ಆಯುಕ್ತ ಡಾ.ಕೆ.ತ್ಯಾಗರಾಜನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಲೋಕಾಯುಕ್ತ ಎಸ್.ಪಿ.ಯಶೋಧಾ ವಂಟಗುಡಿ ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

— ! ಉದಯವಾಣಿ ! —

ದಿನಾಂಕ 08/08/2021

# ಕೋವಿಡ್-ನೆರೆ ಎದುರಿಸಲು ಸಜ್ಜಾಗಿ: ನ್ಯಾ। ಪಾಟೀಲ

## ■ ಪ್ರವಾಹ-ಕೋವಿಡ್ ನಿರ್ವಹಣೆ ಪರಿಶೀಲನಾ ಸಭೆ ■ ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಿ

**ಬೆಳಗಾವಿ:** ಸಂಭಾವ್ಯ ಕೋವಿಡ್-19ರ ಮೂರನೇ ಅಲೆ ಮಕ್ಕಳ ಮೇಲೆ ಪರಿಣಾಮ ಬೀರಲಿದೆ ಎಂಬ ಮಾಹಿತಿ ಇದೆ. ಮಕ್ಕಳೇ ನಾಳಿನ ಭವಿಷ್ಯ ಹಾಗೂ ಅವರನ್ನು ಕಾಪಾಡಿಕೊಳ್ಳುವುದು ಎಲ್ಲರ ಕರ್ತವ್ಯ. ಜತೆಗೆ ಪ್ರವಾಹ ಪರಿಸ್ಥಿತಿಯನ್ನೂ ಎದುರಿಸಲು ಎಲ್ಲ ಅಧಿಕಾರಿಗಳು ಹೆಚ್ಚಿನ ಶ್ರಮ ವಹಿಸಬೇಕು ಎಂದು ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ತಿಳಿಸಿದರು.

ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಶನಿವಾರ ನಡೆದ ಕೋವಿಡ್-19ರ ನಿರ್ವಹಣೆ ಹಾಗೂ ಪ್ರವಾಹ ಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗಡಿ ಜಿಲ್ಲೆಯಾಗಿರುವುದರಿಂದ ಮುನ್ನೆಚ್ಚರಿಕೆ ಅಗತ್ಯವಾಗಿದೆ. ಕೋವಿಡ್ ಹಾಗೂ ಪ್ರವಾಹ ಒಂದೆರಡು ದಿನಗಳಿಗೆ ಸೀಮಿತವಾದ ಸಮಸ್ಯೆಗಳಲ್ಲ, ಇವುಗಳ ವಿರುದ್ಧ ಹೋರಾಡುವ ಮನಸ್ಥಿತಿ ಹೊಂದಬೇಕು. ಸಮಸ್ಯೆ ಇಲ್ಲದಾಗಲೂ ಜಾಗೃತಿ ವಹಿಸಬೇಕು. ಕೋವಿಡ್‌ನಿಂದ ಹಲವಾರು ಜನರನ್ನು ನಾವು ಕಳೆದುಕೊಂಡಿದ್ದೇವೆ. ಇದೊಂದು ಪಾಠವಾಗಬೇಕು ಎಂದು ತಿಳಿಸಿದರು.

**ಕೋವಿಡ್-19 ಜಾಗೃತಿ ಮುಖ್ಯ:** ಕೋವಿಡ್ ಕುರಿತು ಜಾಗೃತಿ ಮೂಡಿಸುವುದು ಅತಿ ಮುಖ್ಯವಾಗಿದೆ. ಪ್ರಮುಖವಾಗಿ ಹಳ್ಳಿಗಳಲ್ಲಿ ಕೋವಿಡ್‌ನ ಮಾಹಿತಿ ಕೊರತೆ ಇದೆ. ಪಿಡಿಒ, ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಒಳಗೊಂಡಂತೆ ಟಾಸ್ಕ್‌ಫೋರ್ಸ್ ರಚಿಸಿ ಜನರಲ್ಲಿ ಜಾಗೃತಿ ಮೂಡಿಸಬೇಕು. ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ವತಿಯಿಂದ ಮಕ್ಕಳಿಗೆ ಸ್ವಚ್ಛತೆ ಹಾಗೂ ಆರೋಗ್ಯದ ಕುರಿತು ಜಾಗೃತಿ ಮೂಡಿಸಲು ತಾಲೂಕು ಅಥವಾ ಪಂಚಾಯತ ಮಟ್ಟದಲ್ಲಿ ಕಾರ್ಯಾಗಾರ ಹಮ್ಮಿಕೊಳ್ಳಬೇಕು. ಗಡಿ ಜಿಲ್ಲೆಯಲ್ಲಿ ಕೊರೊನಾ ಹರಡುತ್ತಿದ್ದು, ಬೇರೆ ರಾಜ್ಯದಿಂದ ಸೋಂಕು ಹರಡದಂತೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು.ಬೆಳಗಾವಿ ಗಡಿ ಜಿಲ್ಲೆ ಆಗಿರುವುದರಿಂದ ಹೆಚ್ಚಿನ ಲಸಿಕೆ ಪೂರೈಕೆಗೆ ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದು ನ್ಯಾ। ಬಿ.ಎಸ್. ಪಾಟೀಲ ತಿಳಿಸಿದರು.



ಬೆಳಗಾವಿ: ಜಿಪಂ ಸಭಾಂಗಣದಲ್ಲಿ ನಡೆದ ಕೋವಿಡ್-19 ನಿರ್ವಹಣೆ ಹಾಗೂ ಪ್ರವಾಹ ಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯಲ್ಲಿ ನ್ಯಾ. ಉಪ ಲೋಕಾಯುಕ್ತ ಬಿ.ಎಸ್. ಪಾಟೀಲ ಮಾತನಾಡಿದರು.

**ನೆರೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಿ:** ಪ್ರವಾಹದಲ್ಲಿ ಮನೆ, ಜಾನುವಾರು, ಬೆಳೆ ಕಳೆದುಕೊಂಡ ಜನರಿಗೆ ಅನುದಾನದಲ್ಲಿ ವಿಳಂಬ ಮಾಡದೆ, ಸಕಾಲದಲ್ಲಿ ಲೋಪವಿಲ್ಲದೆ ತಲುಪಿಸುವ ಕೆಲಸ ಮಾಡಬೇಕು. ನೆರೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ತಜ್ಞರನ್ನು ಹುಡುಕಿ ಅದರ ಕುರಿತು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

**ಶೌಚಾಲಯಗಳ ಸದುಪಯೋಗವಾಗಲಿ:** ಬಯಲು ಶೌಚ ಮುಕ್ತ ದೇಶ ಎಂದರೆ ಸಾಲದು. ಹಳ್ಳಿಗಳಲ್ಲಿ ಸರ್ಕಾರ ಶೌಚಾಲಯಗಳನ್ನು ನಿರ್ಮಿಸಿದರೂ ಅವುಗಳನ್ನು ಬಳಸುತ್ತಿಲ್ಲ, ಈ ಬಗ್ಗೆ ಗ್ರಾಪಂ ಅಧಿಕಾರಿಗಳು ಮಾಹಿತಿ ಕಲೆ ಹಾಕಬೇಕು. ಸೌಲಭ್ಯ ಪಡೆದುಕೊಂಡು ಅದನ್ನು ಬಳಸದೇ ಇರುವ ಜನರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ ಕೆರೆಗಳ ಸಂಖ್ಯೆ, ಅಭಿವೃದ್ಧಿಪಡಿಸಲಾದ ಕೆರೆಗಳ ಮಾಹಿತಿ ಹಾಗೂ ಜೀರ್ಣೋದ್ಧಾರ ಆಗಬೇಕಿರುವ ಕೆರೆಗಳ ಅಂಕಿ ಅಂಶಗಳ ಪಟ್ಟಿ ಮಾಡಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ ಉಪ ಲೋಕಾಯುಕ್ತರು, ಕೋವಿಡ್ ಹಿನ್ನೆಲೆಯಲ್ಲಿ ಸರ್ಕಾರ ಆರ್ಥಿಕ ಸಂಕಷ್ಟ ಅನುಭವಿಸುತ್ತಿದೆ. ಆದರೂ ಸರ್ಕಾರಿ ಅಧಿಕಾರಿಗಳ ವೇತನದಲ್ಲಿ ತಡೆ ಹಿಡಿದಿಲ್ಲ, ಸೌಲಭ್ಯಗಳಲ್ಲಿ ಕೊರತೆ ಮಾಡಿಲ್ಲ, ಹೀಗಾಗಿ ಅಧಿಕಾರದಲ್ಲಿ ಯಾವುದೇ ರೀತಿಯ ಕೊರತೆ ಆಗಬಾರದು. ಜನರ ಬಗ್ಗೆ ಕಾಳಜಿ, ಗೌರವ ಇರಬೇಕು. ಹಳ್ಳಿ ಜನರ ಪ್ರೀತಿ ವಿಶ್ವಾಸ ಬೆಳೆಸಿಕೊಳ್ಳುವ ಕೆಲಸ ಮಾಡಬೇಕು ಎಂದರು.

### ಭ್ರಷ್ಟಾಚಾರ ತಡೆಗಟ್ಟಲು ಲೋಕಾಯುಕ್ತ ಸದಾ ಸಿದ್ಧ

ಲೋಕಾಯುಕ್ತ ಎಂಬ ಸಂಸ್ಥೆ ದಕ್ಷ ಆಡಳಿತ ನಡೆಸಲು ನಿರ್ಮಾಣಗೊಂಡಿದ್ದು, ಭ್ರಷ್ಟಾಚಾರ ತಡೆಗಟ್ಟುವುದು ಹಾಗೂ ಸ್ವಚ್ಛ ಆಡಳಿತ ಜಾರಿಗೆ ತರುವುದು ಈ ಸಂಸ್ಥೆಯ ಉದ್ದೇಶವಾಗಿದೆ. ಭ್ರಷ್ಟಾಚಾರ ಕುರಿತು ಲೋಕಾಯುಕ್ತದ ಗಮನಕ್ಕೆ ಬಂದಲ್ಲಿ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಉಪ ಲೋಕಾಯುಕ್ತ ಪಾಟೀಲ ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಎಂ.ಜಿ. ಹಿರೇಮಠ ಕೋವಿಡ್-19 ನಿರ್ವಹಣೆ ಹಾಗೂ ಪ್ರವಾಹ ಕುರಿತು ಮಾಹಿತಿ ನೀಡಿದರು. ಜಿಲ್ಲೆಯಲ್ಲಿ 7 ನದಿಗಳಿದ್ದು, 14 ತಾಲೂಕುಗಳ 201 ಗ್ರಾಮಗಳು ಪ್ರವಾಹಕ್ಕೆ ತುತ್ತಾಗಿವೆ. ಪ್ರವಾಹದಲ್ಲಿ ಸಿಲುಕಿದ್ದ 1,50,015 ಜನರನ್ನು ಹಾಗೂ 67,329 ಜಾನುವಾರುಗಳನ್ನು ರಕ್ಷಿಸಲಾಗಿದೆ. ಜಿಲ್ಲೆಯಲ್ಲಿ ಮೂವರು ವ್ಯಕ್ತಿ, 59 ಜಾನುವಾರು ಮರಣ ಹೊಂದಿವೆ. 1,19,422 ಹೆಕ್ಟೇರ್ ಕೃಷಿ ಹಾಗೂ ತೋಟಗಾರಿಕಾ ಪ್ರದೇಶದಲ್ಲಿ ಪ್ರವಾಹದಿಂದ ಬೆಳೆ ಹಾನಿ ಆಗಿದೆ. 324 ಮನೆಗಳು ಪೂರ್ಣ ಪ್ರಮಾಣದಲ್ಲಿ ಹಾಗೂ 5,003 ಭಾಗಶ ಹಾನಿಗೊಳಗಾಗಿವೆ ಎಂದು ಮಾಹಿತಿ ನೀಡಿದರು.

ಕಾಳಜಿ ಕೇಂದ್ರಗಳಲ್ಲಿ ಆರೋಗ್ಯ ಸಿಬ್ಬಂದಿ ನಿಯೋಜಿಸಿ, ಉತ್ತಮ ಗುಣಮಟ್ಟದ ಆಹಾರದ ವ್ಯವಸ್ಥೆ ಮಾಡಲಾಗಿದೆ. ನೆರೆ ಸಂತ್ರಸ್ತರಿಗೆ ನೇರವಾಗಿ ಆರ್‌ಟಿಜಿಎಸ್ ಮೂಲಕ ಅವರ ಬ್ಯಾಂಕ್ ಖಾತೆಗಳಿಗೆ ಪರಿಹಾರ ಹಣ ಜಮೆ ಮಾಡಲಾಗುವುದು ಎಂದು ವಿವರಿಸಿದರು.

ತಜ್ಞರ ಸಮೀಕ್ಷೆಯ ಪ್ರಕಾರ ಸಂಭಾವ್ಯ ಮೂರನೇ ಅಲೆಯು ಮಕ್ಕಳ ಮೇಲೆ ಪರಿಣಾಮ ಬೀರಲಿರುವುದರಿಂದ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ನೆರೆ ರಾಜ್ಯದಿಂದ ಜಿಲ್ಲೆಯನ್ನು ಪ್ರವೇಶಿಸುವವರಿಗೆ ಆರ್.ಟಿ.ಪಿ.ಸಿ.ಆರ್. ಪರೀಕ್ಷೆ ಕಡ್ಡಾಯವಾಗಿದ್ದು, ವರದಿ ಇಲ್ಲದಿದ್ದಲ್ಲಿ ಸ್ಥಳದಲ್ಲಿಯೇ ಪರೀಕ್ಷೆ ನಡೆಸಲಾಗುತ್ತಿದೆ. ಕೋವಿಡ್-19 ಮೂರನೇಯ ಅಲೆ ಹಿನ್ನೆಲೆಯಲ್ಲಿ ಮಕ್ಕಳೊಂದಿಗೆ ತಾಯಿಯೂ ಆಸ್ಪತ್ರೆಗಳಲ್ಲಿ ಇರಬೇಕಾದ ಅನಿವಾರ್ಯತೆ ಇರುವುದರಿಂದ ಆದ್ಯತೆ ಮೇರೆಗೆ ತಾಯಂದಿರಿಗೂ ಲಸಿಕೆ ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಹಿರೇಮಠ ತಿಳಿಸಿದರು.

ಜಿಪಂ ದರ್ಶನ್ ಎಚ್.ವಿ., ಪೊಲೀಸ್ ಕಮೀಷನರ್ ಡಾ। ಕೆ. ತ್ಯಾಗರಾಜನ್, ಎಸ್‌ಪಿ ಲಕ್ಷ್ಮಣ ನಿಂಬರಗಿ, ಲೋಕಾಯುಕ್ತ ಎಸ್‌ಪಿ ಯಶೋಧಾ ವಂಟಗುಡಿ ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

— [illegible] —

ದಿನಾಂಕ
08/08/2021

# ಕೊರೊನಾ ಮೂರನೇ ಅಲೆ ತಡೆಯಲು ಗ್ರಾಮ ಮಟ್ಟದಲ್ಲಿಯೇ ಕಾರ್ಯಾಗಾರ ಆಯೋಜಿಸಿ:ನ್ಯಾ. ಪಾಟೀಲ



ಬೆಳಗಾವಿ: ಕೋವಿಡ್-19 ಸಂಭವನೀಯ ಮೂರನೇ ಅಲೆ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಗ್ರಾಪಂ ಮಟ್ಟದಲ್ಲಿಯೇ ತಜ್ಞ ವೈದ್ಯರಿಂದ ಕಾರ್ಯಾಗಾರ ಆಯೋಜಿಸಬೇಕು. ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಸೂಚಿಸಿದರು.

ನಗರದ ಜಿಪಂ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಕೋವಿಡ್ ಹಾಗೂ ಅತಿವೃಷ್ಟಿ ನಿರ್ವಹಣೆ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೋವಿಡ್-1 ಮತ್ತು 2ನೇ ಅಲೆಯಲ್ಲಿ ಎದುರಾದ ಸಮಸ್ಯೆಗಳು ಮರಳದಂತೆ ಎಚ್ಚರ ವಹಿಸಿ. ಮಗು ಮತ್ತು ತಾಯಿಯ ಆರೋಗ್ಯ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಅಲ್ಲದೆ, ಸೋಂಕು ಕುರಿತು ಹಳ್ಳಿಗಳಲ್ಲಿ ನಿರಂತರ ಜಾಗೃತಿ ಮೂಡಿಸಬೇಕು ಎಂದರು.

ನೆರೆಯ ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳ ಗಡಿ ಹಂಚಿಕೊಂಡಿರುವ ಬೆಳಗಾವಿ ಜಿಲ್ಲೆಯಲ್ಲಿ ಕರೊನಾ ಸೋಂಕು ತಡೆಗಟ್ಟಲು ಅಧಿಕಾರಿಗಳು ದಿನದ 24 ಗಟೆಗಳ ಕಾಲ ಸೇವೆ ಸಲ್ಲಿಸಬೇಕು. ಗಡಿಯಲ್ಲಿರುವ ಚೆಕ್ ಪೋಸ್ಟ್‌ಗಳಲ್ಲಿ ಕಟ್ಟುನಿಟ್ಟಿನ ಕ್ರಮ ವಹಿಸಬೇಕು. ಯಾವುದೇ ಕಾರಣ-ಕ್ಕೂ ಕೋವಿಡ್-19 ಸಂಭವನೀಯ ಮೂರನೇ ಅಲೆ ಸಂಭವಿಸದಂತೆ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆರು, ಗ್ರಾಪಂ ಸಿಬ್ಬಂದಿ, ಪೊಲೀಸರು, ತಾಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ಮಾಡಬೇಡಿ ಎಂದು ಸೂಚಿಸಿದರು.

ಕರೊನಾ ಸೋಂಕಿನಿಂದ ಸಂಕಷ್ಟದಲ್ಲಿರುವ ಜನರಿಗೆ ಲಸಿಕೆ ಸಮರ್ಪಕವಾಗಿ ವಿತರಣೆ ಆಗುತ್ತಿಲ್ಲ. ಲಸಿಕೆ ಹಾಕುವುದರಲ್ಲಿ ತಾರತಮ್ಯ ಮಾಡುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆ. ಯಾವುದೇ ಕಾರಣಕ್ಕೂ ಬಡವರು, ಕೂಲಿ ಕಾರ್ಮಿಕರು ಲಸಿಕೆಯಿಂದ ವಂಚಿತರಾಗಬಾರದು. ಲಭ್ಯವಿರುವ ಲಸಿಕೆ ಎಲ್ಲರಿಗೂ ಸಮಾನವಾಗಿ ಹಂಚಿಕೆಯಾಗಬೇಕು. ಲಸಿಕೆಗಾ-ಗಿಯೇ ದಿನದ ಕೂಲಿ ಬಿಟ್ಟು ಕಾರ್ಮಿಕರು, ಬಡವರು ಅಲೆದಾಡುವಂತೆ ಮಾಡಬೇಡಿ. ಬಡ ಕುಟುಂಬಗಳನ್ನು ಗುರುತಿಸಿ ಲಸಿಕೆ ಹಾಕಿ. ಈ ವಿಷಯದಲ್ಲಿ ನಿರ್ಲಕ್ಷ್ಯ ಮಾಡಿದರೆ ನಾವು ಸುಮ್ಮನೆ ಇರುವುದಿಲ್ಲ ಎಂದು ಆರೋಗ್ಯ ಇಲಾಖೆಗೆ ಉಪ ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ ಎಚ್ಚರಿಸಿದರು.

### ಇಲಾಖೆಗಳಲ್ಲಿ ಭ್ರಷ್ಟಾಚಾರ ನಿಲ್ಲಬೇಕು

ಕೆರೆ, ಅರಣ್ಯ ಪ್ರದೇಶ ದೇಶದ ಸಂಪತ್ತು. ಅವುಗಳನ್ನು ರಕ್ಷಣೆ ಮಾಡುವುದು ಎಲ್ಲರ ಜವಾಬ್ದಾರಿ. ಕೆರೆಗಳ ಒತ್ತುವರಿ ತೆರವಿಗೆ ಯಾವ ಕ್ರಮ ಕೈಗೊಂಡಿದ್ದೀರಿ, ಎಷ್ಟು ಕೆರೆಗಳಿವೆ,ಅವುಗಳಲ್ಲಿ ಎಷ್ಟು ಒತ್ತುವರಿಯಾಗಿವೆ ಎಂಬುದರ ಕುರಿತು ಜಿಲ್ಲಾಡಳಿತ ಮಾಹಿತಿ ಸಲ್ಲಿಸಬೇಕು. ಇಲಾಖೆಗಳಲ್ಲಿ ಭ್ರಷ್ಟಾಚಾರ ನಿಲ್ಲಬೇಕು. ಒಂದು ಕೇಸ್ ಬಂದರೆ ಸಮಗ್ರ ತನಿಖೆ ನಡೆಸಿ ಕ್ರಮ ವಹಿಸಬೇಕಾಗುತ್ತದೆ. ನೆರೆ ಸಂತ್ರಸ್ತರಿಗೆ ನ್ಯಾಯುತವಾಗಿ ಪರಿಹಾರ ಕಲ್ಪಿಸಿ. ಪರಿಹಾರಕ್ಕಾಗಿ ಅಲೆದಾಡುವಂತೆ ಮಾಡಬೇಡಿ ಎಂದು ಅಧಿಕಾರಿಗಳಿಗೆ ಉಪ ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ ಸೂಚಿಸಿದರು.

— ಹಸಿರು ಕ್ರಾಂತಿ —


ದಿನಾಂಕ
08/08/2021

### ಕೋವಿಡ್ ಹಾಗೂ ಪ್ರವಾಹ ನಿರ್ವಹಣೆ ಕುರಿತು ಪರಿಶೀಲನಾ ಸಭೆ

# ಮಕ್ಕಳು ಹಾಗೂ ಪರಿಸರ ಸಂರಕ್ಷಣೆ ನಮ್ಮೆಲ್ಲರ ಮೂಲ ಕರ್ತವ್ಯ: ಬಿ.ಎಸ್.ಪಾಟೀಲ್

ಬೆಳಗಾವಿ ಆ.,7– ಸಂಭಾವ್ಯ ಕೋವಿಡ್–19ರ ಮೂರನೇ ಅಲೆಯು ಮಕ್ಕಳ ಮೇಲೆ ಪರಿಣಾಮ ಬೀರಲಿದೆ ಎಂಬ ಮಾಹಿತಿ ಇದೆ. ಮಕ್ಕಳೇ ನಾಳಿನ ಭವಿಷ್ಯ ಹಾಗೂ ಅವರನ್ನು ಕಾಪಾಡಿಕೊಳ್ಳುವುದು ನಮ್ಮ ಕರ್ತವ್ಯವಾಗಿದೆ. ಜೊತೆಗೆ ಪ್ರವಾಹ ಪರಿಸ್ಥಿತಿಯನ್ನೂ ಎದುರಿಸಲು ಎಲ್ಲ ಅಧಿಕಾರಿಗಳು ಹೆಚ್ಚಿನ ಶ್ರಮ ವಹಿಸಬೇಕು ಎಂದು ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ಎಸ್.ಪಾಟೀಲ್ ತಿಳಿಸಿದರು. ಜಿಲ್ಲಾ ಪಂಚಾಯತ ಕಾರ್ಯಾಲಯದ ಸಭಾಂಗಣದಲ್ಲಿ ಶನಿವಾರ (ಆ.07) ನಡೆದ ಕೋವಿಡ್–19ರ ನಿರ್ವಹಣೆ ಹಾಗೂ ಅತಿವೃಷ್ಟಿ / ಪ್ರವಾಹ ಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳಗಾವಿ ಜಿಲ್ಲೆಯು ಹಲವು ವೈಶಿಷ್ಟ್ಯಗಳನ್ನು ಹೊಂದಿದೆ. ಅದು ವರ ಹಾಗೂ ಶಾಪವೂ ಆಗಿದೆ. ಜಿಲ್ಲೆಯ ಜನರು ಕೋವಿಡ್ ಜೊತೆಗೆ ಪ್ರವಾಹವನ್ನು ಕೂಡ ಎದುರಿಸುವ ದುಸ್ಥಿತಿ ಎದುರಾಗಿದೆ. ಗಡಿ ಜಿಲ್ಲೆಯಾಗಿರುವುದರಿಂದ ಮುನ್ನೆಚ್ಚರಿಕೆ



ಅಗತ್ಯವಾಗಿದೆ.

ಕೋವಿಡ್ ಹಾಗೂ ಪ್ರವಾಹ ಇವು ಒಂದೆರಡು ದಿನಗಳಿಗೆ ಸೀಮಿತವಾದ ಸಮಸ್ಯೆಗಳಲ್ಲ. ಇವುಗಳ ವಿರುದ್ಧ ಹೋರಾಡುವ ಮನಸ್ಥಿತಿಯನ್ನು ನಾವು ಹೊಂದಬೇಕು. ಸಮಸ್ಯೆ ಇಲ್ಲದಾಗಲೂ ಜಾಗೃತೆ ವಹಿಸಬೇಕು. ಕೋವಿಡ್ ನಿಂದ ಹಲವಾರು ಜನರನ್ನು ನಾವು ಕಳೆದುಕೊಂಡಿದ್ದೇವೆ. ಇದೊಂದು ಪಾಠವಾಗಬೇಕು ಎಂದು ಅವರು ತಿಳಿಸಿದರು.

ಕೋವಿಡ್ –19 ಕುರಿತು ಜಾಗೃತಿ ಮುಖ್ಯ : ಕೋವಿಡ್ ಕುರಿತು ಜಾಗೃತಿ ಮೂಡಿಸುವುದು ಅತಿ ಮುಖ್ಯವಾಗಿದೆ. ಪ್ರಮುಖವಾಗಿ ಹಳ್ಳಿಗಳಲ್ಲಿ ಕೋವಿಡ್ ನ ಮಾಹಿತಿಯ ಕೊರತೆ ಇದೆ. ಆದ್ದರಿಂದ ಪಿ.ಡಿ.ಓ., ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಒಳಗೊಂಡಂತೆ ಟಾಸ್ಕ್ ಫೋರ್ಸ್ ರಚಿಸಿ, ಜನರಲ್ಲಿ ಜಾಗೃತಿ ಮೂಡಿಸಬೇಕು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ವತಿಯಿಂದ ಮಕ್ಕಳಿಗೆ ಸ್ವಚ್ಛತೆ ಹಾಗೂ ಆರೋಗ್ಯದ ಕುರಿತು ಜಾಗೃತಿ ಮೂಡಿಸಲು ತಾಲ್ಲೂಕು ಅಥವಾ ಪಂಚಾಯತ ಮಟ್ಟದಲ್ಲಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು.

ಗಡಿ ಜಿಲ್ಲೆಯಲ್ಲಿ ಕೊರೊನಾ ಹರಡುತ್ತಿದ್ದು ಬೇರೆ ರಾಜ್ಯದಿಂದ ಸೋಂಕು ಹರಡದಂತೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಸೂಕ್ತ ಹಾಗೂ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಲ್ಲದೇ, ಬೆಳಗಾವಿ ಗಡಿ ಜಿಲ್ಲೆ ಆಗಿರುವುದರಿಂದ ಹೆಚ್ಚಿನ ಲಸಿಕೆ ಪೂರೈಕೆಗೆ ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದು ನ್ಯಾಯಮೂರ್ತಿಗಳು ..(6ನೇ ಪುಟಕ್ಕೆ)

- ಸೈಮಂತೋಲಾ -

ದಿನಾಂಕ
08/08/2021

Issue-287 Sunday 08 AUGUST 2021 ▸ Page 6 ▸ Price Re. 1

## ಕೋವಿಡ್ ಹಾಗೂ ಪ್ರವಾಹ ನಿರ್ವಹಣೆ ಕುರಿತು ಪರೀಶಿಲನಾ ಸಭೆ

# ಮಕ್ಕಳು ಹಾಗೂ ಪರಿಸರ ಸಂರಕ್ಷಣೆ ನಮ್ಮೆಲ್ಲರ ಮೂಲ ಕರ್ತವ್ಯ: ಉಪ ಲೋಕಾಯುಕ್ತ ಬಿ.ಎಸ್.ಪಾಟೀಲ್



ಬೆಳಗಾವಿ, ಆ., 07: ಸಂಭಾವ್ಯ ಕೋವಿಡ್-19ರ ಮೂರನೇ ಅಲೆಯು ಮಕ್ಕಳ ವೆ ೆ ಪರಿಣಾಮ ಬೀರಲಿದೆ ಎಂಬ ಮಾಹಿತಿ ಇದೆ. ಮಕ್ಕಳೇ ನಾಳಿನ ಭವಿಷ್ಯ ಹಾಗೂ ಅವರನ್ನು ಕಾ ಾಡಿಕೊಳ್ಳುವುದು ನಮ್ಮ ಕರ್ತವ್ಯವಾಗಿದೆ. ಜೊತೆಗೆ ಪ್ರವಾಹ ಪರಿಸ್ಥಿತಿಯನ್ನೂ ಎದುರಿಸಲು ಎ_ ಅಧಿಕಾರಿಗಳು ಹೆಚ್ಚಿನ ಶ್ರಮ ವಹಿಸಬೇಕು ಎಂದು ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ಎಸ್.ಪಾಟೀಲ್ ತಿಳಿಸಿದರು.

ಜಿಲ್ಲಾ ಪಂಚಾಯತ ಕಾರ್ಯಲಯದ ಸಭಾಂಗಣದಲ್ಲಿ ಶನಿವಾರ (ಆ.07) ನಡೆದ ಕೋವಿಡ್-19ರ ನಿರ್ವಹಣೆ ಹಾಗೂ ಅತಿವೃಷ್ಟಿ / ಪ್ರವಾಹ ಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳಗಾವಿ ಜಿಲ್ಲೆಯು ಹಲವು ವೈಶಿಷ್ಟ್ಯಗಳನ್ನು ಹೊಂದಿದೆ. ಅದು ವರ ಹಾಗೂ ಶಾಪವೂ ಆಗಿದೆ. ಜಿಲ್ಲೆಯ ಜನರು ಕೋವಿಡ್ ಜೊತೆಗೆ ಪ್ರವಾಹವನ್ನು ಕೂಡ ಎದುರಿಸುವ ದುಸ್ಥಿತಿ ಎದುರಾಗಿದೆ. ಗಡಿ ಜಿಲ್ಲೆಯಾಗಿರುವುದರಿಂದ ಮುನ್ನೆಚ್ಚರಿಕೆ ಅಗತ್ಯವಾಗಿದೆ.

ಕೋವಿಡ್ ಹಾಗೂ ಪ್ರವಾಹ ಇವು ಒಂದೆರಡು ದಿನಗಳಿಗೆ ಸೀಮಿತವಾದ ಸಮಸ್ಯೆಗಳಲ್ಲ. ಇವುಗಳ ವಿರುದ್ಧ ಹೋರಾಡುವ ಮನಸ್ಥಿತಿಯನ್ನು ನಾವು ಹೊಂದಬೇಕು. ಸಮಸ್ಯೆ ಇಲ್ಲದಾಗಲೂ ಜಾಗೃತೆ ವಹಿಸಬೇಕು. ಕೋವಿಡ್ ನಿಂದ ಹಲವಾರು ಜನರನ್ನು ನಾವು ಕಳೆದುಕೊಂಡಿದ್ದೇವೆ. ಇದೊಂದು ಪಾಠವಾಗಬೇಕು ಎಂದು ಅವರು ತಿಳಿಸಿದರು.

**ಕೋವಿಡ್ -19 ಕುರಿತು ಜಾಗೃತಿ ಮುಖ್ಯ :** ಕೋವಿಡ್ ಕುರಿತು ಜಾಗೃತಿ ಮೂಡಿಸುವುದು ಅತಿ ಮುಖ್ಯವಾಗಿದೆ. ಪ್ರಮುಖವಾಗಿ ಹಳ್ಳಿಗಳಲ್ಲಿ ಕೋವಿಡ್ ನ ಮಾಹಿತಿಯ ಕೊರತೆ ಇದೆ. ಆದ್ದರಿಂದ ಪಿ.ಡಿ.ಒ, ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಒಳಗೊಂಡಂತೆ ಟಾಸ್ಕ್ ಫೋರ್ಸ್ ರಚಿಸಿ, ಜನರಲ್ಲಿ ಜಾಗೃತಿ ಮೂಡಿಸಬೇಕು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ವತಿಯಿಂದ ಮಕ್ಕಳಿಗೆ ಸ್ವಚ್ಛತೆ ಹಾಗೂ ಆರೋಗ್ಯದ ಕುರಿತು ಜಾಗೃತಿ ಮೂಡಿಸಲು ತಾಲ್ಲೂಕು ಅಥವಾ ಪಂಚಾಯತ ಮಟ್ಟದಲ್ಲಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು. ಗಡಿ ಜಿಲ್ಲೆಯಲ್ಲಿ ಕೊರೊನಾ ಹರಡುತ್ತಿದ್ದು ಬೇರೆ ರಾಜ್ಯದಿಂದ ಸೋಂಕು ಹರಡದಂತೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಸೂಕ್ತ ಹಾಗೂ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಲ್ಲದೇ, ಬೆಳಗಾವಿ ಗಡಿ ಜಿಲ್ಲೆ ಆಗಿರುವುದರಿಂದ ಹೆಚ್ಚಿನ ಲಸಿಕೆ ಪೂರೈಕೆಗೆ ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದು ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ಎಸ್.ಪಾಟೀಲ್ ತಿಳಿಸಿದರು.

**ನೆರೆಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಿ :** ಪ್ರವಾಹದಲ್ಲಿ ನೊಂದು ಮನೆ, ಜಾನುವಾರು ಹಾಗೂ ಬೆಳೆ ಕಳೆದುಕೊಂಡ ಜನರಿಗೆ ಅನುದಾನದಲ್ಲಿ ವಿಳಂಬ ಮಾಡದೆ, ಸಕಾಲದಲ್ಲಿ ಲೋಪವಿಲ್ಲದೆ ತಲುಪಿಸುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು.

ನೆರೆಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಲು ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದರು. ತಜ್ಞರನ್ನು ಹುಡುಕಿ ಅದರ ಕುರಿತು ಸೂಕ್ತ ಕ್ರಮಗಳನ್ನು (**ಕೊನೆಯ ಪುಟಕ್ಕೆ**)

## ಮಕ್ಕಳು ಹಾಗೂ ಪರಿಸರ ಸಂರಕ್ಷಣೆ ನಮ್ಮೆಲ್ಲರ ಮೂಲ ಕರ್ತವ್ಯ: ಎಸ್.ಪಾಟೀ

ಕೈಗೊಳ್ಳಬೇಕು ಎಂದು ಹೇಳಿದರು.


**ಶೌಚಾಲಯಗಳ ಸದುಪಯೋಗವಾಗಲಿ:** ಬಯಲು ಶೌ ಮುಕ್ತ ದೇಶ ಎಂದು ಹೇಳುತ್ತೇವೆ. ಆದರೆ ಹಳ್ಳಿಗಳಲ್ಲಿ ಸರ್ಕಾ ಅನುದಾನದಿಂದ ಶೌಚಾಲಯಗಳನ್ನು ನಿರ್ಮಿಸಿ, ಅವುಗಳ ಬಳಸದೇ ಇರುವುದನ್ನು ಗಮನಿಸಲಾಗಿದೆ. ಆದ್ದರಿಂದ ಎಲ್ಲಾ ಗ್ರಾ ಪಂಚಾಯತಿ ಅಧಿಕಾರಿಗಳು ಅದರ ಕುರಿತಂತೆ ಮಾಹಿತಿಯನ್ನು ಹಾಕಬೇಕು ಹಾಗೂ ಸೌಲಭ್ಯ ಪಡೆದುಕೊಂಡು ಅದನ್ನು ಬಳಸ ಇರುವ ಜನರ ವಿರುದ್ಧ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚ ನೀಡಿದರು.

**ಕೆರೆಗಳ ಸಂರಕ್ಷಣೆ ಕುರಿತು ವರದಿ ಸಲ್ಲಿಸಲು ಸೂಚನೆ :** ಕೆರೆಗಳು, ಕಾಡು ಹಾಗೂ ವನ್ಯ ಜೀವಿಗಳು ದೇಶದ ಸಂಪ ಇವು ಮುಂದಿನ ಪೀಳಿಗೆಗೆ ನಾವು ನೀಡುವ ಕೊಡುಗೆಗಳಾಗಿ ಜಿಲ್ಲೆಯಲ್ಲಿರುವ ಕೆರೆಗಳ ಸಂಖ್ಯೆ, ಅಭಿವೃದ್ಧಿಪಡಿಸಲಾದ ಕೆರೆ ಮಾಹಿತಿ ಹಾಗೂ ಜೀರ್ಣೋದ್ಧಾರವಾಗಬೇಕಿರುವ ಕೆರೆಗಳ ಅ ಅಂಶಗಳ ಪಟ್ಟಿ ಮಾಡಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ

**ಅಧಿಕಾರಿಗಳು ಕರ್ತವ್ಯ ನಿಷ್ಠೆ ಪಾಲಿಸಬೇಕು:** ಕೋವಿ ಹಿನ್ನಲೆ ಸರಕಾರವು ಆರ್ಥಿಕ ಸಂಕಷ್ಟ ಅನುಭವಿಸುತ್ತಿದೆ. ಆದ ಸರಕಾರಿ ಕೆಲಸ ಮಾಡುವ ಎಲ್ಲಾ ಅಧಿಕಾರಿಗಳಲ್ಲಿ ವೇತನ ಯಾವುದೇ ರೀತಿಯ ತಡೆ ಹಿಡಿದಿಲ್ಲ ಹಾಗೂ ಯಾವ ಸೌಲಭ್ಯಗ ಕೊರತೆ ಮಾಡಿಲ್ಲ.ಆದ್ದರಿಂದ ನಮ್ಮ ಅಧಿಕಾರದಲ್ಲಿ ಯಾವುದೇ ರೀತಿ ಕೊರತೆ ಆಗಬಾರದು ಅದು ನಮ್ಮ ಮೂಲಭೂತ ಕರ್ತವ್ಯವಾಗಿ

ಸ್ಥಳ ಪರಿಶೀಲನೆ: —

# ಪ್ರವಾಹ ಪೀಡಿತ ಖಾನಾಪೂರ ತಾಲೂಕಿಗೆ ಉಪಲೋಕಾಯುಕ್ತರ ಭೇಟಿ



ಬೆಳಗಾವಿ : ಖಾನಾಪೂರ ತಾಲೂಕಿನ ಪ್ರದೇಶದಲ್ಲಿ ಅತೀಯಾಗಿ ಸುರಿದ ಮಳೆಯಿಂದ ಸಾರ್ವಜನಿಕ ಆಸ್ತಿ, ನದಿಹಳ್ಳ, ಸೇತುವೆಗಳು ಪ್ರವಾಹಕ್ಕೆ ಹಾನಿಗೊಂಡ ಪ್ರದೇಶಗಳಿಗೆ ಲೋಕಾಯುಕ್ತ ಉಪನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಶನಿವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಖಾನಾಪೂರ ಪಟ್ಟಣದ ಮಾರುತಿ ನಗರದದಲ್ಲಿರುವ ಹೊಸ ಮಲಪ್ರಭಾ ಸೇತುವೆ, ಮಲಪ್ರಭಾ ನದಿ ದಡದಲ್ಲಿರುವ ರುಮೇವಾಡಿ ಗ್ರಾಮದ ರಸ್ತೆ ದುರಸ್ತಿ ಬಗ್ಗೆ ವೀಕ್ಷಣೆ, ಮನೆಯೊಳಗೆ ನೀರು ನುಗ್ಗಿ ಹಾನಿಯಾದ ಬಗ್ಗೆ, ತಿವೋಲಿ, ನೆಸರಾ ರಸ್ತೆಯ ಕಲ್ವರ್ಟ ಹಾಲತ್ರಿ ನಾಲಾ, ತಾಲೂಕಿನ ಕುಂಬಾರಹಳ್ಳ ದಡದಲ್ಲಿರುವ ಪೊಲೀಸ್ ತರಬೇತಿ ಶಾಲೆಯ ಕೋಣೆಯೊಳಗೆ ನೀರು ನುಗ್ಗಿ ಹಾನಿಯಾದ ಸ್ಥಳಗಳಿಗೆ ಭೇಟಿ ನೀಡಿ ಈ ಸಂದರ್ಭದಲ್ಲಿ ಪರಿಶೀಲನೆ ನಡೆಸಿದರು.

ಈ ವೇಳೆಯಲ್ಲಿ ಜಿಲ್ಲಾಧಿಕಾರಿ ಮಹಾಂತೇಶ ಹಿರೇಮಠ, ಖಾನಾಪೂರ ತಹಶೀಲ್ದಾರ್ ರೇಷ್ಮಾ ತಾಳಿಕೋಟಿ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದು, ತಾಲೂಕಿನಲ್ಲಿ ಪ್ರವಾಹದಿಂದ ಆಗಿರುವ ಹಾನಿಯ ಕುರಿತು ಉಪಲೋಕಾಯುಕ್ತ ಬಿ.ಎಸ್.ಪಾಟೀಲ್ ಅವರಿಗೆ ಮಾಹಿತಿ ನೀಡಿದರು.

— ಲೋಕದರ್ಶನ —

ದಿನಾಂಕ 08/08/2021

# ಮಕ್ಕಳು,ಪರಿಸರ ಸಂರಕ್ಷಣೆ ನಮ್ಮೆಲ್ಲರ ಮೂಲ ಕರ್ತವ್ಯ: ಪಾಟೀಲ್



ಬೆಳಗಾವಿ,07: ಸಂಭಾವ್ಯ ಕೋವಿಡ್-19ರ ಮೂರನೇ ಅಲೆಯು ಮಕ್ಕಳ ಮೇಲೆ ಪರಿಣಾಮ ಬೀರಲಿದೆ ಎಂಬ ಮಾಹಿತಿ ಇದೆ. ಮಕ್ಕಳೇ ನಾಳಿನ ಭವಿಷ್ಯ ಹಾಗೂ ಅವರನ್ನು ಕಾಪಾಡಿಕೊಳ್ಳುವುದು ನಮ್ಮ ಕರ್ತವ್ಯವಾಗಿದೆ. ಜೊತೆಗೆ ಪ್ರವಾಹ ಪರಿಸ್ಥಿತಿಯನ್ನೂ ಎದುರಿಸಲು ಎಲ್ಲ ಅಧಿಕಾರಿಗಳು ಹೆಚ್ಚಿನ ಶ್ರಮ ವಹಿಸಬೇಕು ಎಂದು ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತ ಬಿ.ಎಸ್.ಪಾಟೀಲ್ ತಿಳಿಸಿದರು.

ಜಿಲ್ಲಾ ಪಂಚಾಯತ ಕಾರ್ಯಾಲಯದ ಸಭಾಂಗಣದಲ್ಲಿ ಶನಿವಾರ (ಆ.07) ನಡೆದ ಕೋವಿಡ್-19ರ ನಿರ್ವಹಣೆ ಹಾಗೂ ಅತಿವೃಷ್ಟಿ / ಪ್ರವಾಹ ಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳಗಾವಿ ಜಿಲ್ಲೆಯು ಹಲವು ವೈಶಿಷ್ಟ್ಯಗಳನ್ನು ಹೊಂದಿದೆ. ಅದು ವರ ಹಾಗೂ ಶಾಪವೂ ಆಗಿದೆ. ಜಿಲ್ಲೆಯ ಜನರು ಕೋವಿಡ್ ಜೊತೆಗೆ ಪ್ರವಾಹವನ್ನು ಕೂಡ ಎದುರಿಸುವ ದುಸ್ಥಿತಿ ಎದುರಾಗಿದೆ. ಗಡಿ ಜಿಲ್ಲೆಯಾಗಿರುವುದರಿಂದ ಮುನ್ನೆಚ್ಚರಿಕೆ ಅಗತ್ಯವಾಗಿದೆ.

ಕೋವಿಡ್ ಹಾಗೂ ಪ್ರವಾಹ ಇವು ಒಂದೆರಡು ದಿನಗಳಿಗೆ ಸೀಮಿತವಾದ ಸಮಸ್ಯೆಗಳಲ್ಲ. ಇವುಗಳ ವಿರುದ್ಧ ಹೋರಾಡುವ ಮನಸ್ಥಿತಿಯನ್ನು ನಾವು ಹೊಂದಬೇಕು. ಸಮಸ್ಯೆ ಇಲ್ಲದಾಗಲೂ ಜಾಗೃತೆ ವಹಿಸಬೇಕು. ಕೋವಿಡ್ ನಿಂದ ಹಲವಾರು ಜನರನ್ನು ನಾವು ಕಳೆದುಕೊಂಡಿದ್ದೇವೆ. ಇದೊಂದು ಪಾಠವಾಗಬೇಕು ಎಂದು ಅವರು ತಿಳಿಸಿದರು.

**ಕೋವಿಡ್ -19 ಕುರಿತು ಜಾಗೃತಿ ಮುಖ್ಯ :**

ಕೋವಿಡ್ ಕುರಿತು ಜಾಗೃತಿ ಮೂಡಿಸುವುದು ಅತಿ ಮುಖ್ಯವಾಗಿದೆ. ಪ್ರಮುಖವಾಗಿ ಹಳ್ಳಿಗಳಲ್ಲಿ ಕೋವಿಡ್ ನ ಮಾಹಿತಿಯ ಕೊರತೆ ಇದೆ. ಆದ್ದರಿಂದ ಪಿ.ಡಿ.ಒ., ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಒಳಗೊಂಡಂತೆ ಟಾಸ್ಕ್ ಫೋರ್ಸ್ ರಚಿಸಿ, ಜನರಲ್ಲಿ ಜಾಗೃತಿ ಮೂಡಿಸಬೇಕು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ವತಿಯಿಂದ ಮಕ್ಕಳಿಗೆ ಸ್ವಚ್ಛತೆ ಹಾಗೂ ಆರೋಗ್ಯದ ಕುರಿತು ಜಾಗೃತಿ ಮೂಡಿಸಲು ತಾಲ್ಲೂಕು ಅಥವಾ ಪಂಚಾಯತ ಮಟ್ಟದಲ್ಲಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು.

ಗಡಿ ಜಿಲ್ಲೆಯಲ್ಲಿ ಕೊರೊನಾ ಹರಡುತ್ತಿದ್ದು ಬೇರೆ ರಾಜ್ಯದಿಂದ ಸೋಂಕು ಹರಡದಂತೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಸೂಕ್ತ ಹಾಗೂ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಲ್ಲದೇ, ಬೆಳಗಾವಿ ಗಡಿ ಜಿಲ್ಲೆ ಆಗಿರುವುದರಿಂದ ಹೆಚ್ಚಿನ ಲಸಿಕೆ ಪೂರೈಕೆಗೆ ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದು ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ಎಸ್.ಪಾಟೀಲ್ ತಿಳಿಸಿದರು.

ನೆರೆಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಿ :

ಪ್ರವಾಹದಲ್ಲಿ ನೊಂದು ಮನೆ, ಜಾನುವಾರು ಹಾಗೂ ಬೆಳೆ ಕಳೆದುಕೊಂಡ ಜನರಿಗೆ ಅನುದಾನದಲ್ಲಿ ವಿಳಂಬ ಮಾಡದೆ, ಸಕಾಲದಲ್ಲಿ ಲೋಪವಿಲ್ಲದೆ ತಲುಪಿಸುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು.

ನೆರೆಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಲು ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದರು. ತಜ್ಞರನ್ನು ಹುಡುಕಿ ಅದರ ಕುರಿತು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು.

**ಶೌಚಾಲಯಗಳ ಸದುಪಯೋಗವಾಗಲಿ:**

ಬಯಲು ಶೌಚ ಮುಕ್ತ ದೇಶ ಎಂದು ಹೇಳುತ್ತೇವೆ. ಆದರೆ ಹಳ್ಳಿಗಳಲ್ಲಿ ಸರ್ಕಾರದ ಅನುದಾನದಿಂದ ಶೌಚಾಲಯಗಳನ್ನು ನಿರ್ಮಿಸಿ, ಅವುಗಳನ್ನು ಬಳಸದೇ ಇರುವುದನ್ನು ಗಮನಿಸಲಾಗಿದೆ. ಆದ್ದರಿಂದ ಎಲ್ಲಾ ಗ್ರಾಮ ಪಂಚಾಯತಿ ಅಧಿಕಾರಿಗಳು ಅದರ ಕುರಿತಂತೆ ಮಾಹಿತಿಯನ್ನು ಕಲೆ ಹಾಕಬೇಕು ಹಾಗೂ ಸೌಲಭ್ಯ ಪಡೆದುಕೊಂಡು ಅದನ್ನು ಬಳಸದೇ ಇರುವ ಜನರ ವಿರುದ್ಧ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೆರೆಗಳ ಸಂರಕ್ಷಣೆ ಕುರಿತು ವರದಿ ಸಲ್ಲಿಸಲು ಸೂಚನೆ :

ಕೆರೆಗಳು, ಕಾಡು ಹಾಗೂ ವನ್ಯ ಜೀವಿಗಳು ದೇಶದ ಸಂಪತ್ತು.ಇವು ಮುಂದಿನ ಪೀಳಿಗೆಗೆ ನಾವು ನೀಡುವ ಕೊಡುಗೆಗಳಾಗಿವೆ. ಜಿಲ್ಲೆಯಲ್ಲಿರುವ ಕೆರೆಗಳ ಸಂಖ್ಯೆ, ಅಭಿವೃದ್ಧಿಪಡಿಸಲಾದ ಕೆರೆಗಳ ಮಾಹಿತಿ ಹಾಗೂ ಜೀರ್ಣೋದ್ಧಾರವಾಗಬೇಕಿರುವ ಕೆರೆಗಳ ಅಂಕಿ ಅಂಶಗಳ ಪಟ್ಟಿ ಮಾಡಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಅಧಿಕಾರಿಗಳು ಕರ್ತವ್ಯ ನಿಷ್ಠೆ ಪಾಲಿಸಬೇಕು:**

ಕೋವಿಡ್ ಹಿನ್ನಲೆ ಸರಕಾರವು ಆರ್ಥಿಕ ಸಂಕಷ್ಟ ಅನುಭವಿಸುತ್ತಿದೆ. ಆದರೂ ಸರಕಾರಿ ಕೆಲಸ ಮಾಡುವ ಎಲ್ಲಾ ಅಧಿಕಾರಿಗಳಲ್ಲಿ ವೇತನದಲ್ಲಿ ಯಾವುದೇ ರೀತಿಯ ತಡೆ ಹಿಡಿದಿಲ್ಲ ಹಾಗೂ ಯಾವ ಸೌಲಭ್ಯಗಳಲ್ಲಿ ಕೊರತೆ ಮಾಡಿಲ್ಲ.ಆದ್ದರಿಂದ ನಮ್ಮ ಅಧಿಕಾರದಲ್ಲಿ ಯಾವುದೇ ರೀತಿಯ ಕೊರತೆ ಆಗಬಾರದು ಅದು ನಮ್ಮ ಮೂಲಭೂತ ಕರ್ತವ್ಯವಾಗಿದೆ.

ಜನರ ಮೇಲೆ ಕಾಳಜಿ, ಗೌರವ ಇರಬೇಕು ಹಾಗೂ ಹಳ್ಳಿ ಜನರ ಪ್ರೀತಿ ವಿಶ್ವಾಸ ಬೆಳೆಸಿಕೊಳ್ಳುವ ಕೆಲಸವನ್ನು ಮಾಡಬೇಕು.

ಹಿಂದೆ ಮಾಡಿದ ತಪ್ಪುಗಳನ್ನು ಪಾಠವೆಂದು ಪರಿಗಣಿಸಿ ಮುಂಜಾಗೃತೆ ಹಾಗೂ ಪೂರ್ವ ಸಿದ್ಧತೆಯೊಂದಿಗೆ ಕೆಲಸವನ್ನು ಮಾಡಬೇಕು. ಇದರಿಂದ ಮಾತ್ರ ನಾವು ನಮ್ಮ ಕೆಲಸದಲ್ಲಿ ಪ್ರಗತಿ ಸಾಧಿಸಲು ಸಾಧ್ಯ. ಸಂವಿಧಾನದಲ್ಲಿರುವ ಮೂಲಭೂತ ಕರ್ತವ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಯಾವುದೇ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿದ್ದರೂ ಆ ಕ್ಷೇತ್ರದಲ್ಲಿ ಪರಿಣಿತರಾಗಬೇಕು ಎಂದು ಅವರು ತಿಳಿಸಿದರು.

**ಭ್ರಷ್ಟಾಚಾರ ತಡೆಗಟ್ಟಲು ಲೋಕಾಯುಕ್ತ ಸದಾ ಸಿದ್ಧ :**

ಲೋಕಾಯುಕ್ತ ಎಂಬ ಸಂಸ್ಥೆ ದಕ್ಷ ಆಡಳಿತ ನಡೆಸಲು ನಿರ್ಮಾಣ ಗೊಂಡಿದ್ದು, ಭ್ರಷ್ಟಾಚಾರ ತಡೆಗಟ್ಟುವುದು ಹಾಗೂ ಸ್ವಚ್ಛ ಆಡಳಿತ ಜಾರಿಗೆ ತರುವುದು ಈ ಸಂಸ್ಥೆಯ ಉದ್ದೇಶವಾಗಿದೆ.

ಭ್ರಷ್ಟಾಚಾರದ ಕುರಿತು ಲೋಕಾಯುಕ್ತದ ಗಮನಕ್ಕೆ ಬಂದಲ್ಲಿ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಎಂ.ಜಿ.ಹಿರೇಮಠ ಕೋವಿಡ್ -19 ನಿರ್ವಹಣೆ ಹಾಗೂ ಅತಿವೃಷ್ಟಿ / ಪ್ರವಾಹ ಪರಿಸ್ಥಿತಿ ಕುರಿತು ಸಮಗ್ರ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 7 ನದಿಗಳಿದ್ದು, 14 ತಾಲ್ಲೂಕುಗಳ 201 ಗ್ರಾಮಗಳು ಪ್ರವಾಹಕ್ಕೆ ತುತ್ತಾಗಿವೆ. ಪ್ರವಾಹದಲ್ಲಿ ಸಿಲುಕಿದ್ದ 1,50,015 ಜನರನ್ನು ಹಾಗೂ 67,329 ಜಾನುವಾರುಗಳನ್ನು ರಕ್ಷಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 03 ಜನ 59 ಜಾನುವಾರು ಮರಣ ಹೊಂದಿವೆ.

1,19,422 ಹೆಕ್ಟೇರ್ ಕೃಷಿ ಹಾಗೂ ತೋಟಗಾರಿಕಾ ಪ್ರದೇಶದಲ್ಲಿ ಪ್ರವಾಹದಿಂದ ಬೆಳೆ ಹಾನಿ ಆಗಿದೆ. 324 ಮನೆಗಳು ಪೂರ್ಣ ಪ್ರಮಾಣದಲ್ಲಿ ಹಾಗೂ 5,003 ಭಾಗಶಃ ಹಾನಿಗೊಳಗಾಗಿವೆ ಎಂದು ಮಾಹಿತಿ ನೀಡಿದರು.

ಕಾಳಜಿ ಕೇಂದ್ರಗಳಲ್ಲಿ ಆರೋಗ್ಯ ಸಿಬ್ಬಂದಿ ನಿಯೋಜಿಸಿ, ಉತ್ತಮ ಗುಣಮಟ್ಟದ ಆಹಾರದ ವ್ಯವಸ್ಥೆ ಮಾಡಲಾಗಿದೆ. ನೆರೆ ಸಂತ್ರಸ್ತರಿಗೆ ನೇರವಾಗಿ ಆರ್ಟಿ.ಜಿ.ಎಸ್. ಮೂಲಕ ಅವರ ಬ್ಯಾಂಕ್ ಖಾತೆಗಳಿಗೆ ಪರಿಹಾರ ಹಣ ಜಮೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಎಂ.ಜಿ.ಹಿರೇಮಠ ವಿವರಿಸಿದರು.

